23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 335 | ನವದೆಹಲಿ | ಬೆಲೆ ₹ 10 | ಜೂನ್ 10, 2026, ಬುಧವಾರ



23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜೂನ್ 10, 2026, ಬುಧವಾರ

## ಒಳಪುಟಗಳಲ್ಲಿ

ಪ್ರತಿಪಕ್ಷ ನಾಯಕರ ಭೇಟಿ ಹಿಂದಿದೆ ರಾಜಕೀಯ ತಂತ್ರ ಸಿಎಂ ಡಿ.ಕೆ. ಶಿವಕುಮಾರ್ ನಡೆಗೆ ಎಚ್‌ಡಿಕೆ ವ್ಯಂಗ್ಯ- ಪು.4

ಆಸ್ತಿ ತೆರಿಗೆ ಸಂಗ್ರಹದಲ್ಲಿ ಗಮನಾರ್ಹ ಸಾಧನೆ: ಆರ್ಥಿಕ ವರ್ಷದ 3 ತಿಂಗಳಲ್ಲಿ 2,933 ಕೋಟಿ ರೂ. ಸಂಗ್ರಹ- ಪು.5

# ಉಜ್ವಲ ಯೋಜನೆ ಸಬ್ಸಿಡಿ ಸಿಲಿಂಡರ್‌ಗಳ ಸಂಖ್ಯೆ 9ರಿಂದ 4ಕ್ಕೆ ಇಳಿಕೆ

**ನವದೆಹಲಿ, ಜೂ.9: ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳಿಗೆ ಪ್ರತಿವರ್ಷ ನೀಡಲಾಗುತ್ತಿದ್ದ ವಾರ್ಷಿಕ ಸಬ್ಸಿಡಿ ಸಿಲಿಂಡರ್‌ಗಳ ಸಂಖ್ಯೆಯನ್ನು 9ರಿಂದ 4ಕ್ಕೆ ಕಡಿತಗೊಳಿಸಿದೆ.**

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಸಂಘರ್ಷ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಎಲ್‌ಪಿಜಿ ಕೊರತೆಯಿಂದಾಗಿ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ.

2016ರಲ್ಲಿ ಯೋಜನೆ ಆರಂಭವಾದಾಗ ವರ್ಷಕ್ಕೆ 12 ಸಿಲಿಂಡರ್ ನೀಡಲಾಗುತ್ತಿತ್ತು. ಕಳೆದ ವರ್ಷ ಇದನ್ನು 9ಕ್ಕೆ ಇಳಿಸಲಾಗಿತ್ತು. ಈಗ ಅದನ್ನು ಮತ್ತೆ 4ಕ್ಕೆ ಕಡಿಮೆ ಮಾಡಲಾಗಿದೆ. 14.2 ಕೆಜಿ ಸಿಲಿಂಡರ್‌ಗೆ ಸಿಗುವ 300 ರೂ. ಸಬ್ಸಿಡಿ ಮುಂದುವರಿಯಲಿದೆ. ಈ ಹಣ ನೇರವಾಗಿ ಗ್ರಾಹಕರ ಬ್ಯಾಂಕ್ ಖಾತೆಗೆ ಜಮೆ ಆಗಲಿದೆ.

ಗೃಹ ಬಳಕೆಯ ಗ್ಯಾಸ್ ಸಿಲಿಂಡರ್ ಬೆಲೆ 942 ರೂ.ಗೆ ಏರಿಕೆಯಾಗಿದೆ. ಹೀಗಾಗಿ 300 ರೂ. ಸಬ್ಸಿಡಿ ಕಡಿತದ ನಂತರ ಉಜ್ವಲ ಗ್ರಾಹಕರು ಪ್ರತಿ ಸಿಲಿಂಡರ್‌ಗೆ 642 ರೂ. ಪಾವತಿಸಬೇಕಾಗುತ್ತದೆ. ಉಜ್ವಲ ಯೋಜನೆಯಡಿ ಬರುವ ಬಡ ಕುಟುಂಬಗಳು ವರ್ಷಕ್ಕೆ ಸರಾಸರಿ 4 ಸಿಲಿಂಡರ್‌ಗಳಿಗಿಂತ ಹೆಚ್ಚು ಬಳಸುತ್ತಿಲ್ಲ ಎಂದು ಸರ್ಕಾರದ ಸಮೀಕ್ಷೆ ಹೇಳಿದೆ. ಹಾಗಾಗಿ ಸಬ್ಸಿಡಿಯನ್ನು ನಿಜವಾದ ಬಳಕೆಗೆ ತಕ್ಕಂತೆ ಹೊಂದಿಸಲಾಗಿದೆ.

### ಫಲಾನುಭವಿಗಳಿಗೆ ನೀಡುತ್ತಿರುವ 300 ರೂ. ಧನಸಹಾಯ ಮುಂದುವರಿಕೆ




ಒಂದು ಗ್ಯಾಸ್ ಸಿಲಿಂಡರ್ ಪೂರೈಸಲು ಸರ್ಕಾರಕ್ಕೆ ಒಟ್ಟು 1,600 ರೂ. ಕ್ಕಿಂತ ಹೆಚ್ಚು ವೆಚ್ಚವಾಗುತ್ತಿದೆ. ಸರ್ಕಾರ ಇದನ್ನು ಸಾಮಾನ್ಯ ಜನರಿಗೆ 942 ರೂ.ಗೆ ಮಾರಾಟ ಮಾಡುತ್ತಿದೆ. ಇದರಿಂದಾಗಿ ಸರ್ಕಾರಿ ತೈಲ ಕಂಪನಿಗಳು ಪ್ರತಿ ಸಿಲಿಂಡರ್ ಮೇಲೆ ಸುಮಾರು 700 ರೂ. ನಷ್ಟ ಅನುಭವಿಸುತ್ತಿವೆ. ತೈಲ ಮಾರುಕಟ್ಟೆ ಕಂಪನಿಗಳು ಪ್ರತಿ ಸಿಲಿಂಡರ್ ಮಾರಾಟದಲ್ಲಿ ದೊಡ್ಡ ನಷ್ಟ ಅನುಭವಿಸುತ್ತಿರುವುದರಿಂದ ಆರ್ಥಿಕ ಹೊರೆಯನ್ನು ಕಡಿಮೆ ಮಾಡಲು ಈ ಕ್ರಮ ಕೈಗೊಳ್ಳಲಾಗಿದೆ.

ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಪ್ರವೀಣ್ ಮಲ್ ಖನೂಜಾ, ಪರಿಷ್ಕೃತ ಅರ್ಹತೆಯು ಉಜ್ವಲ ಫಲಾನುಭವಿಗಳ ಸರಾಸರಿ ವಾರ್ಷಿಕ ಬಳಕೆಗೆ ಹೊಂದಿಕೆಯಾಗುತ್ತದೆ ಎಂದು ಹೇಳಿದ್ದಾರೆ.

ಸರ್ಕಾರವು 2022 ರಿಂದ 52,000 ಕೋಟಿ ರೂ. ಸಬ್ಸಿಡಿ ನೀಡಿದೆ. ಬೆಲೆ ಏರಿಕೆಯ ಹೊರತಾಗಿಯೂ, ತೈಲ ಕಂಪನಿಗಳು 14.2 ಕೆಜಿ ಸಿಲಿಂಡರ್‌ಗೆ ಸುಮಾರು 700 ರೂ. ನಷ್ಟವನ್ನು ಮುಂದುವರೆಸಿವೆ ಎಂದು ಖನೂಜಾ ತಿಳಿಸಿದ್ದಾರೆ. ಎಲ್‌ಪಿಜಿ ಜೊತೆಗೆ ತೈಲ ಕಂಪನಿಗಳು ಪೆಟ್ರೋಲ್ ಮತ್ತು ಡೀಸೆಲ್ ವೆಚ್ಚಕ್ಕಿಂತ ಕಡಿಮೆ ದರದಲ್ಲಿ ಮಾರಾಟ ಮಾಡುವುದರಿಂದಲೂ ನಷ್ಟ ಅನುಭವಿಸುತ್ತಿವೆ ಎಂದು ಅವರು ಬೆಲೆ ಏರಿಕೆಗೆ ಕಾರಣಗಳನ್ನು ನೀಡಿದ್ದಾರೆ.

# ರಾಜ್ಯಸಭೆಗೆ ಸ್ಪರ್ಧಿಸಲು ಅವಕಾಶ ಕೇಳಿರಲಿಲ್ಲ: ಎಚ್‌ಡಿಕೆ ಸ್ಪಷ್ಟನೆ

**ಬೆಂಗಳೂರು, ಜೂ.9:** ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ರಾಜ್ಯಸಭೆಗೆ ಸ್ಪರ್ಧಿಸಲು ಅವಕಾಶ ಮಾಡಿಕೊಡುವಂತೆ ಕೇಳಿರಲಿಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಸ್ಪಷ್ಟಪಡಿಸಿದರು.



ಜಿಲ್ಲೆಯ ತಗ್ಗಹಳ್ಳಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವೇಗೌಡರ ಬಗ್ಗೆ ಕಾಂಗ್ರೆಸ್‌ನವರಿಗೆ ಈಗ ಅನುಕಂಪ ಬಂದಿದೆ ಎಂದು ವ್ಯಂಗ್ಯವಾಡಿದರು.

ದೇವೇಗೌಡರು ಹೋರಾಟದ ಬದುಕನ್ನು ನಡೆಸಿಕೊಂಡು ಬಂದಿದ್ದು, ಅಧಿಕಾರಕ್ಕಾಗಿ ಯಾರ ಮನೆ ಬಾಗಿಲಿಗೂ ಹೋಗಿಲ್ಲ, ಸ್ವಾಭಿಮಾನಕ್ಕೆ ಧಕ್ಕೆಯಾದಾಗ ಪ್ರಧಾನಿ ಸ್ಥಾನವನ್ನೇ ಬಿಟ್ಟುಬಂದರು ಎಂದು ಹೇಳಿದರು.

ಕಾಂಗ್ರೆಸ್‌ನವರು ಬಿಜೆಪಿ, ಜೆಡಿಎಸ್ ಮೈತ್ರಿಯಲ್ಲಿ ಬಿರುಕು ತರುವ ಪ್ರಯತ್ನ ಮಾಡುತ್ತಿದ್ದಾರೆಯೇ ಎಂಬ ಪ್ರಶ್ನೆಗೆ ಅವರು ಈ ಪ್ರತಿಕ್ರಿಯೆ ನೀಡಿದರು.2020ರಲ್ಲಿ ನಡೆದ ರಾಜ್ಯಸಭೆ ಚುನಾವಣೆಯಲ್ಲಿ ದೇವೇಗೌಡರ ವಿರುದ್ಧ ಮತ್ತೊಬ್ಬ ಅಭ್ಯರ್ಥಿ ಸ್ಪರ್ಧಿಸುವ ಅವಕಾಶವಿರಲಿಲ್ಲ. ಹಾಗಾಗಿ ಕಾಂಗ್ರೆಸ್ ಬೆಂಬಲದೊಂದಿಗೆ ಅವಿರೋಧ ಆಯ್ಕೆಯಾಗಿತ್ತು ಎಂದು ಹೇಳಿದರು.

ಮಾಜಿ ಸಚಿವ ಚಲುವರಾಯಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಎಚ್‌ಡಿಕೆ, ನೂತನ ಮುಖ್ಯಮಂತ್ರಿ ಏನು ಮಾಡುತ್ತಾರೆ ಎಂಬುದನ್ನು ಎರಡು ತಿಂಗಳು ಕಾದುನೋಡೋಣ. ಮುಖ್ಯಮಂತ್ರಿಗೆ ನಾನೇನು ಸಲಹೆ ನೀಡಲಿ ಎಂದ ಅವರು, ಕುಮಾರಸ್ವಾಮಿ ಅವರು 2 ಬಾರಿ ಮುಖ್ಯಮಂತ್ರಿಯಾಗಿ ಏನು ಸಾಧನೆ ಮಾಡಿದ್ದಾರೆ ಎಂದು ಈಗಿನ ಮುಖ್ಯಮಂತ್ರಿ ಪ್ರಶ್ನಿಸಿದ್ದಾರೆ.

ಎಲ್ಲದಕ್ಕೂ ಸಾಕ್ಷಿಗುಡ್ಡೆ ಕೇಳುವ ಅವರಿಗೆ ನನ್ನಿಂದ ಏನು ಸಲಹೆ ನಿರೀಕ್ಷೆ ಮಾಡುತ್ತಾರೆ ಎಂದು ಪ್ರಶ್ನಿಸಿದರು.

### ಮೇಲ್ಮನೆ ಚುನಾವಣೆ ; ಕಾರ್ಯತಂತ್ರ ಇಲ್ಲ

**ವಿಧಾನಸಭೆಯಿಂದ ವಿಧಾನಪರಿಷತ್‌ನ 7 ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದೆ. ಜೆಡಿಎಸ್‌ನಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದೇವೆ. ನಮಗೂ 2 ಮತಗಳ ಕೊರತೆಯಿದೆ. ಕಾಂಗ್ರೆಸ್‌ನ 5ನೇ ಅಭ್ಯರ್ಥಿಗೂ 2 ಮತಗಳ ಕೊರತೆಯಿದೆ. ಈ ಚುನಾವಣೆಯಲ್ಲಿ ಯಾವುದೇ ಕಾರ್ಯತಂತ್ರ ಇಲ್ಲ ಎಂದು ಸ್ಪಷ್ಟಪಡಿಸಿದರು. ಬಿಜೆಪಿಯಿಂದ ಉಚ್ಚಾಟನೆಯಾಗಿರುವ ಬಸನಗೌಡ ಪಾಟೀಲ್ ಯತ್ನಾಳ್ ಅವರ ಮತವನ್ನು ಕೇಳುತ್ತೇವೆ. ಕಾಂಗ್ರೆಸ್‌ನವರಿಗೆ ಹಣಬಲವಿದೆ. ಮುಂದೇನಾಗುತ್ತದೋ ಕಾದು ನೋಡೋಣ ಎಂದು ಎಚ್‌ಡಿಕೆ ತಿಳಿಸಿದರು.**

ನಾನು ಮತ್ತೆ ಮುಖ್ಯಮಂತ್ರಿಯಾಗುವುದಕ್ಕಿಂತ ಹೆಚ್ಚಾಗಿ ನಾಡಿನ ಜನರ ರಕ್ಷಣೆ ಮಾಡಬೇಕಿದೆ. ಆ ಶಕ್ತಿ ಮೈತ್ರಿಪಕ್ಷಗಳಿಗೆ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಹೇಳಿದರು.

# ಉಜ್ವಲ ಯೋಜನೆ ಸಬ್ಸಿಡಿ ಸಿಲಿಂಡರ್ ಕಡಿತ: ಫಲಾನುಭವಿ ಮಹಿಳೆಯರ ಮೇಲೆ ವಾರ್ಷಿಕ 24,792 ಕೋಟಿ ರೂ. ಹೊರೆ

**ನವದೆಹಲಿ, ಜೂ.9:** ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರದ ಆಡಳಿತದಲ್ಲಿ ಪ್ರತಿನಿತ್ಯ ಜನಸಾಮಾನ್ಯರ ಜೇಬಿನ ಮೇಲೆ ದಾಳಿ ಮಾಡಲಾಗುತ್ತಿದೆ. ನಮ್ಮ ತಾಯಂದಿರು ಹಾಗೂ ಸಹೋದರಿಯರ ಪ್ರತಿ ತಿಂಗಳ ಖರ್ಚಿನ ಮೇಲೆ ದಾಳಿ ಮಾಡಲಾಗುತ್ತಿದೆ. ಇಂದು ಕೇಂದ್ರ ಸರ್ಕಾರ ಉಜ್ವಲ ಯೋಜನೆ ಫಲಾನುಭವಿ ಮಹಿಳೆಯರ ಮೇಲೆ ದಾಳಿ ಮಾಡಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲಾ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಭಾರತದಲ್ಲಿ ಒಟ್ಟು 10.33 ಕೋಟಿ ಉಜ್ವಲ ಯೋಜನೆ ಫಲಾನುಭವಿಗಳಿದ್ದಾರೆ. ಈ ಯೋಜನೆ ಜಾರಿಗೆ ಬಂದಾಗ ಫಲಾನುಭವಿಗಳಿಗೆ ಪ್ರತಿ ಸಿಲಿಂಡರ್ ಗೆ 300 ರೂ.ನಂತೆ ವರ್ಷಕ್ಕೆ 12 ಸಿಲಿಂಡರ್ ಗಳಿಗೆ ಸಬ್ಸಿಡಿ ನಿಗದಿ ಮಾಡಲಾಗಿತ್ತು. ಈ ಹಿಂದೆ ಮೋದಿ ಅವರು ಮೊದಲು ಈ ಸಬ್ಸಿಡಿ ಸಿಲಿಂಡರ್ ಗಳ ಸಂಖ್ಯೆಯನ್ನು 9 ಸಿಲಿಂಡರ್ ಗಳಿಗೆ ಇಳಿಸಿದ್ದರು. ಆದರೆ ಇಂದು ಬೆಳಗ್ಗೆ ಉಜ್ವಲ ಸಬ್ಸಿಡಿ ಸಿಲಿಂಡರ್ ಗಳನ್ನು ವರ್ಷಕ್ಕೆ 4ಕ್ಕೆ ಇಳಿಸಿದೆ. ಅದರೊಂದಿಗೆ ಕೇಂದ್ರ ಸರ್ಕಾರ ಈಗ ಪ್ರತಿ ವರ್ಷ 8 ಸಬ್ಸಿಡಿ ಸಿಲಿಂಡರ್ ಗಳನ್ನು ಕಸಿದುಕೊಂಡಿದೆ. ಇದರಿಂದಾಗಿ ದೇಶದ ಬಡಮಹಿಳೆಯರು 2400 ಕಳೆದುಕೊಳ್ಳುತ್ತಾರೆ. ಕೇಂದ್ರ ಸರ್ಕಾರದ ಈ ಜನ ವಿರೋಧಿ ನೀತಿಯಿಂದಾಗಿ ನಮ್ಮ ದೇಶದ ಮಹಿಳೆಯರ ಮೇಲೆ 24,792 ಕೋಟಿ ರೂ. ಹೆಚ್ಚಿನ ಹೊರೆ ಬೀಳಲಿದೆ. ಮಹಿಳೆಯರು ಇದನ್ನು ಭರಿಸಲು ಹೇಗೆ ಸಾಧ್ಯ? ಕೇಂದ್ರ ಸರ್ಕಾರದ ನಿರ್ಧಾರದಿಂದಾಗಿ ಮಹಿಳೆಯರು ಮತ್ತೆ ಸೌದೆ ಒಲೆಯತ್ತ ಮುಖ ಮಾಡುವಂತಾಗಿದೆ. ಇಷ್ಟೇ ಅಲ್ಲ, ಕರ್ನಾಟಕದಲ್ಲಿ ಉಜ್ವಲ ಯೋಜನೆಯಲ್ಲಿ 37.50 ಲಕ್ಷ ಫಲಾನುಭವಿಗಳಿದ್ದು, ರಾಜ್ಯದ ಮಹಿಳೆಯರ ಮೇಲೆ ಪ್ರತಿ ವರ್ಷ 900 ಕೋಟಿ ರೂ. ಆರ್ಥಿಕ ಹೊರೆ ಬೀಳಲಿದೆ ಎಂದಿದ್ದಾರೆ.

- **ಸಬ್ಸಿಡಿ ಸಿಲಿಂಡರ್‌ಗಳ ಸಂಖ್ಯೆ ಕಡಿತ ರಣದೀಪ್‌ಸಿಂಗ್ ಸುಜೇವಾಲ ಆಕ್ರೋಶ**
- **ಕರ್ನಾಟಕದಲ್ಲೂ ಫಲಾನುಭವಿಗಳ ಮೇಲೆ ವಾರ್ಷಿಕ 900 ಕೋಟಿ ರೂ. ಹೊರೆ**

ಉಜ್ವಲ ಫಲಾನುಭವಿಗಳ ಮೇಲಿನ ಈ ದಾಳಿಗೆ ಕಾರಣವೇನು ಎಂಬುದನ್ನು ಮೋದಿ ಹಾಗೂ ಬಿಜೆಪಿ ಸರ್ಕಾರ ತಿಳಿಸುವುದೇ? 2014ರಲ್ಲಿ ಕಾಂಗ್ರೆಸ್ ಸರ್ಕಾರ ಇದ್ದಾಗ ಸಿಲಿಂಡರ್ ಬೆಲೆ 400 ರೂ. ಇತ್ತು. ಇಂದು ಗೃಹಬಳಕೆ ಸಿಲಿಂಡರ್ 1000 ರೂ. ಗಡಿ ತಲುಪುತ್ತಿದೆ. ಕೇಂದ್ರ ಸರ್ಕಾರ ಗೃಹಬಳಕೆ ಸಿಲಿಂಡರ್ ಬೆಲೆಯನ್ನು ಮಾರ್ಚ್ 7ರಂದು 60 ರೂ. ಹಾಗೂ ಜೂನ್ 7ರಂದು 29 ರೂ. ಏರಿಕೆ ಮಾಡಿದೆ. 3 ತಿಂಗಳ ಒಳಗೆ ಸುಮಾರು 90 ರೂ.ಗಳಷ್ಟು ಏರಿಕೆಯಾಗಿದ್ದು, ಈ ಪ್ರಮಾಣದ ಬೆಲೆ ಏರಿಕೆ ಮಧ್ಯೆ ಜನ ಹೇಗೆ ಬದುಕಬೇಕು ಎಂದು ಪ್ರಶ್ನಿಸಿದ್ದಾರೆ.

ಇನ್ನು ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆ ಕೂಡ ಜನರ ಬದುಕಿನ ಮೇಲೆ ಕೆಟ್ಟ ಪರಿಣಾಮ ಬೀರಿದೆ. ಜನವರಿ 1ರಿಂದ ಮೇ 31ರ ವರೆಗೆ 1,432 ರೂ.ಏರಿಕೆಯಾಗಿದೆ. ಜೂನ್ 1ರಂದು 42 ರೂ. ಏರಿಕೆ ಮಾಡಲಾಗಿದೆ. ಇದರಿಂದಾಗಿ ಸಣ್ಣ ಹೊಟೇಲ್, ವ್ಯಾಪಾರ ಮಾಡುವವರ ಮೇಲೆ ಹೊರೆ ಹೆಚ್ಚಿಸಲಾಗಿದೆ. ಈ ನಿರಂತರ ಬೆಲೆ ಏರಿಕೆಗೆ ಕಾರಣವೇನು ಎಂದು ಪ್ರಧಾನಿ ಮೋದಿ, ಕರ್ನಾಟಕ ಬಿಜೆಪಿ ನಾಯಕರಾದ ಆರ್. ಅಶೋಕ್, ವಿಜಯೇಂದ್ರ ಅವರು ಉತ್ತರಿಸಬೇಕಿದೆ ಎಂದಿದ್ದಾರೆ.

ಉಜ್ವಲ ಯೋಜನೆ ಫಲಾನುಭವಿಗಳು, ಜನಸಾಮಾನ್ಯರ ಮೇಲೆ ಬಿಜೆಪಿ ದಾಳಿ ಮಾಡುತ್ತಿದ್ದು, ಕರ್ನಾಟಕದ ಮಹಿಳೆಯರ ಮೇಲೆ ಈ ಹೆಚ್ಚುವರಿ 900 ಕೋಟಿ ರೂ. ಹಾಗೂ ದೇಶದ ಮಹಿಳೆಯರ ಮೇಲೆ ಸುಮಾರು 25,000 ಕೋಟಿ ರೂ. ಆರ್ಥಿಕ ಹೊರೆಗೆ ಹೊಣೆ ಯಾರು? ದೇಶದ ಜನರು ಹಾಗೂ ಕರ್ನಾಟಕದ ಸಹೋದರರು ಹಾಗೂ ಸಹೋದರಿಯರು ಇದಕ್ಕೆ ಉತ್ತರ ಬಯಸುತ್ತಿದ್ದಾರೆ. ಬಿಜೆಪಿ ಇದಕ್ಕೆ ಉತ್ತರ ನೀಡಬೇಕು ಎಂದು ಆಗ್ರಹಿಸಿದ್ದಾರೆ.

# ಮಧ್ಯಪ್ರದೇಶ: ಕೈ ರಾಜ್ಯಸಭೆ ಅಭ್ಯರ್ಥಿ ನಾಮಪತ್ರ ತಿರಸ್ಕೃತ

**ನವದೆಹಲಿ, ಜೂ.9:** ನಾಮಪತ್ರದಲ್ಲಿ ಕ್ರಿಮಿನಲ್ ಪ್ರಕರಣವನ್ನು ನಮೂದಿಸದ ಕಾರಣ ಕಾಂಗ್ರೆಸ್ ನಾಯಕಿ ಮೀನಾಕ್ಷಿ ನಟರಾಜನ್ ಅವರ ರಾಜ್ಯಸಭಾ ನಾಮಪತ್ರ ತಿರಸ್ಕೃತಗೊಂಡಿದೆ.



ರಾಜ್ಯಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷಕ್ಕೆ ಈ ಬೆಳವಣಿಗೆ ದೊಡ್ಡ ಹೊಡೆತ ಕೊಟ್ಟಿದೆ.ಮಧ್ಯಪ್ರದೇಶದ ಮೀನಾಕ್ಷಿ ನಟರಾಜನ್ ಅವರ ನಾಮಪತ್ರ ಪರಿಶೀಲನೆ ಪ್ರಕ್ರಿಯೆ ವೇಳೆ ತಿರಸ್ಕರಿಸಲಾಗಿದೆ. ಇದರೊಂದಿಗೆ ರಾಜ್ಯದ ಮೂರನೇ ರಾಜ್ಯಸಭಾ ಸ್ಥಾನಕ್ಕೆ ಸ್ಪರ್ಧೆ ಕೊನೆಗೊಂಡಿದೆ. ನಟರಾಜನ್ ಅವರ ನಾಮಪತ್ರ ತಿರಸ್ಕೃತಗೊಂಡಿರುವುದರಿಂದ, ಬಿಜೆಪಿಯ ಮಹೇಶ್ ಕೆವಾಟ್ ಗೆಲ್ಲುವ ಸಾಧ್ಯತೆ ಹೆಚ್ಚಿದೆ. ಮಹೇಶ್ ಕೆವಾಟ್ ಅವರು ರಾಜ್ಯದ ಮೀನುಗಾರರ ಕಲ್ಯಾಣ ಮಂಡಳಿಯ ಅಧ್ಯಕ್ಷರಾಗಿದ್ದಾರೆ.

ಕೂಲಂಕಷ ತನಿಖೆಯ ನಂತರ, ಚುನಾವಣಾಧಿಕಾರಿ ಕಾಂಗ್ರೆಸ್ ಅಭ್ಯರ್ಥಿಯ ನಾಮಪತ್ರವನ್ನು ತಿರಸ್ಕರಿಸಿದ್ದಾರೆ. ಹೈದರಾಬಾದ್ ನ್ಯಾಯಾಲಯದಲ್ಲಿ ಬಾಕಿ ಇರುವ ಕ್ರಿಮಿನಲ್ ಪ್ರಕರಣದ ಬಗ್ಗೆ ಮೀನಾಕ್ಷಿ ನಟರಾಜನ್ ಅವರು ನಾಮಪತ್ರದಲ್ಲಿ ಮಾಹಿತಿ ಮರೆಮಾಚಿದ್ದಾರೆ ಎಂದು ಆರೋಪಿಸಿ ನಾಮಪತ್ರ ತಿರಸ್ಕರಿಸಲಾಗಿದೆ.

ಪ್ರಸ್ತುತ 230 ಸದಸ್ಯ ಬಲದ ಮಧ್ಯಪ್ರದೇಶ ವಿಧಾನಸಭೆಯಲ್ಲಿ ಒಟ್ಟು ಮತಗಳ ಸಂಖ್ಯೆ 228. ಬಿಜೆಪಿ 164 ಶಾಸಕರನ್ನು ಹೊಂದಿದ್ದರೆ, ಕಾಂಗ್ರೆಸ್ 64 ಶಾಸಕರನ್ನು ಹೊಂದಿದೆ. ಬಿಜೆಪಿಯತ್ತ ಒಲವಿರುವ ಬಿನಾ ಶಾಸಕಿ ನಿರ್ಮಲಾ ಸಪ್ರೆ ಅವರ ಮತದ ಅಸ್ಪಷ್ಟ ಸ್ಥಿತಿ ಮತ್ತು ವಿಜಯಪುರ ಶಾಸಕ ಮುಖೇಶ್ ಮಲ್ಹೋತ್ರಾ ಮತದಾನದ ಮೇಲಿನ ನಿಷೇಧಗಳ ಪರಿಣಾಮ ಕಾಂಗ್ರೆಸ್‌ನ ಸಂಖ್ಯೆಯನ್ನು 62ಕ್ಕೆ ಇಳಿಸಿವೆ.

**ಗೆಲುವಿಗೆ ಅಗತ್ಯವಿರುವ ಮತಗಳು:** ರಾಜ್ಯಸಭಾ ಸ್ಥಾನ ಗೆಲ್ಲಲು ಪ್ರತಿಯೊಬ್ಬ ಅಭ್ಯರ್ಥಿಗೆ 58 ಮತಗಳು ಬೇಕಾಗುತ್ತವೆ. ಅದರಂತೆ, ಬಿಜೆಪಿಗೆ 2 ಸ್ಥಾನ ಗೆಲ್ಲಲು 116 ಮತಗಳು ಬೇಕಾಗುತ್ತವೆ. ಒಟ್ಟು 164 ಮತಗಳ ಪೈಕಿ 116 ಮತದ ನಂತರ 48 ಮತಗಳು ಇರುತ್ತವೆ. 3ನೇ ಸ್ಥಾನ ಗೆಲ್ಲಲು 58 ಮತಗಳು ಬೇಕಾಗುತ್ತವೆ.

# ರಾಜ್ಯಸಭೆ 4 ಸ್ಥಾನಗಳಿಗೆ ಅವಿರೋಧ ಆಯ್ಕೆ ನಿಶ್ಚಿತ ಸಲ್ಲಿಕೆಯಾಗಿದ್ದ ನಾಲ್ಕೂ ನಾಮಪತ್ರಗಳು ಕ್ರಮಬದ್ಧ


**ಬೆಂಗಳೂರು, ಜೂ.9:** ಕರ್ನಾಟಕದಿಂದ ತೆರವಾಗಿದ್ದ ರಾಜ್ಯಸಭೆಯ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಭಾರಿ ರಾಜಕೀಯ ಕುತೂಹಲಕ್ಕೆ ತೆರೆಬಿದ್ದಿದೆ. ಈ ನಾಲ್ಕೂ ಸ್ಥಾನಗಳಿಗೆ ಸಲ್ಲಿಕೆಯಾಗಿದ್ದ ನಾಲ್ಕು ನಾಮಪತ್ರಗಳು ಕ್ರಮಬದ್ಧವಾಗಿರುವುದರಿಂದ, ಎಲ್ಲಾ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗುವುದು ನಿಶ್ಚಿತವಾಗಿದೆ.

ಯಾವುದೇ ಹೆಚ್ಚುವರಿ ಅಭ್ಯರ್ಥಿಗಳು ಕಣದಲ್ಲಿ ಇಲ್ಲದ ಕಾರಣ ಮತದಾನದ ಪ್ರಕ್ರಿಯೆಯಿಲ್ಲದೆಯೇ ಅಭ್ಯರ್ಥಿಗಳು ಸಂಸತ್ತಿನ ಮೇಲ್ಮನೆಗೆ ಪ್ರವೇಶಿಸಲಿದ್ದಾರೆ. ಚುನಾವಣಾ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಕೆ. ಎಂ. ವಿಶಾಲಾಕ್ಷಿ ಅವರು ಅಭ್ಯರ್ಥಿಗಳು ಸಲ್ಲಿಸಿದ್ದ ನಾಮಪತ್ರಗಳ ಕೂಲಂಕಷ ಪರಿಶೀಲನೆ ನಡೆಸಿದರು. ಪರಿಶೀಲನೆಯ ನಂತರ ಎಲ್ಲಾ ನಾಲ್ಕೂ ಅಭ್ಯರ್ಥಿಗಳ ನಾಮಪತ್ರಗಳು ತಾಂತ್ರಿಕವಾಗಿ ಹಾಗೂ ಕಾನೂನುಬದ್ಧವಾಗಿ ಸರಿಯಾಗಿವೆ ಎಂದು ಧೃಡೀಕರಿಸಿ, ಅವುಗಳನ್ನು ಅಧಿಕೃತವಾಗಿ ಅಂಗೀಕರಿಸಿದ್ದಾರೆ.









ಇದರಿಂದಾಗಿ ಅಭ್ಯರ್ಥಿಗಳ ಆಯ್ಕೆಯ ಹಾದಿ ಸುಗಮಗೊಂಡಿದೆ.ಸಂಖ್ಯಾಬಲದ ಆಧಾರದ ಮೇಲೆ ರಾಜಕೀಯ ಪಕ್ಷಗಳು ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದವು. ಕಾಂಗ್ರೆಸ್ ಪಕ್ಷದಿಂದ ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ, ಮನ್ಸೂರ್ ಅಲಿಖಾನ್ ಹಾಗೂ ಪವನ್ ಖೇರಾ ನಾಮಪತ್ರ ಸಲ್ಲಿಸಿದ್ದರು. ಇತ್ತ ಭಾರತೀಯ ಜನತಾ ಪಕ್ಷ (ಬಿಜೆಪಿ) ವತಿಯಿಂದ ಪ್ರೊ.ಮಾ.ನಾಗರಾಜ ಅವರು ಉಮೇದುವಾರಿಕೆ ಸಲ್ಲಿಸಿದ್ದರು. ಸಾಮಾನ್ಯವಾಗಿ ರಾಜ್ಯಸಭಾ ಸ್ಥಾನಗಳಿಗೆ ಹೆಚ್ಚುವರಿ ಅಭ್ಯರ್ಥಿಗಳು ಕಣದಲ್ಲಿದ್ದರೆ ಶಾಸಕರಿಂದ ರಹಸ್ಯ ಮತದಾನದ ಪ್ರಕ್ರಿಯೆ ನಡೆಯುತ್ತದೆ. ಆದರೆ ಈ ಬಾರಿ ಯಾವುದೇ ರಾಜಕೀಯ ಪಕ್ಷಗಳು ಹೆಚ್ಚುವರಿ ಅಭ್ಯರ್ಥಿಗಳನ್ನು ಕಣಕ್ಕಿಳಿಸದೆ, ಸೌಹಾರ್ದಯುತವಾಗಿ ಸ್ಥಾನಗಳನ್ನು ಹಂಚಿಕೊಂಡಿವೆ. ಇದರಿಂದಾಗಿ ಕುದುರೆ ವ್ಯಾಪಾರ ಅಥವಾ ರಾಜಕೀಯ ಹಗ್ಗಜಗ್ಗಾಟಕ್ಕೆ ಆಸ್ಪದವಿಲ್ಲದಂತೆ ಮತದಾನ ಪ್ರಕ್ರಿಯೆ ಇಲ್ಲದೆಯೇ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ನಾಮಪತ್ರಗಳನ್ನು ಹಿಂಪಡೆಯಲು ಜೂನ್ 11 ಕೊನೆಯ ದಿನವಾಗಿದ್ದು, ಕಣದಲ್ಲಿರುವ ನಾಲ್ವರು ನಾಮಪತ್ರ ಹಿಂಪಡೆಯುವ ಸಾಧ್ಯತೆ ಇಲ್ಲದಿರುವುದರಿಂದ, ಅಂದು ಸಂಜೆ ನಾಲ್ವರ ಅವಿರೋಧ ಆಯ್ಕೆ ಘೋಷಿಸಿ ಪ್ರಮಾಣಪತ್ರ ವಿತರಿಸಲಿದ್ದಾರೆ.

# ಅಡಕೆಗೆ ಕಂಟಕವಾಗಿರುವ ಎಲೆಚುಕ್ಕಿ, ಹಳದಿ ಎಲೆರೋಗ ನಿಯಂತ್ರಣಕ್ಕೆ ಕ್ರಮ ಅಗತ್ಯ

**ನವದೆಹಲಿ, ಜೂ.9:** ದಕ್ಷಿಣ ಕನ್ನಡ ಸೇರಿದಂತೆ ಕರಾವಳಿ ಮತ್ತು ಮಲೆನಾಡು ಭಾಗದ ಸಾವಿರಾರು ಅಡಿಕೆ ಬೆಳೆಗಾರರಿಗೆ ತೀವ್ರ ಆತಂಕ ತಂದೊಡ್ಡಿರುವ 'ಹಳದಿ ಎಲೆ ರೋಗ' ಮತ್ತು 'ಎಲೆಚುಕ್ಕಿ ರೋಗ' ಸಮಸ್ಯೆಗೆ ತುರ್ತು ಪರಿಹಾರ ಕ್ರಮ ಕೈಗೊಳ್ಳುವಂತೆ ದ.ಕ. ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ರಾಜ್ಯದ ಪ್ರಮುಖ ಅಡಿಕೆ ಬೆಳೆಯುವ ಪ್ರದೇಶಗಳಲ್ಲಿ ಈ ರೋಗಗಳ ವ್ಯಾಪಕ ಹರಡುವಿಕೆಯಿಂದಾಗಿ ರೈತರು ಎದುರಿಸುತ್ತಿರುವ ಗಂಭೀರ ಆರ್ಥಿಕ ಮತ್ತು ಕೃಷಿ ಸಮಸ್ಯೆಗಳನ್ನು ಕ್ಯಾ. ಬ್ರಿಜೇಶ್ ಚೌಟ ಅವರು ವಿವರವಾಗಿ ಮನವಿಯಲ್ಲಿ ಪ್ರಸ್ತಾಪಿಸಿದ್ದಾರೆ.

ದಕ್ಷಿಣಕನ್ನಡ, ಚಿಕ್ಕಮಗಳೂರು, ಕೊಡಗು ಸೇರಿದಂತೆ ಹಳದಿ ಎಲೆ ರೋಗವು ಪ್ರಸ್ತುತ ಸುಮಾರು 16,000 ಹೆಕ್ಟೇರ್ ಪ್ರದೇಶವನ್ನು ಬಾಧಿಸಿದ್ದು, ಇದು ಲಕ್ಷಾಂತರ ರೈತರ ಆರ್ಥಿಕ ಪರಿಸ್ಥಿತಿಯನ್ನು ಹದಗೆಡುವಂತೆ ಮಾಡಿದೆ. ರೋಗಕ್ಕೆ ಕಾರಣವಾಗಿರುವ 'ಫೈಟೋಪ್ಲಾಸ್ಮಾ' ಸೋಂಕು ನಿರ್ಮೂಲನೆಗೆ ಕ್ರಮಗಳಿಲ್ಲ. ಐಸಿಎಆರ್–ಸೆಂಟ್ರಲ್ ಪ್ಲಾಂಟೇಷನ್ ಕ್ರಾಪ್ಸ್ ರಿಸರ್ಚ್ ಇನ್ಸ್ಟಿಟ್ಯೂಟ್ ಸಂಸ್ಥೆಯು ಅಭಿವೃದ್ಧಿಪಡಿಸಿರುವ ನಿರ್ವಹಣಾ ವಿಧಾನಗಳೇ ಬಾಧಿತ ಬೆಳೆಗಾರರ ಪಾಲಿನ ಏಕೈಕ ಆಶಾಕಿರಣವಾಗಿದೆ. ಇಂತಹ ಸವಾಲಿನ ಪರಿಸ್ಥಿತಿಯಲ್ಲಿ ಸಿಪಿಸಿಆರ್‌ಐ ಸಂಸ್ಥೆಯು ಗಮನಾರ್ಹ ಪ್ರಗತಿ ಸಾಧಿಸಿರುವುದು ಶ್ಲಾಘನೀಯ. ಇದಕ್ಕೆ ಪೂರಕವಾಗಿ ವಿಟ್ಲದಲ್ಲಿ ಅತ್ಯಾಧುನಿಕ ರೋಗನಿರ್ಣಯ ಪ್ರಯೋಗಾಲಯ ಸ್ಥಾಪಿಸಲಾಗಿದೆ. ಹಳದಿ ಎಲೆರೋಗವನ್ನು ತಡೆದುಕೊಳ್ಳುವ ಸಾಮರ್ಥ್ಯವಿರುವ ಗಿಡಗಳ ಅಂಗಾಂಶ ಕೃಷಿ ತಂತ್ರಜ್ಞಾನದ ಮೂಲಕ ಯಶಸ್ವಿ ಮರುಸೃಷ್ಟಿ ಮಾಡಲಾಗಿದೆ. ಈ ಹಿನ್ನಲೆಯಲ್ಲಿ ಹಳದಿ ರೋಗ ನಿಯಂತ್ರಣಕ್ಕೆ ಸುಧಾರಿತ ತಂತ್ರಜ್ಞಾನಗಳು, ಹೈಟೆಕ್ ನೀರಾವರಿ ವ್ಯವಸ್ಥೆ ಮತ್ತು ಸಮತೋಲಿತ ಪೋಷಕಾಂಶ ನಿರ್ವಹಣಾ ಪದ್ಧತಿಗಳನ್ನು ರೈತರು ದೊಡ್ಡ ಪ್ರಮಾಣದಲ್ಲಿ ಅಳವಡಿಸಿಕೊಳ್ಳಲು ಭಾರಿ ಸಾಂಸ್ಥಿಕ ಹಾಗೂ ಆರ್ಥಿಕ ನೆರವಿನ ಅಗತ್ಯವಿದೆ. ಆದ್ದರಿಂದ ಬಾಧಿತ ರೈತರಿಗೆ ನೆರವಾಗಲು ಸಮಗ್ರ ಬೆಂಬಲ ಪ್ಯಾಕೇಜ್ ಘೋಷಿಸಬೇಕು ಎಂದು ಅವರು ಸಚಿವರಲ್ಲಿ ಮನವಿ ಮಾಡಿದ್ದಾರೆ.

### ತುರ್ತು ಸ್ಪಂದಿಸಲು ಕೇಂದ್ರ ಸರ್ಕಾರಕ್ಕೆ ಸಂಸದ ಕ್ಯಾ.ಚೌಟ ಮನವಿ

### ಎಂಐಡಿಎಚ್ ಮಿತಿ ವಿನಾಯಿತಿ, ವಿಶೇಷ ಪ್ಯಾಕೇಜ್ ಘೋಷಿಸುವಂತೆ ಕೇಂದ್ರ ಕೃಷಿ ಸಚಿವರಿಗೆ ಕೋರಿಕೆ



ಇದರ ಜೊತೆಗೆ ದಕ್ಷಿಣ ಕನ್ನಡ ಹಾಗೂ ಒಟ್ಟಾರೆ ಮಲೆನಾಡು ಭಾಗದಲ್ಲಿ ವ್ಯಾಪಕವಾಗಿ ಹರಡುತ್ತಿರುವ 'ಎಲೆ ಚುಕ್ಕಿ ರೋಗ' ನಿಯಂತ್ರಣದ ಕುರಿತಂತೆ ಸಂಸದರು ಕೃಷಿ ಸಚಿವರ ಗಮನಕ್ಕೆ ತಂದಿದ್ದಾರೆ. 2023ರಲ್ಲಿ ಸಂದರ್ಭ ಕೇಂದ್ರ ಸರ್ಕಾರವು ಐಸಿಎಆರ್–ಸಿಪಿಸಿಆರ್‌ಐ ತಜ್ಞರ ಸಮಿತಿಯ ವರದಿ ಆಧಾರಿಸಿ ವೈಜ್ಞಾನಿಕ ನಿರ್ವಹಣಾ ಮಾರ್ಗಸೂಚಿಗಳನ್ನು ಸಿದ್ಧಪಡಿಸಿತ್ತು. ಇದೇ ವೇಳೆ ಶೋಭಾ ಕರಂದ್ಲಾಜೆ ಕೇಂದ್ರ ಕೃಷಿ ಸಹಾಯಕ ಸಚಿವೆಯಾಗಿದ್ದ ಸಂದರ್ಭದಲ್ಲಿ 60:40ರ ಅನುಪಾತದ ಧನಸಹಾಯದ ಸೂತ್ರದಡಿ 225 ಕೋಟಿ ಅನುದಾನವನ್ನೂ ಮಂಜೂರು ಮಾಡಿತ್ತು. ಆದರೆ, ಈ ಅನುದಾನವನ್ನು 'ಮಿಷನ್ ಫಾರ್ ಇಂಟಿಗ್ರೇಟೆಡ್ ಡೆವಲಪ್ಮೆಂಟ್ ಆಫ್ ಹಾರ್ಟಿಕಲ್ಚರ್' (MIDH) ಮಾರ್ಗಸೂಚಿಗಳಿಗೆ ಲಿಂಕ್ ಮಾಡಲಾಗಿತ್ತು. ಇದರ ನಿಯಮಾವಳಿಗಳ ಪ್ರಕಾರ ಸಸ್ಯ ಸಂರಕ್ಷಣೆಗೆ ಪ್ರತಿ ಹೆಕ್ಟೇರ್ಗೆ ಗರಿಷ್ಠ 1,500 ಮಾತ್ರ ವೆಚ್ಚ ಮಾಡಲು ಅವಕಾಶವಿತ್ತು. ಆದರೆ, ಸಿಪಿಸಿಆರ್‌ಐ ಲೆಕ್ಕಾಚಾರದ ಪ್ರಕಾರ, ವಿಶೇಷ ಶಿಲೀಂಧ್ರನಾಶಕಗಳು ಮತ್ತು ಪೋಷಕಾಂಶಗಳ ನಿರ್ವಹಣೆಯನ್ನೊಳಗೊಂಡ ಸಮಗ್ರ ನಿಯಂತ್ರಣದ ನೈಜ ವೆಚ್ಚವು ಈ ಮಿತಿಗಿಂತ ತೀರಾ ಹೆಚ್ಚಾಗಿತ್ತು. ಈ ತಾಂತ್ರಿಕ ಅಡಚಣೆಯಿಂದಾಗಿ ನಿಗದಿತ ಉದ್ದೇಶಕ್ಕೆ ಬಳಸಲು ಸಾಧ್ಯವಾಗದೇ 2023ರ ಅನುದಾನವು ಸರ್ಕಾರಕ್ಕೆ ವಾಪಾಸ್ಸಾಗಿತ್ತು. ಹೀಗಿರುವಾಗ ಇದು ರೈತರನ್ನು ಮತ್ತಷ್ಟು ಕಂಗಾಲಾಗುವಂತೆ ಮಾಡಿದೆ.

ಈ ವಿಶೇಷ ಪರಿಸ್ಥಿತಿಯನ್ನು ಪರಿಗಣಿಸಿ, ಎಲೆ ಚುಕ್ಕಿ ರೋಗಕ್ಕೆ ಮಾತ್ರ ಅನ್ವಯವಾಗುವಂತೆ ಸಾಮಾನ್ಯ ಎಂಐಡಿಹೆಚ್ ವೆಚ್ಚದ ಮಿತಿಯಿಂದ ವಿಶೇಷ ವಿನಾಯಿತಿ ನೀಡಿ ಈ ಹಿಂದೆ ಬಿಡುಗಡೆಗೊಂಡಿದ್ದ, ಅನುದಾನವನ್ನು ಮರುಬಿಡುಗಡೆ ಮಾಡಲು ತಾವು ತುರ್ತಾಗಿ ಮಧ್ಯಪ್ರವೇಶಿಸಬೇಕು. ಸಿಪಿಸಿಆರ್‌ಐ ಶಿಫಾರಸು ಮಾಡಿದ ನಿಜವಾದ ವೆಚ್ಚಕ್ಕೆ ಅನುಗುಣವಾಗಿ ಆರ್ಥಿಕ ಸಹಾಯವನ್ನು ಒದಗಿಸುವುದು ರೋಗ ನಿಯಂತ್ರಣ ಕಾರ್ಯಕ್ರಮದ ಯಶಸ್ಸಿಗೆ ಮತ್ತು ಅಡಿಕೆ ವಲಯದ ಉಳಿವಿಗೆ ಅತ್ಯಂತ ಅತ್ಯಗತ್ಯವಾಗಿದೆ ಎಂದು ಕ್ಯಾ. ಬ್ರಿಜೇಶ್ ಚೌಟ ಅವರು ಕೃಷಿ ಸಚಿವರಿಗೆ ಮನವಿ ಮಾಡಿದ್ದಾರೆ.


### ವಾಸ್ತವ ಅರಿಯಲು ಖುದ್ದು ಭೇಟಿ ನೀಡುವಂತೆ ಕೇಂದ್ರ ಸಚಿವ ಶಿವರಾಜ ಚೌಹಾಣ್‌ಗೆ ಆಹ್ವಾನ

**ಕರಾವಳಿ ಕರ್ನಾಟಕದ ಆರ್ಥಿಕತೆಯಲ್ಲಿ ಅಡಿಕೆ ಕೃಷಿಯ ಪ್ರಾಮುಖ್ಯತೆಯನ್ನು ಮನಗಂಡು, ರೈತ ಸಮುದಾಯದಲ್ಲಿ ಮೂಡಿರುವ ತೀವ್ರ ಆತಂಕವನ್ನು ಪರಿಗಣಿಸಿ, ಇಲ್ಲಿರುವ ವಾಸ್ತವಿಕ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲು ಆದಷ್ಟು ಬೇಗ ಮಂಗಳೂರಿಗೆ ಭೇಟಿ ನೀಡುವಂತೆ ಸಂಸದರು ಕೇಂದ್ರ ಕೃಷಿ ಸಚಿವರಲ್ಲಿ ಮನವಿ ಮಾಡಿದ್ದಾರೆ. ಕೇಂದ್ರ ಕೃಷಿ ಸಚಿವಾಲಯ, ಐಸಿಎಆರ್, ಸಿಪಿಸಿಆರ್‌ಐ ಮತ್ತು ರಾಜ್ಯ ಸರ್ಕಾರದ ಸಂಸ್ಥೆಗಳ ಸಮನ್ವಯದೊಂದಿಗೆ ಜಂಟಿ ಕ್ರಮ ಕೈಗೊಂಡು, ವಿಜ್ಞಾನಿಗಳು ಮತ್ತು ತೊಂದರೆಗೊಳಗಾದ ರೈತರೊಂದಿಗೆ ಸಂವಾದ ನಡೆಸುವುದರಿಂದ ಈ ಸಮಸ್ಯೆಯ ಕುರಿತು ವಾಸ್ತವಿಕ ನಿಖರ ಮಾಹಿತಿ ಲಭ್ಯವಾಗಲಿವೆ; ಇದು ರೋಗ ನಿಯಂತ್ರಣ ಕಾರ್ಯ ಬಲಪಡಿಸಿ ರೈತರ ಹಿತರಕ್ಷಿಸಲು ಮತ್ತು ಅಡಿಕೆ ವಲಯವನ್ನು ರಕ್ಷಿಸಲು ಪ್ರಬಲ ರಾಷ್ಟ್ರೀಯ ಯೋಜನೆಯನ್ನು ರೂಪಿಸುವ ಮೂಲಕ ಭಾರತದ ಅಡಿಕೆ ವಲಯದ ಸುಸ್ಥಿರತೆಯನ್ನು ಕಾಯ್ದುಕೊಳ್ಳಲು ಸಹಕಾರಿಯಾಗಲಿದೆ ಎಂದು ಕ್ಯಾ.ಚೌಟ ವಿಶ್ವಾಸ ವ್ಯಕ್ತಪಡಿಸಿದ್ದಾರೆ.**

ಮಂತ್ರಿಯಾಗಿ, ಉಪಮುಖ್ಯಮಂತ್ರಿಯಾಗಿ ಸಾಕಷ್ಟು ಅನುಭವ, ಪಕ್ಷದ ಹೈಕಮಾಂಡ್‌ನ ಸಂಪೂರ್ಣ ಬೆಂಬಲ ಮತ್ತು 224 ಸದಸ್ಯರ ವಿಧಾನಸಭೆಯಲ್ಲಿ ಎಲ್ಲರೊಂದಿಗೂ ಸ್ನೇಹದಿಂದ ನಡೆದುಕೊಳ್ಳುವ ಮೂಲಕ ಡಿ.ಕೆ.ಶಿವಕುಮಾರ್ ಹಿಂದಿನಂತಿಲ್ಲ. ಮುಖ್ಯಮಂತ್ರಿಯಾದ ನಂತರವೂ ಯಾವುದೇ ಬಿಗುಮಾನವಿಲ್ಲದೇ ಅತ್ಯಂತ ಸರಳತೆಯ ವ್ಯಕ್ತಿಯಾಗಿ ಸಂಪೂರ್ಣ ಬದಲಾಗಿದ್ದಾರೆ ಎಂದು ಅವರ ಒಂದು ಹಸನ್ಮುಖದ ನಗು, ಪ್ರತಿಪಕ್ಷದವರೂ ಸೇರಿದಂತೆ ರಾಜ್ಯದ ಜನತೆ ಕೂಡ ಮೆಚ್ಚುವಂತಾಗಿದ್ದಾರೆ.

## ಅಡೆತಡೆಗಳ ನಡುವೆಯೂ ಫೀನಿಕ್ಸ್‌ನಂತೆ ಎದ್ದು ನಿಂತ ಟ್ರಬಲ್ ಶೂಟರ್....

# ಡಿ.ಕೆ.ಶಿವಕುಮಾರ್ ಯುಗಾರಂಭ




ಮುಖ್ಯಮಂತ್ರಿಯಾಗಿ ಅಧಿಕಾರವಹಿಸಿಕೊಂಡ ನಂತರ ಡಿ.ಕೆ.ಶಿವಕುಮಾರ್ ಸಾಕಷ್ಟು ಬದಲಾಗಿದ್ದಾರೆ. ಮೊದಲಿನ ಬಿಗುಮಾನ ಇಲ್ಲ. ಸದಾ ನಗುಮುಖ, ಎಲ್ಲರೊಂದಿಗೂ ಹಸನ್ಮುಖಿಯಾಗಿ ಮಾತನಾಡುವ ಮೂಲಕ ಅವರ ವರ್ತನೆಯಲ್ಲಿ ಭಾರೀ ಬದಲಾವಣೆಗಳಾಗಿದ್ದು, ಸರಳತೆ ಮತ್ತು ಸಹೃದಯತೆ ಎದ್ದು ಕಾಣುತ್ತಿದೆ.

- ದೊಡ್ಡ ಆಲಹಳ್ಳಿ ಕೆಂಪೇಗೌಡ ಶಿವಕುಮಾರ್ ಅವರು ನಿಯೋಜಿತ ಮುಖ್ಯಮಂತ್ರಿಯಾಗುತ್ತಲೇ ಅವರಲ್ಲಿ ಮಹತ್ತರ ಬದಲಾವಣೆಗಳು ಕಂಡು ಬಂದವು. ತಮ್ಮ ಸಚಿವ ಸಂಪುಟ ಸೇರ್ಪಡೆಯಾಗುವ ಸಹೋದ್ಯೋಗಿಗಳನ್ನು ಸ್ವತಃ ತಾವೇ ಫೋನ್ ಮಾಡಿ ಪ್ರಮಾಣವಚನ ಸ್ವೀಕರಿಸಲು ಆಗಮಿಸುವಂತೆ ಆಹ್ವಾನಿಸಿದರು.
- ಅಷ್ಟು ಮಾತ್ರವಲ್ಲದೇ ವಿಶೇಷ ಆಹ್ವಾನಿತರಿಗೂ ಕೂಡ ಸ್ವತಃ ಶಿವಕುಮಾರ್ ಅವರೇ ಫೋನ್ ಮಾಡಿ ಹಿರಿಯರಿಗೆ ಆಹ್ವಾನಿಸಿ, ಆಶೀರ್ವದಿಸುವಂತೆ ಮನವಿ ಮಾಡಿಕೊಂಡರೆ, ಆಪ್ತರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಸಂತೋಷ ದಲ್ಲಿ ಪಾಲ್ಗೊಳ್ಳುವಂತೆ ಕೋರಿದ್ದು, ಡಿ.ಕೆ. ಶಿವಕುಮಾರ್ ಅವರು, ರಾಜಕೀಯದಲ್ಲಿ ಹೊಸ ಸಂಪ್ರಾಯಕ್ಕೆ ನಾಂದಿ ಹಾಡಿದರು ಎಂದೇ ಬಣ್ಣಿಸಲಾಗುತ್ತಿದೆ.
- ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ನಂತರವೂ ಕೂಡ ಅವರು ದೊಡ್ಡ ನಮಸ್ಕಾರ ಹಾಕಿದರು. ಅದರಂತೆ ಮುಖ್ಯಮಂತ್ರಿಯಾಗಿ ವಿಧಾನಸಭೆ ಪ್ರವೇಶಕ್ಕೂ ಮುನ್ನ ಪ್ರಜಾಪ್ರಭುತ್ವದ ದೇಗುಲಕ್ಕೆ ನಮಸ್ಕರಿಸಿ ಪ್ರವೇಶಿಸಿದರು. ಅನಂತರ ತಮ್ಮ ಕೋಣೆಯಲ್ಲೂ ಕೂಡ ದೇವರ ಫೋಟೋ ಗಳಿಗೆ ಪೂಜೆ ಸಲ್ಲಿಸುವ ಮೂಲಕ ತಮ್ಮ ಆಸನದಲ್ಲಿ ಕುಳಿತರು. ಕಾಂಗ್ರೆಸ್ ಪಕ್ಷ ಮತ್ತು ರಾಜ್ಯ ರಾಜಕೀಯದಲ್ಲಿ ಒಂದು ಬದಲಾವಣೆಗೆ ನಾಂದಿ ಹಾಡಿದರು.
- 64 ವರ್ಷದ ಒಕ್ಕಲಿಗ ಸಮುದಾಯದ ನಾಯಕ ಡಿ.ಕೆ.ಶಿವಕುಮಾರ್ ಅವರು, ಕರ್ನಾಟಕದ ಮುಖ್ಯಮಂತ್ರಿ ಯಾಗುವ ಮಹತ್ವಾಕಾಂಕ್ಷೆ ಬಹಳ ಹಿಂದಿನಿಂದಲೂ ಪೋಷಿಸಿಕೊಂಡು ಬಂದಿದ್ದರು. ಕೆಪಿಸಿಸಿ ಅಧ್ಯಕ್ಷರಾಗಿ 2023ರಲ್ಲೇ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೇ ಸಿಎಂ ಆಗಬೇಕಿತ್ತು. ಆದರೆ ಕಾರಣಾಂತರಗಳಿಂದ ಕೈಗೂಡಲಿಲ್ಲ. ಆದರೆ, ಶಿವಕುಮಾರ್ ಅವರು ತಾಳ್ಮೆ ಕಳೆದುಕೊಳ್ಳಲಿಲ್ಲ. ಪಕ್ಷದ ನಿಷ್ಠೆ ಬದಲಿಸಲಿಲ್ಲ. ಮತ್ತಷ್ಟು ಗಟ್ಟಿಯಾಗಿ ನಿಷ್ಠೆಯನ್ನು ಪ್ರತಿಪಾದಿಸಿದರು. ಎಂದಿನಂತೆ ತಮ್ಮ ದೈವಭಕ್ತಿ ಮುಂದುವರೆಸಿ 'ಪ್ರಾರ್ಥನೆ ಎಂದಿಗೂ ಹುಸಿಯಾಗುವುದಿಲ್ಲ' ಎಂದು ಹೇಳುತ್ತಲೇ ಸಹನೆಯಿಂದ ತಮ್ಮ ಹಕ್ಕು ಪ್ರತಿಪಾದಿಸುತ್ತ ಬಂದರು. ಕೊನೆಗೂ ಅವರ ಹಕ್ಕಿನ ಬೇಡಿಕೆಗೆ ಪಕ್ಷದ ಹೈಕಮಾಂಡ್ ಸಮ್ಮತಿಸುವ ಮೂಲಕ ಸಿಎಂ ಸ್ಥಾನ ಒಲಿದು ಬಂದು ಅಧಿಕಾರ ಸ್ವೀಕರಿಸಿದರು.
- ಮಂತ್ರಿಯಾಗಿ, ಉಪಮುಖ್ಯಮಂತ್ರಿಯಾಗಿ ಸಾಕಷ್ಟು ಅನುಭವ, ಪಕ್ಷದ ಹೈಕಮಾಂಡ್‌ನ ಸಂಪೂರ್ಣ ಬೆಂಬಲ ಮತ್ತು 224 ಸದಸ್ಯರ ವಿಧಾನಸಭೆಯಲ್ಲಿ ಎಲ್ಲರೊಂದಿಗೂ ಸ್ನೇಹದಿಂದ ನಡೆದುಕೊಳ್ಳುವ ಮೂಲಕ ಡಿ.ಕೆ.ಶಿವಕುಮಾರ್ ಹಿಂದಿನಂತಿಲ್ಲ. ಮುಖ್ಯಮಂತ್ರಿಯಾದ ನಂತರವೂ ಯಾವುದೇ ಬಿಗುಮಾನವಿಲ್ಲದೇ ಅತ್ಯಂತ ಸರಳತೆಯ ವ್ಯಕ್ತಿಯಾಗಿ ಸಂಪೂರ್ಣ ಬದಲಾಗಿದ್ದಾರೆ ಎಂದು ಅವರ ಒಂದು ಹಸನ್ಮುಖದ ನಗು, ಪ್ರತಿಪಕ್ಷದವರೂ ಸೇರಿದಂತೆ ರಾಜ್ಯದ ಜನತೆ ಕೂಡ ಮೆಚ್ಚುವಂತಾಗಿದ್ದಾರೆ.
- ಇದೀಗ ನನ್ನ ಮುಂದಿನ ಗುರಿ 2028ರ ವಿಧಾನಸಭಾ ಚುನಾವಣೆಯಲ್ಲೂ ಪಕ್ಷವನ್ನು ಗೆಲ್ಲಿಸುವ ರೀತಿಯಲ್ಲಿ ಕೆಲಸ ಮಾಡುವ ಮೂಲಕ ಜನರ ವಿಶ್ವಾಸ ಉಳಿಸಿ ಬೆಳೆಸಿಕೊಂಡು ಹೋಗಬೇಕಾಗಿದೆ ಎಂದು ಪದೇ ಪದೇ ಹೇಳುವ ಡಿ.ಕೆ.ಶಿವಕುಮಾರ್ ಅವರು, ಆ ದಿಸೆಯಲ್ಲಿ ಪಕ್ಷದ ವರ್ಚಸ್ಸು ಮುಂದಿನ ಎರಡು ವರ್ಷಗಳಲ್ಲಿ ಬೆಳೆದು ಜನಮನದಲ್ಲಿ ರಾರಾಜಿಸುವಂತೆ ಮಾಡಬೇಕಾಗಿದೆ ಎನ್ನುತ್ತಾರೆ.
- ಬೆಂಗಳೂರು ಅಭಿವೃದ್ಧಿ ಸಚಿವರಾಗಿ, ರಾಜ್ಯ ರಾಜಧಾನಿ ಯಲ್ಲಿ ಹಲವಾರು ದೊಡ್ಡ ಯೋಜನೆಗಳನ್ನು ಜಾರಿಗೆ ತರಲು ಪ್ರಾರಂಭಿಸಿದ್ದ ಡಿ.ಕೆ.ಶಿವಕುಮಾರ್ ಅವರಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಐದು ಪಾಲಿಕೆಗಳಿಗೆ ಚುನಾವಣೆಗಳು ಮತ್ತು ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆಗಳು ಮೊದಲ ಪ್ರಮುಖ ಪರೀಕ್ಷೆಯಾಗಲಿವೆ. ಚುನಾವಣೆಗೆ ಮುನ್ನ ಬೆಂಗಳೂರು ಮಾದರಿಯಾಗಿ ಅಭಿವೃದ್ಧಿಪಡಿಸಿ ಜನರಿಗೆ ಮಾತುಕೊಟ್ಟಂತೆ ವಿಶ್ವಾಸ ಉಳಿಸಿಕೊಂಡು, ಗ್ರೇಟರ್ ಬೆಂಗಳೂರಿನ ಎಲ್ಲ ಪಾಲಿಕೆಗಳಲ್ಲಿ ಗೆಲುವು ಸಾಧಿಸುವ ಗುರಿ ಅವರ ಮುಂದಿದೆ. ಅವರೆಂದೂ ಹಿಡಿದ ಕೆಲಸ ಮಾಡದೇ ಬಿಡುವುದಿಲ್ಲ. ಇದೀಗ ಬೆಂಗಳೂರು ಜಗಮಗಿಸುವಂತೆ ಮಾಡುವ ಮೂಲಕ ಗೆಲುವು ಸಾಧಿಸುವ ವಿಶ್ವಾಸವನ್ನೂ ವ್ಯಕ್ತಪಡಿಸುತ್ತಾರೆ.
- ರಾಜಕೀಯ ಬೇರೆ, ಅಭಿವೃದ್ಧಿ ಬೇರೆ. ರಾಜಕೀಯ ಏನೇ ಇದ್ದರೂ ಅದು ಚುನಾವಣೆಗೆ ಸೀಮಿತ. ಚುನಾವಣೆಯ ನಂತರ ಅಭಿವೃದ್ಧಿಯೇ ನನ್ನ ಗುರಿ. ಕೇಂದ್ರದೊಂದಿಗೆ ಕಾಲು ಕೆದರಿ ಜಗಳಕ್ಕೆ ನಿಲ್ಲುವುದಿಲ್ಲ. ರಾಜ್ಯಕ್ಕೆ ಬರಬೇಕಾದ ಅಭಿವೃದ್ಧಿ ಅನುದಾನಕ್ಕಾಗಿ ಒಂದಲ್ಲ ಹತ್ತು ಬಾರಿ ದೆಹಲಿಗೆ ಹೋಗುತ್ತೇನೆ. ಪ್ರಧಾನಿ ಸೇರಿದಂತೆ ಎಲ್ಲ ಮಂತ್ರಿಗಳನ್ನೂ ಭೇಟಿಯಾಗಿ ರಾಜ್ಯದ ಯೋಜನೆಗಳನ್ನು ತ್ವರಿತಗೊಳಿ ಸುವಂತೆ ಮಾಡುವುದು ಮತ್ತು ಅನುದಾನ ಬಿಡುಗಡೆ ಮಾಡಿಸುವುದಕ್ಕಾಗಿ ಯಾವುದೇ ಹಿಂದೇಟು ಇಲ್ಲದೇ ದೆಹಲಿಗೆ ಹೋಗಿ ಕೆಲಸಗಳನ್ನು ಮಾಡಿಕೊಂಡು ಬರುತ್ತೇನೆ ಎನ್ನುವ ಅವರಲ್ಲಿ ರಾಜ್ಯದ ಅಭಿವೃದ್ಧಿಯ ತುಡಿತ ಎಷ್ಟಿದೆ ಎಂಬುದನ್ನು ಅವರ ಮಾತುಗಳಲ್ಲಿ ಕಾಣಬಹುದು.
- ಸಂಸ್ಕೃತ ಶ್ಲೋಕಗಳನ್ನು ಸಲೀಸಾಗಿ ಪಠಿಸುವ ಒಕ್ಕಲಿಗ ನಾಯಕ ಡಿ.ಕೆ.ಶಿವಕುಮಾರ್, ಮೃದು–ಹಿಂದುತ್ವ ಪ್ರದರ್ಶಿ ಸುವ ಆರೋಪವೂ ಇದೆ. ಆದರೆ ಹಿಂದೆಂದೂ ಎಂದರೆ ಸಹನೆ ಮತ್ತು ಸಹೋದರತೆಯ ಸಂಕೇತ. ಯಾರನ್ನೂ ದ್ವೇಷಿಸದೇ ಎಲ್ಲರೂ ನನ್ನವರು ಎಂದು ಅಪ್ಪಿಕೊಳ್ಳು ವುದಾಗಿದೆ. ಅದನ್ನೇ ನಾನು ಅನುಸರಿಸುತ್ತಿದ್ದೇನೆ. ಇದರಲ್ಲಿ ಹಿಂಜರಿಕೆ ಏಕೆ ಎಂದು ಪ್ರಶ್ನಿಸುವ ಶಿವಕುಮಾರ್ ಅವರು, ಇದೀಗ ಬಹುಸಂಖ್ಯಾತ ಹಿಂದೂಗಳ ಮನಸೂರೆಗೊಂಡಿದ್ದಾರೆ.
- ಡಿ.ಕೆ.ಶಿವಕುಮಾರ್ ಅವರ ನಾಯಕತ್ವವು ಹಳೆಯ ಮೈಸೂರು ಪ್ರದೇಶದಲ್ಲಿ ಪ್ರಬಲವಾದ ಒಕ್ಕಲಿಗ ಸಮುದಾಯದ ಬೆಂಬಲಗಳಿಸಲು ಪಕ್ಷಕ್ಕೆ ಸಹಾಯ ಮಾಡುತ್ತದೆ ಎಂದು ನಂಬಿರುವಂತೆಯೇ, ಇಡೀ ಸಮುದಾಯ ಇಂದು ಅವರ ಬೆಂಬಲಕ್ಕೆ ನಿಂತಿದೆ. 'ಮೃದು–ಹಿಂದುತ್ವ"ದ ಇಮೇಜ್ ಕಾಂಗ್ರೆಸ್‌ನ "ಅಲ್ಪಸಂಖ್ಯಾತರ ಓಲೈಕೆ" ಎಂಬ ವಿರೋಧ ಪಕ್ಷದ ಆರೋಪಗಳನ್ನು ಮಂದಗೊಳಿಸುವಲ್ಲಿ ಅವರ ಈ ಬದಲಾವಣೆ ದೊಡ್ಡ ಮಟ್ಟದಲ್ಲಿ ಸಹಾಯ ಮಾಡುತ್ತಿದೆ ಎಂದು ಪಕ್ಷದ ನಾಯಕರ ಅಭಿಪ್ರಾಯ.
- ಪಕ್ಷವು ಅಲ್ಪಸಂಖ್ಯಾತ ಸಮುದಾಯವನ್ನು ಲಘುವಾಗಿ ತೆಗೆದುಕೊಳ್ಳಲು ಸಾಧ್ಯವಿಲ್ಲ, ಡಿ.ಕೆ.ಶಿವಕುಮಾರ್ ಅವರು ಹಿಂದುತ್ವ ಪ್ರತಿಪಾದಿಸಿದರೂ, ಪದೇ ಪದೇ ಅಲ್ಪಸಂಖ್ಯಾತರೂ ಕೂಡ ನಮ್ಮ ಬ್ರದರ್ಸ್ ಎಂದು ಪುನರುಚ್ಚರಿಸುತ್ತಾರೆ. ದಾವಣಗೆರೆ ಉಪಚುನಾವಣೆಯ ನಂತರ ಸಿಎಂ ಮತ್ತು ಅವರ ತಂಡವು ಉತ್ತಮ ಸಮತೋಲನ ಕಾಯ್ದುಕೊಳ್ಳುವ ದಿಸೆಯಲ್ಲಿ ದಿಟ್ಟ ಹೆಜ್ಜೆಯನ್ನಿಡುತ್ತಿದ್ದಾರೆ.

**• ಕನಕಪುರ ಬಳಿಯ ಮೇಕೆದಾಟು ಜಲಾಶಯ ಯೋಜನೆ ಮತ್ತು ಇತರ ಯೋಜನೆಗಳ ಕನಸು ಹೊತ್ತಿರುವ ಡಿ.ಕೆ. ಶಿವಕುಮಾರ್ ಅವರು, ಇದೀಗ ಅಭಿವೃದ್ಧಿಗಾಗಿ ನನಗೆ ಯಾರೂ ವಿರೋಧಿಗಳಿಲ್ಲ. ಎಲ್ಲರೂ ನನ್ನವರೇ ಎಂಬ ಮಂತ್ರ ಜಪಿಸುತ್ತ ದಿಟ್ಟ ಹೆಜ್ಜೆಯನ್ನಿಡುತ್ತಿದ್ದಾರೆ.**

- ಬಿಕ್ಕಟ್ಟುಗಳನ್ನು ನಿಭಾಯಿಸುವುದು ಮತ್ತು ಅವುಗಳನ್ನು ಅವಕಾಶಗಳಾಗಿ ಪರಿವರ್ತಿಸುವುದು ಶಿವಕುಮಾರ್ ಅವರಿಗೆ ಹೊಸದೇನಲ್ಲ. 2017ರಲ್ಲಿ ಆದಾಯ ತೆರಿಗೆ ಇಲಾಖೆ ದಾಳಿಗಳು ಮತ್ತು ನಂತರದ ಜಾರಿ ನಿರ್ದೇಶನಾಲಯ ಪ್ರಕರಣಗಳ ನಂತರ ಅವರು ತಮ್ಮ ರಾಜಕೀಯ ಜೀವನದಲ್ಲಿ ಅತ್ಯಂತ ಕೆಟ್ಟ ಬಿಕ್ಕಟ್ಟನ್ನು ಎದುರಿಸಿದರು. ಕೇಂದ್ರ ತನಿಖಾ ಸಂಸ್ಥೆಗಳ ಕಣ್ಗಾವಲಿಗೆ ಒಳಗಾದರೂ, ರಾಜಕೀಯವಾಗಿ, ಅವರು ಫೀನಿಕ್ಸ್‌ನಂತೆ ಹೊರಹೊಮ್ಮಿ, ತಮ್ಮ ಎಲ್ಲ ಕಳಂಕಗಳನ್ನು ತೊಳೆದುಕೊಂಡು ರಾಜ್ಯದ ಜನರ ಮುಂದೆ ತಾವು ಪರಿಶುದ್ಧ ವ್ಯಕ್ತಿ ಎಂದು ಸಾಬೀತುಪಡಿಸಿದ್ದಲ್ಲದೇ, ಪಕ್ಷದ ಹೈಕಮಾಂಡ್ ಮತ್ತು ಮತದಾರರ ಬೆಂಬಲದೊಂದಿಗೆ ಇಂದು ರಾಜ್ಯದ ಮುಖ್ಯಮಂತ್ರಿಗಳಾಗಿ ಕಂಗೊಳಿಸುತ್ತ ಜನರ ಪ್ರೀತ್ಯಾಭಿಮಾನಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.
- ಒಬ್ಬ ಕಠಿಣ ವ್ಯಕ್ತಿ ಇಷ್ಟೊಂದು ಹೃದಯ ಪರಿವರ್ತನೆ ಯಾಗುವುದು ಅತ್ಯಂತ ವಿರಳ. ಆದರೆ, ಡಿ.ಕೆ.ಶಿವಕುಮಾರ್ ಅವರ ಪ್ರಕಾರ, 'ದೈವಭಕ್ತಿಯಿಂದ ಎಲ್ಲವೂ ಸಾಧ್ಯವಿದೆ. ಅದೆಲ್ಲವೂ ದೈವ ಸಂಕಲ್ಪದಂತೆ ನಡೆಯುತ್ತಿದೆ' ಎಂದು ತಮ್ಮ ಭಕ್ತಿಯನ್ನು ಪ್ರದರ್ಶಿಸುವ ಮೂಲಕ, ಮುಂದಿನ ದಾರಿ ಜನತಾ ಜನಾರ್ದನನ ಸೇವೆ ನನಗೆ ದೈವದ ಅಪ್ಪಣೆಯಾಗಿದೆ ಎಂದು ಹೇಳುವ ಮೂಲಕ ಕನಕಪುರದ ಜನರ ಮನಸೂರೆ ಗೊಂಡು, ಮುಂದೆ ಅಭಿವೃದ್ಧಿಯ ಹೊಳೆ ಹರಿಯುತ್ತದೆ ಎಂಬ ವಿಶ್ವಾಸ ಜನರಿಗಿತ್ತರು. ■



### ಹೃದಯವಂತ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವೈಯಕ್ತಿಕವಾಗಿ ಸಾಕಷ್ಟು ಶ್ರೀಮಂತರಿದ್ದರೂ, ಅಷ್ಟೇ ದೈವಭಕ್ತರು ಮತ್ತು ಹೃದಯವಂತರೂ ಆಗಿದ್ದಾರೆ. ಅವರ ಈ ಹೃದಯವಂತಿಕೆಗೆ ಸಾಕ್ಷಿ ಎಂಬಂತೆ ಮುಖ್ಯಮಂತ್ರಿಯಾದ ನಂತರ ತಮ್ಮ ಸ್ವಕ್ಷೇತ್ರ ಕನಕಪುರ ಮೆಟ್ರೋದಲ್ಲಿ ಪ್ರಯಾಣಿಸಿ ಸರಳತೆ ಮೆರೆದರು. ಸುಮಾರು 60 ಕಿಮೀವರೆಗೂ ಅವರ ಕ್ಷೇತ್ರದ ಅಭಿಮಾನಿಗಳು ಸಾಲುಗಟ್ಟಿ ನಿಂತು ಅವರನ್ನು ಸ್ವಾಗತಿಸಿದ್ದನ್ನು ಕಂಡ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಒಂದು ಕ್ಷಣ ಜನರ ಅಭಿಮಾನ ಕಂಡು ಭಾವುಕರಾಗಿ ಕಣ್ಣೊರೆಸಿಕೊಂಡರು. ನಾನು ನಿಮ್ಮಿಂದ ನಿಮಗಾಗಿ ಮುಖ್ಯಮಂತ್ರಿಯಾಗಿದ್ದೇನೆ. ನಿಮ್ಮ ಕನಸು ನನಸಾಗಿದೆ. ನಿಮ್ಮ ಏಳ್ಗೆಯೇ ನನ್ನ ಗುರಿ ಎಂದು ಹೃದಯತುಂಬಿ ಹೇಳಿದರು.



**ನಿತ್ಯ ಪಂಚಾಂಗ 10.06.2026 ಬುಧವಾರ**



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

**ಸಂಕಷ್ಟ ಚತುರ್ಥಿ**
**ಕಂಚಿ ವರದರಾಜ ರಥ,**
**ಮಾರೇಹಳ್ಳಿ ನೃಸಿಂಹ ರಥ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಪ್ರತಿಪಕ್ಷ ನಾಯಕರ ಭೇಟಿ ಹಿಂದಿದೆ ರಾಜಕೀಯ ತಂತ್ರ ಸಿಎಂ ಡಿ.ಕೆ.ಶಿವಕುಮಾರ್ ನಡೆಗೆ ಎಚ್‌ಡಿಕೆ ವ್ಯಂಗ್ಯ

**ಬೆಂಗಳೂರು, ಜೂ.9:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನಡುವಿನ ರಾಜಕೀಯ ವಾಕ್ಸಮರ ಈಗ ಮತ್ತೊಂದು ಹಂತಕ್ಕೆ ತಲುಪಿದೆ. ಮುಖ್ಯಮಂತ್ರಿಯಾದ ಬಳಿಕ ಡಿ.ಕೆ.ಶಿವಕುಮಾರ್ ಅವರು ಹಿರಿಯ ನಾಯಕರನ್ನು ಭೇಟಿಯಾಗಿ ಸಲಹೆ ಪಡೆಯುತ್ತಿರುವ ನಡೆಗೆ ಎಚ್.ಡಿ. ಕುಮಾರಸ್ವಾಮಿ ಅವರು ವ್ಯಂಗ್ಯಭರಿತ ಪ್ರತಿಕ್ರಿಯೆ ನೀಡಿದ್ದಾರೆ.

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಡಿ.ಕೆ. ಶಿವಕುಮಾರ್ ಅವರು ಪಕ್ಷಾತೀತವಾಗಿ ಎಲ್ಲ ನಾಯಕರನ್ನು ಭೇಟಿ ಮಾಡುತ್ತಿದ್ದಾರೆ. ವಿರೋಧ ಪಕ್ಷಗಳ ಹಿರಿಯ ನಾಯಕರ ಮನೆಗೆ ಖುದ್ದಾಗಿ ತೆರಳಿ, ಸರ್ಕಾರದ ಸುಗಮ ಆಡಳಿತಕ್ಕಾಗಿ ಸಲಹೆ ಹಾಗೂ ಮಾರ್ಗದರ್ಶನ ನೀಡಿ ಎಂದು ಮನವಿ ಮಾಡುತ್ತಿದ್ದಾರೆ. ಅವಕಾಶ ನೀಡಿದರೆ ಎಚ್.ಡಿ.ಕೆ. ಅವರನ್ನೂ ಭೇಟಿಯಾಗಿ ಚರ್ಚಿಸಲು ಸಿದ್ಧ ಎಂದಿದ್ದಾರೆ. ಡಿ.ಕೆ. ಶಿವಕುಮಾರ್ ಅವರ ಈ



ಸೌಜನ್ಯದ ನಡೆಗೆ ಎಚ್.ಡಿ. ಕುಮಾರಸ್ವಾಮಿ ಅವರು ತಿರುಗೇಟು ನೀಡಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಎಚ್‌ಡಿಕೆ, ಸಿಎಂ ಅವರ ಸೌಮ್ಯ ನಡವಳಿಕೆ ಹಿಂದಿನ ಉದ್ದೇಶವನ್ನು ಪ್ರಶ್ನಿಸಿದ್ದಾರೆ. ಅತಿ ವಿನಯದ ಪ್ರದರ್ಶನದ ಹಿಂದೆ ರಾಜಕೀಯ ತಂತ್ರ ಅಡಗಿದೆ ಎಂದು ಆರೋಪಿಸಿದ್ದಾರೆ. ಹಳೆಯ ದಿನಗಳನ್ನು ನೆನಪಿಸಿಕೊಂಡ ಎಚ್‌ಡಿಕೆ, ಎರಡು ಬಾರಿ ಮುಖ್ಯಮಂತ್ರಿಯಾಗಿ ಕುಮಾರಸ್ವಾಮಿ ಏನು ಹರಿದಿದ್ದಾರೆ ಎಂದು ಇದೇ ಡಿ.ಕೆ. ಶಿವಕುಮಾರ್ ಹಿಂದೆ ಸಾರ್ವಜನಿಕವಾಗಿ ಕೇಳಿದ್ದರು. ನಾನೇನೂ ಹರಿದಿಲ್ಲ ಎಂದ ಮೇಲೆ ಈಗ ನನ್ನ ಬಳಿ ಬಂದು ಯಾವ ಸಲಹೆ ಕೇಳುತ್ತಾರೆ. ನಾನಾದರೂ ಅವರಿಗೆ ಏನು ಸಲಹೆ ಕೊಡಲು ಸಾಧ್ಯ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಡಿ.ಕೆ. ಶಿವಕುಮಾರ್ ಅವರಿಗೆ ಸದ್ಯ ಮಾಧ್ಯಮಗಳಲ್ಲಿ ಪ್ರಚಾರ ಮತ್ತು ಫೋಟೋಗಳಷ್ಟೇ ಬೇಕಾಗಿದೆ. ಅದಕ್ಕಾಗಿಯೇ ಅವರು ಎಲ್ಲ ನಾಯಕರ ಮನೆ ಬಾಗಿಲಿಗೆ ಹೋಗುತ್ತಿದ್ದಾರೆ ಎಂದು ಟೀಕಿಸಿದರು. ಅಷ್ಟೇ ಅಲ್ಲದೆ, 'ಅತಿ ವಿನಯಂ ಧೂರ್ತ ಲಕ್ಷಣಂ' ಎಂಬ ಗಾದೆ ಮಾತನ್ನು ಬಳಸುವ ಮೂಲಕ ಸಿಎಂ ಡಿಕೆಶಿ ಅವರ ನಡೆ ರಾಜಕೀಯ ಗಿಮಿಕ್ ಎಂದು ಲೇವಡಿ ಮಾಡಿದ್ದಾರೆ. ಡಿ.ಕೆ. ಶಿವಕುಮಾರ್ ಅವರ ಪಕ್ಷಾತೀತ ಭೇಟಿಯ ತಂತ್ರಕ್ಕೆತಂತ್ರಕ್ಕೆ ಎಚ್.ಡಿ. ಕುಮಾರಸ್ವಾಮಿ ಅವರು ವ್ಯಂಗ್ಯದ ಮೂಲಕವೇ ಕೌಂಟರ್ ಕೊಟ್ಟಿದ್ದಾರೆ.

# ಸಿಎಸ್‌ಆರ್ ಅನುದಾನದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆ: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

**ಬೆಂಗಳೂರು, ಜೂ.9:** ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ಅನುದಾನದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಪ್ರಥಮ ಆದ್ಯತೆ ನೀಡಲಾಗುವುದು ಮಂಡ್ಯ ಜಿಲ್ಲೆಯ ರಸ್ತೆಗಳ ಅಭಿವೃದ್ಧಿಗಾಗಿ ಈಗಾಗಲೇ 54 ಕೋಟಿ ರೂಪಾಯಿಗಳ ಸಿಎಸ್‌ಆರ್ ಅನುದಾನವನ್ನು ಮೀಸಲಿಡಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

**ಎಲ್ಲ ದೇಶಗಳಲ್ಲೂ ಏರಿಕೆ:**

ದೇಶದಲ್ಲಿ ಇಂಧನ ಹಾಗೂ ಗ್ಯಾಸ್ ಬೆಲೆ ಏರಿಕೆಯಾಗುತ್ತಿರುವ ಕುರಿತು ಕಾಂಗ್ರೆಸ್ ಟೀಕೆಗಳಿಗೆ ಉತ್ತರಿಸಿದ ಕುಮಾರಸ್ವಾಮಿ, "ಜಾಗತಿಕ ಮಟ್ಟದಲ್ಲಿ ನಡೆಯುತ್ತಿರುವ ಯುದ್ಧಗಳ ಹಿನ್ನೆಲೆಯಲ್ಲಿ ಈ ಬೆಲೆ ಏರಿಕೆಯಾಗಿದೆ.

ಇದು ಕೇವಲ ಭಾರತದಲ್ಲಿ ಮಾತ್ರ ಆಗುತ್ತಿಲ್ಲ, ವಿಶ್ವದ ಎಲ್ಲಾ ದೇಶಗಳೂ ಈ ಪರಿಸ್ಥಿತಿಯನ್ನು ಎದುರಿಸುತ್ತಿವೆ. ಆದರೆ ಕಾಂಗ್ರೆಸ್ನವರು ಕರ್ನಾಟಕದಲ್ಲಿ ಎಲ್ಲದರ ಬೆಲೆಯನ್ನೂ ಏರಿಸಿದ್ದಾರೆ. ಒಂದು ವೇಳೆ ಈ ಸಂದರ್ಭದಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಿದ್ದರೆ ಪರಿಸ್ಥಿತಿ ಏನಾಗುತ್ತಿತ್ತು" ಎಂದು ಪ್ರಶ್ನಿಸುವ ಮೂಲಕ ಕಾಂಗ್ರೆಸ್ ನಾಯಕರ ಆರೋಪಗಳಿಗೆ ಎಚ್.ಡಿ. ಕುಮಾರಸ್ವಾಮಿ ತಿರುಗೇಟು ನೀಡಿದರು.

# ಮಾಜಿ ಪ್ರಧಾನಿ ಬಗ್ಗೆ ಕಾಳಜಿ ಬೇಕಿಲ್ಲ: ವಿಜಯೇಂದ್ರ ತಿರುಗೇಟು

**ಬೆಂಗಳೂರು, ಜೂ.9:** ಕರ್ನಾಟಕದ ಕಾಂಗ್ರೆಸ್ ಪಕ್ಷದ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು, ಜೆಡಿಎಸ್ ವರಿಷ್ಠ ಎಚ್.ಡಿ ದೇವೇಗೌಡರ ಕುರಿತು ಕೃತಕ ಕಾಳಜಿ ತೋರಿಸುವ ಅವಶ್ಯಕತೆಯಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಅವರು, ದೇಶದ ಅತ್ಯುನ್ನತ ಪ್ರಧಾನಿ ಸ್ಥಾನವನ್ನು ಅಲಂಕರಿಸಿ, ಹೆಮ್ಮೆಯ ಕನ್ನಡಿಗ ಎನಿಸಿಕೊಂಡಿರುವ ಎಚ್.ಡಿ. ದೇವೇಗೌಡ ಅವರನ್ನು, ಪ್ರಧಾನಿ ಪದವಿಯಿಂದ ಕೆಳಗಿಳಿಸಿರುವುದನ್ನು ಕಾಂಗ್ರೆಸ್ ಪಕ್ಷದ ನಾಯಕರು ಮರೆಯಬಾರದು ಎಂದು ತಿರುಗೇಟು ನೀಡಿದ್ದಾರೆ.

ಬಿಜೆಪಿ, ದೇವೇಗೌಡ ಅವರನ್ನು ಅತ್ಯಂತ ಗೌರವದಿಂದ ನಡೆಸಿಕೊಂಡಿದೆ. ಭಾರತದ ಸಮಗ್ರತೆ ಉಳಿಯಬೇಕಾದರೆ, ಅಭಿವೃದ್ಧಿ ಹೊಂದಬೇಕಾದರೆ, ಅದು ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತದಿಂದ ಮಾತ್ರ ಸಾಧ್ಯ ಎಂಬ ನಂಬಿಕೆಯಿಂದ, ದೇವೇಗೌಡ ಅವರು, ಬಿಜೆಪಿಯನ್ನು ಬೆಂಬಲಿಸಿ, ಎನ್.ಡಿ.ಎ ಸೇರಿದ್ದಾರೆ. ಅದನ್ನು ಸಹಿಸಲಾಗದ ಕಾಂಗ್ರೆಸ್, ಅವರ ಹೆಸರು ಬಳಸಿಕೊಂಡು, ರಾಜಕಾರಣ ಮಾಡಲು ಮುಂದಾಗಿರುವುದು ಖಂಡನೀಯ ಎಂದು ಟೀಕಿಸಿದ್ದಾರೆ.

# ಕಾರ್ತಿಕ್ ಘೋರ್ಪಡೆ ನಿಧನಕ್ಕೆ ವಿಜಯೇಂದ್ರ ಸಂತಾಪ

**ಬೆಂಗಳೂರು, ಜೂ.9:** ಸಂಡೂರು ರಾಜವಂಶಸ್ಥರು, ಜನಪ್ರಿಯ ನಾಯಕರು, ಆತ್ಮೀಯರೂ ಆಗಿದ್ದ ಕಾರ್ತಿಕ್ ಘೋರ್ಪಡೆ ಅವರ ಅಕಾಲಿಕ ನಿಧನದ ಸುದ್ದಿ ತೀವ್ರ ಆಘಾತವನ್ನುಂಟು ಮಾಡಿದೆ ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಸಾರ್ವಜನಿಕ ಜೀವನ ಮತ್ತು ಸಾಮಾಜಿಕ ಕಾರ್ಯಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಅವರು ಹಠಾತ್ ವಿಧಿವಶರಾಗಿರುವುದು ಸಾರ್ವಜನಿಕ ಕ್ಷೇತ್ರಕ್ಕೆ ತುಂಬಲಾರದ ನಷ್ಟ. ಮೃತರ ಆತ್ಮಕ್ಕೆ ದೇವರು ಸದ್ಗತಿಯನ್ನು ಕರುಣಿಸಲಿ ಎಂದು ಪ್ರಾರ್ಥಿಸುತ್ತೇನೆ. ಈ ತೀವ್ರ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದ ಎಲ್ಲ ಸದಸ್ಯರಿಗೆ, ಆಪ್ತರಿಗೆ ಹಾಗೂ ಅಭಿಮಾನಿಗಳಿಗೆ ಭಗವಂತ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

# ಖಾತೆ ಕ್ಯಾತೆ ದೆಹಲಿಗೆ ವರ್ಗ: ವರಿಷ್ಠರ ಭೇಟಿಗೆ ತೆರಳಿದ ಕೃಷ್ಣ ಬೈರೇಗೌಡ

**ಬೆಂಗಳೂರು, ಜೂ.9:** ಮುಖ್ಯಮಂತ್ರಿ ಹಾಗೂ ಸಚಿವರು ಪ್ರಮಾಣವಚನ ಸ್ವೀಕರಿಸಿ ವಾರವಾಗುತ್ತಿದ್ದರೂ ಖಾತೆ ಹಂಚಿಕೆ ಬಿಕ್ಕಟ್ಟು ಮಾತ್ರ ಬಗೆಹರಿದಿಲ್ಲ. ಬದಲಾಗಿ ಈ ಬಿಕ್ಕಟ್ಟು ಬೆಂಗಳೂರಿನಿಂದ ದೆಹಲಿಗೆ ಸ್ಥಳಾಂತರಗೊಂಡಿದೆ.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಂಚಿಕೆ ಮಾಡಿರುವ ಖಾತೆಯ ಬಗ್ಗೆ ಒಬ್ಬರ ಹಿಂದೆ ಮತ್ತೊಬ್ಬರು ಎಂಬಂತೆ ಅಸಮಾಧಾನ ಹೊರಹಾಕುತ್ತಲೇ ಇದ್ದಾರೆ. ಬೆಂಗಳೂರು ನಗರಾಭಿ ವೃದ್ಧಿ ಖಾತೆಯನ್ನು ಪೂರ್ಣ ಪ್ರಮಾಣದಲ್ಲಿ ನೀಡಿಲ್ಲ ಎಂದು ಅಸಮಾಧಾನಗೊಂಡಿರುವ ಸಚಿವ ಕೃಷ್ಣ ಬೈರೇಗೌಡ ದೆಹಲಿಗೆ ತೆರಳಿದ್ದಾರೆ.

ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಗಮನಕ್ಕೆ ತಂದು ಖಾತೆ ಬದಲಾವಣೆಯ ಬೇಡಿಕೆ ಮುಂದಿಡಲಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ನೇರವಾಗಿ ಖಾತೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸದಿದ್ದರೂ ಕೃಷ್ಣ ಬೈರೇಗೌಡ ಅವರು ತಮಗೆ ವಹಿಸಿರುವ ಖಾತೆಯ ಕೆಲಸವನ್ನೇ ಆರಂಭಿಸಿಲ್ಲ. ಬಿಡಿಎ ಮತ್ತು ಬಿಎಂಆರ್‌ಡಿಎ ಹೊರತುಪಡಿಸಿ ಬೆಂಗಳೂರು ನಗರಾಭಿವೃದ್ಧಿ ಖಾತೆ ನೀಡಲಾಗಿದೆ. ಪೂರ್ಣ ಪ್ರಮಾಣದಲ್ಲಿ ನೀಡದಿದ್ದರೆ ಈ ಖಾತೆಯೇ ಬೇಡ ಎಂಬುದನ್ನು ಹೈಕಮಾಂಡ್ ಗಮನಕ್ಕೆ ಅವರು ತಂದಿದ್ದಾರೆ ಎನ್ನಲಾಗಿದೆ.

ಬೆಂಗಳೂರು ನಗರಾಭಿವೃದ್ಧಿ ಖಾತೆ ಮೇಲೆ ಸಚಿವ ಕೆ.ಜೆ.ಜಾರ್ಜ್ ಮತ್ತು ರಾಮಲಿಂಗಾರೆಡ್ಡಿಯವರು ಆಸಕ್ತಿ ತೋರಿದ್ದರು. ಬೇಕಿದ್ದರೆ ಅವರಿಗೇ ಈ ಖಾತೆ ನೀಡಲಿ ಎಂಬ ಅಭಿಪ್ರಾಯವನ್ನು ಕೃಷ್ಣ ಬೈರೇಗೌಡ ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ.

ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಕಂದಾಯ ಖಾತೆಯ ಸಚಿವರಾಗಿ ಕಾರ್ಯ ನಿರ್ವಹಿಸಿದ್ದರು. ಕಂದಾಯ ಇಲಾಖೆಯಲ್ಲಿ ಮಾಡಿರುವ ಕೆಲಸದ ಬಗ್ಗೆ ಅವರಿಗೆ ಅಭಿಮಾನವಿದೆ.

ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಬೆಂಗಳೂರು ನಗರಾಭಿವೃದ್ಧಿ ಖಾತೆ ಕೊಡಲಿಲ್ಲ ಎಂಬ ಕಾರಣಕ್ಕೆ ರಾಜೀನಾಮೆ ನೀಡಿ ವರಿಷ್ಠರ ಮನವರಿಕೆ ನಂತರ ವಾಪಸ್ ಪಡೆದಿದ್ದಾರೆ. ಈಗ ಬೆಂಗಳೂರು ಖಾತೆ ಕೊಟ್ಟರೂ ಬೇಡ ಎಂದು ಹೇಳುತ್ತಿದ್ದಾರೆ.

ಸಚಿವ ಮುನಿಯಪ್ಪ ಕೂಡಾ ಖಾತೆ ಬದಲಾವಣೆ ಮಾಡುವಂತೆ ಮೊರೆ ಇಡುತ್ತಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ನೀಡಿರುವುದಕ್ಕೆ ಅವರು ಅಸಮಾಧಾನಗೊಂಡಿದ್ದಾರೆ. ಈ ಹಿಂದೆ ಇದೇ ಖಾತೆಯನ್ನು ಅವರು ವಹಿಸಿಕೊಂಡಿದ್ದರು. ಈಗ ಬೇರೊಂದು ಖಾತೆಗಾಗಿ ವರಿಷ್ಠರಲ್ಲಿ ಬೇಡಿಕೆ ಇಟ್ಟಿದ್ದಾರೆ.

ಈಗಾಗಲೇ ಹಂಚಿಕೆಯಾಗಿರುವ ಖಾತೆಗಳಲ್ಲಿ ಯಾವುದೇ ಬದಲಾವಣೆ ಮಾಡದ ಮುಖ್ಯಮಂತ್ರಿ ಪಕ್ಷದ ನಾಯಕರು, ವರಿಷ್ಠರ ಮೂಲಕ ವಹಿಸಿರುವ ಖಾತೆಗಳಲ್ಲಿಯೇ ಮುಂದುವರೆಯುವಂತೆ ಮನವೊಲಿಕೆ ಪ್ರಯತ್ನ ಮಾಡುತ್ತಿದ್ದಾರೆ. ಆದರೂ ಖಾತೆ ಬಗೆಗಿನ ಅಸಮಾಧಾನ ಮಾತ್ರ ತಣ್ಣಗಾದಂತೆ ಕಾಣುತ್ತಿಲ್ಲ.

**ಸಿಎಂಡಿ.ಕೆ.ಶಿವಕುಮಾರ್, ರಾಹುಲ್‌ಗಾಂಧಿ, ಕೆ.ಸಿ.ವೇಣುಗೋಪಾಲ್ ಅಂತಿಮ ದರ್ಶನ**

# ಸರ್ಕಾರಿ ಗೌರವದೊಂದಿಗೆ ಐಸಿಸಿ ಪ್ರಧಾನ ಕಾರ್ಯದರ್ಶಿ ಸೂರಜ್ ಹೆಗ್ಡೆ ಅಂತ್ಯಕ್ರಿಯೆ




**ಬೆಂಗಳೂರು, ಜೂ.9:** ಎಐಸಿಸಿ ಪ್ರಧಾನ ಕಾರ್ಯದರ್ಶಿ, ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಸೂರಜ್ ಹೆಗ್ಡೆ ಅವರ ಪಾರ್ಥಿವ ಶರೀರದ ಅಂತ್ಯಕ್ರಿಯೆ ಇಂದು ಹೆಬ್ಬಾಳದ ಶಾಂತಿಧಾಮ ರುದ್ರಭೂಮಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.

ಲೋಕಸಭಾ ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸೇರಿದಂತೆ ಹಲವು ಗಣ್ಯರು ಸೂರಜ್ ಹೆಗ್ಡೆ ಅವರ ಅಂತಿಮ ದರ್ಶನ ಪಡೆದರು.

ಡಾಲರ್ಸ್ ಕಾಲೋನಿಯಲ್ಲಿರುವ ಸೂರಜ್ ಹೆಗ್ಡೆ ನಿವಾಸಕ್ಕೆ ಆಗಮಿಸಿದ ರಾಹುಲ್‌ಗಾಂಧಿ, ಮುಖ್ಯಮಂತ್ರಿ ಹಾಗೂ ಮಾಜಿ ಮುಖ್ಯಮಂತ್ರಿ ಹೆಗ್ಡೆ ಅವರ ಪತ್ನಿ ಶಿಲ್ಪ, ಪುತ್ರರಾದ ಸಮೃದ್ಧ್, ವಿಶ್ರುತ್ ಸೇರಿದಂತೆ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಅಲ್ಲದೆ ಸಚಿವರಾದ ಪರಮೇಶ್ವರ್, ಪ್ರಿಯಾಂಕ್ ಖರ್ಗೆ, ಯು.ಟಿ.ಖಾದರ್, ಬೈರತಿ ಸುರೇಶ್ ಹೆಗ್ಡೆಯವರ ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.

ಹೆಬ್ಬಾಳದ ಶಾಂತಿಧಾಮ ಚಿತಾಗಾರದಲ್ಲಿ ಅಂತ್ಯಸಂಸ್ಕಾರಕ್ಕೆ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಲಾಗಿತ್ತು. ಭಾನುವಾರ ರಾತ್ರಿ ಖಾಸಗಿ ಆಸ್ಪತ್ರೆಯಲ್ಲಿ ಸೂರಜ್ ಹೆಗ್ಡೆ ನಿಧನರಾದರು. ಇವರು ತಮಿಳುನಾಡು ಹಾಗೂ ಪುದುಚೇರಿ ಕಾಂಗ್ರೆಸ್ ಘಟಕಗಳ ಉಸ್ತುವಾರಿ ಜವಾಬ್ದಾರಿಯನ್ನು ನಿರ್ವಹಿಸಿದ್ದರು. ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಮೊಮ್ಮಗ ಸೂರಜ್ ಹೆಗ್ಡೆ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ನಿನ್ನೆಯಿಂದ ಮಂಗಳವಾರ ಮಧ್ಯಾಹ್ನದವರೆಗೆ ಸಾರ್ವಜನಿಕರಿಗೆ ಅನುವು ಮಾಡಿಕೊಡಲಾಗಿತ್ತು.



ಪುದುಚೇರಿ ಮಾಜಿ ಸಿಎಂ ನಾರಾಯಣಸ್ವಾಮಿ ಅವರು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧದ ಅವರ ಕಚೇರಿಯಲ್ಲಿ ಮಂಗಳವಾರ ಭೇಟಿಮಾಡಿ ಅಭಿನಂದಿಸಿದರು.

# ದೇವೇಗೌಡರ ಮೇಲೆ ಕಾಂಗ್ರೆಸ್‌ನವರಿಗೆ ದಿಢೀರನೆ ಅನುಕಂಪ ಹುಟ್ಟಿದೆ: ರವಿ ವ್ಯಂಗ್ಯ



**ಬೆಂಗಳೂರು, ಜೂ.9:** ರಾಜ್ಯಸಭೆಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರನ್ನು ಎನ್‌ಡಿಎ ಅಭ್ಯರ್ಥಿಯಾಗಿ ಆಯ್ಕೆ ಮಾಡದಿರುವ ಕುರಿತು ಕಾಂಗ್ರೆಸ್ ನಾಯಕರು ವ್ಯಕ್ತಪಡಿಸುತ್ತಿರುವ ಮರುಕದ ಹಿಂದೆ ಕೃತಿಮತೆ ಅಡಗಿದೆ ಎಂದು ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ದೂರಿದ್ದಾರೆ

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು "ಕಾಂಗ್ರೆಸ್‌ನವರಿಗೆ ಯಾಕೆ ಇದ್ದಕ್ಕಿದ್ದಂತೆ ದೇವೇಗೌಡರ ಮೇಲೆ ಮರುಕ ಹುಟ್ಟಿದೆ. ಇಂತಹ ನಾಟಕದ ಮಾತುಗಳಿಗೆ ನಾವು ಉತ್ತರಿಸುವ ಅಗತ್ಯವಿಲ್ಲ," ಎಂದು ತಿರುಗೇಟು ನೀಡಿದರು.

ದೇವೇಗೌಡರ ಮೇಲೆ ನಮಗೆ ಸಹಜ ಪ್ರೀತಿ ಹಾಗೂ ವಾತ್ಸಲ್ಯವಿದೆ. ಇದು ಯಾವುದೇ ರಾಜಕೀಯ ಲಾಭದ ವ್ಯವಹಾರದ ಸಂಬಂಧವಾಗಿ ಬಂದಿದ್ದಲ್ಲ. ಹಿರಿಯರನ್ನು ಹೇಗೆ ಗೌರವಿಸಬೇಕು ಎಂಬುದನ್ನು ಬಿಜೆಪಿ, ಕಾಂಗ್ರೆಸ್‌ನಿಂದ ಕಲಿಯುವ ಅಗತ್ಯವಿಲ್ಲ. ಡಾ. ಬಿ.ಆರ್. ಅಂಬೇಡ್ಕರ್, ಮಾಜಿ ಪ್ರಧಾನಿಗಳಾದ ಪಿ.ವಿ. ನರಸಿಂಹರಾವ್ ಮತ್ತು ಮನಮೋಹನ್ ಸಿಂಗ್ ಅವರನ್ನು ಕಾಂಗ್ರೆಸ್ ಹೇಗೆ ನಡೆಸಿಕೊಂಡಿದೆ ಎಂಬುದು ಇಡೀ ದೇಶಕ್ಕೆ ಗೊತ್ತಿದೆ. ನೀವು ನಮಗೆ ಪಾಠ ಹೇಳುತ್ತೀರಾ ಇಂದು ಕಾಂಗ್ರೆಸ್ ನಾಯಕರನ್ನು ತರಾಟೆಗೆ ತೆಗೆದುಕೊಂಡರು

ಪ್ರಧಾನಿ ನರೇಂದ್ರ ಮೋದಿ ಹಾಗೂ ಎಚ್.ಡಿ. ದೇವೇಗೌಡರ ನಡುವಿನ ಬಾಂಧವ್ಯವು ಅಣ್ಣ-ತಮ್ಮ ಅಥವಾ ತಂದೆ-ಮಗನಿಗೆ ತೋರಿಸುವ ಅತ್ಯುನ್ನತ ಗೌರವದ ಸಂಕೇತವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

# ಹೆಚ್ಚುವರಿ ಡಿಸಿಎಂ ಹುದ್ದೆ ಸೃಷ್ಟಿ: ಚರ್ಚೆಗೆ ಗ್ರಾಸವಾದ ರಾಜಣ್ಣ, ಖಾದರ್ ಹೇಳಿಕೆ

**ಬೆಂಗಳೂರು, ಜೂ.9:** ರಾಜ್ಯ ರಾಜಕಾರಣದಲ್ಲಿ ಸಚಿವ ಸಂಪುಟ ರಚನೆಯ ಬೆನ್ನಲ್ಲೇ ಉದ್ಭವಿಸಿರುವ ಖಾತೆ ಹಂಚಿಕೆ ಅಸಮಾಧಾನ, ವಿಧಾನ ಪರಿಷತ್ ಚುನಾವಣೆ ಹಾಗೂ ಹೆಚ್ಚುವರಿ ಡಿಸಿಎಂ ಹುದ್ದೆಗಳ ಸೃಷ್ಟಿ ಕುರಿತು ಮಾಜಿ ಸಚಿವ ಕೆ.ಎನ್. ರಾಜಣ್ಣ ಮತ್ತು ಸಚಿವ ಯು.ಟಿ. ಖಾದರ್ ನೀಡಿರುವ ಹೇಳಿಕೆಗಳು ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿವೆ.

ಕೃಷ್ಣ ಬೈರೇಗೌಡರ ದೆಹಲಿ ಭೇಟಿಯ ಬಗ್ಗೆ ಸಚಿವ ಯು.ಟಿ. ಖಾದರ್ ಮೃದು ಧೋರಣೆ ತಳೆದಿದ್ದಾರೆ. "ಬೆಂಗಳೂರು ರಾಜ್ಯ ರಾಜಧಾನಿ, ದೆಹಲಿ ರಾಷ್ಟ್ರ ರಾಜಧಾನಿ. ಕೆಲಸ ಕಾರ್ಯಗಳಿಗಾಗಿ ಅವರು ಹೋಗಿದ್ದಾರೆ, ಇದರಲ್ಲಿ ಯಾವುದೇ ವಿಶೇಷತೆ ಇಲ್ಲ. ಖಾತೆ ಹಂಚಿಕೆಯ ಸಣ್ಣಪುಟ್ಟ ಗೊಂದಲಗಳನ್ನು ಸಿಎಂ ಹಾಗೂ ಪಕ್ಷದ ಅಧ್ಯಕ್ಷರು ಒಟ್ಟಾಗಿ ಕುಳಿತು ಬಗೆಹರಿಸಲಿದ್ದಾರೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ" ಎಂದು ಸಮರ್ಥಿಸಿಕೊಂಡರು.

ರಾಜ್ಯದಲ್ಲಿ ಹೆಚ್ಚುವರಿ ಉಪಮುಖ್ಯಮಂತ್ರಿ (ಡಿಸಿಎಂ) ಹುದ್ದೆಗಳ ಸೃಷ್ಟಿ ಕುರಿತು ತಮ್ಮ ಹಳೆಯ ವಾದಕ್ಕೆ ಬದ್ಧರಾಗಿರುವುದಾಗಿ ರಾಜಣ್ಣ ತಿಳಿಸಿದರು. "ಡಿಸಿಎಂ ಮಾಡುವಾಗ ಬೇರೆ ಬೇರೆ ವರ್ಗಗಳಿಗೆ ಪ್ರಾತಿನಿಧ್ಯ ನೀಡಬೇಕು. ಈಗಾಗಲೇ ಒಂದು ಸಮುದಾಯಕ್ಕೆ ನೀಡಲಾಗಿದೆ. ಅದರೊಂದಿಗೆ ಒಂದು ಎಸ್‌ಸಿ, ಒಂದು ಹಿಂದುಳಿದ ವರ್ಗ ಹಾಗೂ ಒಂದು (ಅಲ್ಪಸಂಖ್ಯಾತ) ಸಮುದಾಯಕ್ಕೆ ಡಿಸಿಎಂ ಹುದ್ದೆ ನೀಡಬೇಕು. ಆಗ ಮಾತ್ರ ಸಾಮಾಜಿಕ ನ್ಯಾಯ ಸಿಗುತ್ತದೆ" ಎಂದರು.

"ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಬೇಕಾದರೆ ಈಗಿನಿಂದಲೇ ಉತ್ತಮ ಆಡಳಿತ ನೀಡಬೇಕು. ಸರ್ಕಾರದ ಕೆಲಸಗಳ ಜೊತೆಗೆ ಪಕ್ಷದ ಸಂಘಟನೆಯೂ ಬಲಗೊಳ್ಳಬೇಕು. ಎರಡೂ ಒಟ್ಟಿಗೆ ನಡೆದರೆ ಮಾತ್ರ ಮುಂದಿನ ಬಾರಿ ಅಧಿಕಾರ ಹಿಡಿಯಲು ಸಾಧ್ಯ" ಎಂದು ರಾಜಣ್ಣ ಹಾಗೂ ಯು.ಟಿ. ಖಾದರ್ ಇಬ್ಬರೂ ಒಮ್ಮತದ ಅಭಿಪ್ರಾಯ ವ್ಯಕ್ತಪಡಿಸಿದರು.

**ನಲಪಾಡ್ ಇ.ಡಿ. ವಿಚಾರಣೆ ಕುರಿತು ಖಾದರ್ ಪ್ರತಿಕ್ರಿಯೆ:**

ಯೂತ್ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ನಲಪಾಡ್ ಅವರಿಗೆ ಜಾರಿ ನಿರ್ದೇಶನಾಲಯ ನೋಟಿಸ್ ನೀಡಿರುವ ಕುರಿತು ಪ್ರತಿಕ್ರಿಯಿಸಿದ ಯು.ಟಿ. ಖಾದರ್, "ಕೇಂದ್ರ ಸಂಸ್ಥೆಗಳನ್ನು ದುರುದ್ದೇಶಪೂರಿತವಾಗಿ ಅಥವಾ ರಾಜಕೀಯವಾಗಿ ಬಳಸಿಕೊಳ್ಳಬಾರದು. ಸದ್ಯಕ್ಕೆ ತನಿಖೆ ಅದರ ಪಾಡಿಗೆ ನಡೆಯುತ್ತಿದೆ, ನಾನು ಈಗಷ್ಟೇ ಸರ್ಕಾರಕ್ಕೆ ಬಂದಿರುವುದರಿಂದ ಈ ಬಗ್ಗೆ ಪೂರ್ಣ ಅಧ್ಯಯನ ನಡೆಸಿ ಪ್ರತಿಕ್ರಿಯಿಸುತ್ತೇನೆ" ಎಂದರು.

# ಬಿಎಂಐಇಸಿಯಲ್ಲಿ ನಾಳೆಯಿಂದ ಮೆಗಾಫುಡ್ ಎಕ್ಸ್‌ಪೋ

**ಬೆಂಗಳೂರು,ಜೂ.9:** ಆಹಾರೋದ್ಯಮ, ಆತಿಥ್ಯವಲಯ ಹಾಗೂ ಕೃಷಿ ಆಧಾರಿತ ಉದ್ಯಮಗಳ ಭವಿಷ್ಯವನ್ನು ರೂಪಿಸುವ ಉದ್ದೇಶದಿಂದ ನಗರದ ಬೆಂಗಳೂರು ಇಂಟರ್‌ನ್ಯಾಷನಲ್ ಎಕ್ಸಿಬಿಷನ್ ಸೆಂಟರ್ ಲ್ಲಿ ಜೂನ್ 11ರಿಂದ 13ರವರೆಗೆ 'ಮೆಗಾ ಫುಡ್ ಎಕ್ಸ್‌ಪೋ ಅದ್ದೂರಿಯಾಗಿ ಆಯೋಜಿಸಲಾಗಿದೆ.

ಆಹಾರ, ಪಾನೀಯ, ಕೋಳಿ ಸಾಕಣೆ, ಹೈನುಗಾರಿಕೆ, ಹೋಟೆಲ್ ಉದ್ಯಮ ಮತ್ತು ಅಡುಗೆ ಸಲಕರಣೆಗಳ ಕ್ಷೇತ್ರದ ಪ್ರಮುಖ ಸಂಸ್ಥೆಗಳು, ತಯಾರಕರು, ವಿತರಕರು, ಹೂಡಿಕೆದಾರರು, ನವೋದ್ಯಮಿಗಳು ಹಾಗೂ ಸಾರ್ವಜನಿಕರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಈ ಮೇಳ ರಾಜ್ಯದ ಅತಿದೊಡ್ಡ ಆಹಾರೋದ್ಯಮ ಪ್ರದರ್ಶನಗಳಲ್ಲಿ ಒಂದಾಗಿದೆ. ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಅವರು ಮೇಳವನ್ನು ಉದ್ಘಾಟಿಸಲಿದ್ದು, ದೇಶ-ವಿದೇಶಗಳ 100ಕ್ಕೂ ಹೆಚ್ಚು ಪ್ರಮುಖ ಕಂಪನಿಗಳು ತಮ್ಮ ನೂತನ ಉತ್ಪನ್ನಗಳು, ಶಂತ್ರಜ್ಞಾನಗಳು ಹಾಗೂ ಉದ್ಯಮ



ಪರಿಹಾರಗಳನ್ನು ಪ್ರದರ್ಶಿಸಲಿವೆ. ಆಹಾರ ಸಂಸ್ಕರಣೆ, ಚಹಾ-ಕಾಫಿ ಉತ್ಪನ್ನಗಳು, ಬೇಕರಿ, ಹೋಟೆಲ್ ಮತ್ತು ರೆಸ್ಟೋರೆಂಟ್ ಉಪಕರಣಗಳು, ಪ್ಯಾಕೇಜಿಂಗ್ ತಂತ್ರಜ್ಞಾನ, ಕೋಳಿಸಾಕಣೆ, ಹೈನುಗಾರಿಕೆ, ಶೀತಲ ಸರಪಳಿ ವ್ಯವಸ್ಥೆ, ಆಟೋಮೇಷನ್ ಮತ್ತು ಡಿಜಿಟಲ್ ಪರಿಹಾರಗಳ ಅತ್ಯಾಧುನಿಕ ಮಾದರಿಗಳು ಇಲ್ಲಿ ಪ್ರದರ್ಶನಗೊಳ್ಳಲಿವೆ

ಉದ್ಯಮಿಗಳ ಜೊತೆಗೆ ಹೊಸ ಉದ್ಯಮ ಆರಂಭಿಸಲು ಬಯಸುವ ಯುವಕರು ಹಾಗೂ ಸ್ಟಾರ್ಟ್‌ಅಪ್‌ಗಳಿಗೆ ಈ ಮೇಳ ಅಪರೂಪದ ಅವಕಾಶ ಕಲ್ಪಿಸಲಿದೆ. ಹೋಟೆಲ್ ಉದ್ಯಮ, ಆಹಾರ ಉತ್ಪಾದನೆ, ವಿತರಣಾ ವ್ಯವಸ್ಥೆ ಮತ್ತು ರೀಟೇಲ್ ಕ್ಷೇತ್ರದ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದು, ಉದ್ಯಮ ವಿಸ್ತರಣೆ, ವ್ಯಾಪಾರ ಜಾಲ ನಿರ್ಮಾಣ, ಹೂಡಿಕೆ ಅವಕಾಶಗಳು ಹಾಗೂ ಹೊಸ ತಂತ್ರಜ್ಞಾನಗಳ ಪರಿಚಯಕ್ಕೆ ಈ ವೇದಿಕೆ ನೆರವಾಗಲಿದೆ.

ಆಹಾರ ಕ್ಷೇತ್ರದಲ್ಲಿ ಉದ್ಯೋಗ ಮತ್ತು ಉದ್ಯಮಶೀಲತೆಯನ್ನು ಉತ್ತೇಜಿಸುವ ಉದ್ದೇಶವೂ ಈ ಮೇಳಕ್ಕಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಪ್ರಗತಿಪರ ಹೈನುಗಾರರ ಸಂಘದ ಅಧ್ಯಕ್ಷ ಬಿ.ಜೆ. ಪೃಥ್ವಿ ಗೌಡ, ಎಫ್ ಕೆಸಿಸಿಐ ಅಧ್ಯಕ್ಷೆ ಉಮಾ ರೆಡ್ಡಿ, ಫೇರಿ ಅಧ್ಯಕ್ಷ ರಮೇಶ್ ಶಿವಣ್ಣ, ಕೇಶ್ವಾ ಅಧ್ಯಕ್ಷ ಸುರೇಂದ್ರ ಕುಮಾರ್, ಕೆ.ಆರ್. ಕಾರ್ಯದರ್ಶಿ ಎ.ಸಿ. ಈಶ್ವರ್, ಆಟೋ ಡೀಲರ್ಸ್ ಅಸೋಸಿಯೇಷನ್ ಅಧ್ಯಕ್ಷ ವಿ.ಕೆ. ವೆಂಕಟೇಶ್ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ.

# ರಸ್ತೆ ದುರಸ್ತಿಗಾಗಿ ಹೆದ್ದಾರಿ ತಡೆದು ಪ್ರತಿಭಟನೆ

**ಕಲಬುರಗಿ, ಜೂ. 9:** ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಮದರಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಗಳಗಿ (ಬಿ) ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ದುರಸ್ತಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಗ್ರಾಮಸ್ಥರು ಹಾಗೂ ಪ್ರಾಂತ ರೈತ ಸಂಘದವರು ಇಂದು ಬೆಳಿಗ್ಗೆ ರಾಷ್ಟ್ರೀಯ ಹೆದ್ದಾರಿಯಲ್ಲಿ ನೂರಾರು ಎತ್ತಿನ ಬಂಡಿಗಳನ್ನು ನಿಲ್ಲಿಸುವ ಮೂಲಕ ಸುಮಾರು ಮೂರು ತಾಸುಗಳ ವರೆಗೆ ರಸ್ತೆ ಬಂದ್ ಮಾಡಿ ಪ್ರತಿಭಟನೆ ನಡೆಸಿದರು.

ಇಂಗಳಗಿ ಕ್ರಾಸ್‌ನಲ್ಲಿರುವ ಕಲಬುರಗಿ-ಸೋಲಾಪುರ 150(ಇ) ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದ ಪ್ರತಿಭಟನೆಯಿಂದ ಹಲವು ಕಿಲೋಮೀಟರ್‌ಗಟ್ಟಲೇ ವಾಹನಗಳು ಸಾಲುಗಟ್ಟಿ ನಿಂತಿದ್ದವು. ರಸ್ತೆ ತಡೆಯಿಂದಾಗಿ ವಾಹನಗಳ ಸವಾರರು ಪರದಾಡಬೇಕಾಯಿತು. ಪ್ರತಿಭಟನೆಯಲ್ಲಿ ಪಾಲ್ಗೊಂಡು ರೈತ ಮುಖಂಡ ಸಿದ್ದು ದಣ್ಣೂರ ಮಾತನಾಡಿ, ಇಂಗಳಗಿ(ಬಿ) ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಈ ರಸ್ತೆ ಗ್ರಾಮಸ್ಥರ ಜೀವನಾಡಿಯಾಗಿದೆ. ಪ್ರತಿನಿತ್ಯ ನೂರಾರು ಜನರು ಇದೇ ರಸ್ತೆಯನ್ನು ಅವಲಂಬಿಸಿ ಸಂಚರಿಸುತ್ತಿದ್ದಾರೆ.

ಆದರೆ, ರಸ್ತೆಯುದ್ದಕ್ಕೂ ಬಿದ್ದಿರುವ ದೊಡ್ಡ ಗುಂಡಿಗಳು ಹಾಗೂ ಹದಗೆಟ್ಟ ಮೇಲ್ಮೈಯಿಂದಾಗಿ ವಾಹನ ಸವಾರರು, ರೈತರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸಂಕಷ್ಟ ಅನು ಭವಿಸುವಂತಾಗಿದೆ. ಮಳೆಗಾಲ ಆರಂಭ ವಾಗಿರುವ ಹಿನ್ನೆಲೆಯಲ್ಲಿ ರಸ್ತೆಯ ಪರಿಸ್ಥಿತಿ ಮತ್ತಷ್ಟು ಹದಗೆಟ್ಟಿದ್ದು, ಅಪಘಾತಗಳ ಭೀತಿ ಹೆಚ್ಚಾಗಿದೆ ಎಂದು ಕಳವಳ ವ್ಯಕ್ತಪಡಿಸಿ ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

### ಬ್ರ್ಯಾಂಡ್ ಬೆಂಗಳೂರ್ ಅಲ್ಲ, ಬ್ರೋಕನ್ ಬೆಂಗಳೂರು: ಆರ್.ಅಶೋಕ್ ವ್ಯಂಗ್ಯ

# ಮುಂಗಾರು ಶುರುವಾಗುತ್ತಿದ್ದಂತೆ ಸಿಲಿಕಾನ್ ಸಿಟಿಯ ಬಣ್ಣ ಬಯಲು 5000ಕ್ಕೂ ಹೆಚ್ಚು ರಸ್ತೆಗುಂಡಿ, ಕಣ್ಣಿಗೆ ರಾಚುವ ಕಸದ ರಾಶಿ





**ಬೆಂಗಳೂರು, ಜೂ.9:** ಬ್ರ್ಯಾಂಡ್ ಬೆಂಗಳೂರು ಅಲ್ಲ, ಇದು ಡಿ.ಕೆ.ಶಿವಕುಮಾರ್ ಹಾಗೂ ಕೃಷ್ಣ ಬೈರೇಗೌಡರ ಜುಗಲ್‌ಬಂದಿಯ ಬ್ರೋಕನ್ ಬೆಂಗಳೂರು ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ವ್ಯಂಗ್ಯವಾಡಿದ್ದಾರೆ

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮುಂಗಾರು ಶುರುವಾಗಿದ್ದೇ ತಡ ಸಿಲಿಕಾನ್ ಸಿಟಿಯ ಅಸಲಿ ಬಣ್ಣ ಬಯಲಾಗಿದೆ. ರಸ್ತೆಗಳಲ್ಲಿ 5,000ಕ್ಕೂ ಅಧಿಕ ಮೃತ್ಯುಕೂಪಗಳು ಬಲಿಗಾಗಿ ಕಾದಿವೆ. ಇನ್ನೊಂದೆಡೆ ಎಲ್ಲಿನೋಡಿದರೂ ಕಣ್ಣಿಗೆ ರಾಚುತ್ತಿರುವ ಕಸದ ರಾಶಿ!

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ಇಲಾಖೆಗಳ ಹಂಚಿಕೆಯ ಜಿದ್ದಾಜಿದ್ದಿನಲ್ಲಿ ಕೊನೆಗೂ ಒಲ್ಲದ ಮನಸ್ಸಿನಿಂದ ಸಚಿವ ಕೃಷ್ಣ ಬೈರೇಗೌಡ ಅವರಿಗೆ ಬೆಂಗಳೂರಿನ ಜವಾಬ್ದಾರಿ ಕಟ್ಟಿದ್ದೀರಿ. ಆದರೆ ಕಂದಾಯ ಇಲಾಖೆಯನ್ನು ಬಿಡಲು ಮನಸಿಲ್ಲದ ಅವರಿಗೆ ಬೆಂಗಳೂರಿನ ನಗರದ ಜನರ ಜೀವಕ್ಕಿಂತ, ಬಿಡಿಎ ಬಿಎಂಆರ್‌ಡಿಎ ಇಲ್ಲದ "ನೀರಸ" ಬೆಂಗಳೂರು ಅಭಿವೃದ್ಧಿ ಖಾತೆಯ ಮೇಲಿನ ಅಸಮಾಧಾನವೇ ದೊಡ್ಡದಾದಂತಿದೆ! ಎಂದು ಲೇವಡಿ ಮಾಡಿದ್ದಾರೆ.

**5,000ಕ್ಕೂ ಹೆಚ್ಚು ರಸ್ತೆಗುಂಡಿಗಳು**

ಮಳೆಗಾಲ ಶುರುವಾದರೂ ಕೇವಲ 20% ಕಾಮಗಾರಿ ಮಾತ್ರ ಪೂರ್ಣಗೊಂಡಿದೆ. 80% ಕಾಮಗಾರಿ ಇನ್ನೂ ನನೆಗುದಿಗೆ ಬಿದ್ದಿದೆ. ಬೈಕ್ ಸವಾರರು ಜೀವ ಕೈಯಲ್ಲಿ ಹಿಡಿದು ಸಂಚರಿಸಬೇಕಿದೆ. ಈ ಗುಂಡಿಗಳಿಗೆ ಬೀಳುವ ಜೀವಕ್ಕೆ ಯಾರು ಹೊಣೆ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

**ನಾರುತ್ತಿರುವ ನಗರ:**

ಕಂಡ ಕಂಡಲ್ಲಿ ಕಸದ ರಾಶಿ ಬಿದ್ದಿದೆ, ವಿಲೇವಾರಿ ಮಾಡಲು ಜಿಬಿಎಗೆ ಯೋಗ್ಯತೆಯಿಲ್ಲ. ಮಳೆ ನೀರಿಗೆ ಈ ಕಸ ಕೊಳೆತು ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಎದುರಾಗಿದೆ.

ಸ್ವಚ್ಛಗೊಳಿಸಬೇಕಾದ ಸಿಬ್ಬಂದಿಯೇ ಕಸವನ್ನು ರಸ್ತೆ ಮಧ್ಯೆ ಸುರಿಯುತ್ತಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗುತ್ತಿದ್ದರೂ ಇಲಾಖೆ ಕುರುಡಾಗಿದೆಯೇ. ಯಾವುದೇ ಮುಂಜಾಗ್ರತೆ ಯಿಲ್ಲದೆ ವಿಟ್ಟಸಂದ್ರದಲ್ಲಿ ಕಸ ವರ್ಗಾವಣೆ ಕೇಂದ್ರ ಸ್ಥಾಪಿಸಲು ಮುಂದಾಗಿ ಸ್ಥಳೀಯ ಜನರನ್ನು ನರಕಕೂಪಕ್ಕೆ ತಳ್ಳಲಾಗುತ್ತಿದೆ ಎಂದು ಅಶೋಕ್ ಟೀಕಿಸಿದ್ದಾರೆ.

### ನಗರಾಭಿವೃದ್ಧಿ ಇಷ್ಟವಿಲ್ಲದಿದ್ದರೆ ರಾಜೀನಾಮೆ ಕೊಡಿ

ಬೆಂಗಳೂರಿಗೆ 2,000 ಕೋಟಿ ಬಿಡುಗಡೆ ಮಾಡಿದ್ದೇವೆ ಎಂದು ಕೊಚ್ಚಿಕೊಳ್ಳುತ್ತಿದ್ದೀರಲ್ಲ, ಆ ಸಾವಿರಾರು ಕೋಟಿ ರೂ.ಯಾರ ಜೇಬು ಸೇರಿದೆ, ರಸ್ತೆಗಳೇಕೆ ಇನ್ನೂ ಮೃತ್ಯು ಕೂಪಗಳಾಗಿಯೇ ಉಳಿದಿವೆ ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸಿರುವ ಅಶೋಕ್, ನೂತನ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡರೇ. ಇಷ್ಟವಿಲ್ಲದಿದ್ದರೆ ಖಾತೆ ಬಿಟ್ಟು ರಾಜೀನಾಮೆ ಕೊಡಿ, ಅದನ್ನು ಬಿಟ್ಟು ಬೆಂಗಳೂರಿನ 1.5 ಕೋಟಿ ನಾಗರಿಕರನ್ನು ನಿಮ್ಮ ಅಸಮಾಧಾನಕ್ಕೆ ಬಲಿ ಕೊಡಬೇಡಿ! ಅಧಿಕಾರ ಸಿಕ್ಕ ತಕ್ಷಣ ಬರೀ ಕಮೀಷನ್ ದಂಧೆ, ವರ್ಗಾವಣೆ ದಂಧೆಯಲ್ಲಿ ಮುಳುಗಿರುವ ಈ ಸರ್ಕಾರಕ್ಕೆ ಬೆಂಗಳೂರಿನ ಬ್ರ್ಯಾಂಡ್ ಇಮೇಜ್ ಸಂಪೂರ್ಣವಾಗಿ ಮಣ್ಣುಪಾಲು ಮಾಡಲು ಹೊರಟಿದೆ. ಎಂದು ವಾಗ್ದಾಳಿ ನಡೆಸಿದ್ದಾರೆ. ಹಾಗೂ ತಕ್ಷಣವೇ ಸಮರಸಜ್ಜಿನಂತೆ ರಸ್ತೆ ಗುಂಡಿಗಳನ್ನು ಮುಚ್ಚಿ, ಕಸದ ಸಮಸ್ಯೆಯನ್ನು ಬಗೆಹರಿಸದಿದ್ದರೆ, ವಿಧಾನಸೌಧಕ್ಕೆ ಮುತ್ತಿಗೆ ಹಾಕಿ ಉಗ್ರ ಹೋರಾಟ ಮಾಡುವುದಾಗಿಯೂ ಅವರು ಎಚ್ಚರಿಕೆ ನೀಡಿದ್ದಾರೆ.



ಮುಂಗಾರು ಮಳೆಯಾಗುತ್ತಿದ್ದಂತೆ, ಚಿಕ್ಕಮಗಳೂರು ಪ್ರದೇಶದಲ್ಲಿ ಮಂಗಳವಾರ ಕೃಷಿ ಚಟುವಟಿಕೆಗಳು ಪ್ರಾರಂಭವಾದವು.

# ಪತ್ರಕರ್ತರ ಬೇಡಿಕೆಗಳಿಗೆ ಸದಾ ಸ್ಪಂದನೆ: ಸಿದ್ದರಾಮಯ್ಯಗೆ ಕೆಯುಡಬ್ಲ್ಯೂಜೆ ಕೃತಜ್ಞತೆ



**ಬೆಂಗಳೂರು, ಜೂ.9:** ತಮ್ಮ ಅಧಿಕಾರವಧಿಯಲ್ಲಿ ಪತ್ರಕರ್ತರ ಬೇಡಿಕೆಗಳಿಗೆ ಸದಾ ಸ್ಪಂದಿಸುತ್ತಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಧನ್ಯವಾದ ತಿಳಿಸಿದೆ.

ತಾವು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಪತ್ರಕರ್ತರ ಬೇಡಿಕೆಗಳನ್ನು ಸಂಯಮದಿಂದ ಆಲಿಸಿ ನಿಮ್ಮ ಸಲಹೆಗಾರರಾಗಿದ್ದ ಕೆ.ವಿ.ಪ್ರಭಾಕರ್ ಮೂಲಕ ಈಡೇರಿಸುವ ಪ್ರಯತ್ನ ಮಾಡಿರುವುದನ್ನು ಸಂಘ ಮರೆಯುವುದಿಲ್ಲ ಎಂದು ಅವರಿಗೆ ತಿಳಿಸಿದರು.


38ನೇ ದಾವಣಗೆರೆ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಘೋಷಿಸಿದ್ದೀರಿ. ತುಮಕೂರಿನಲ್ಲಿ ನಡೆದ 39ನೇ ರಾಜ್ಯ ಸಮ್ಮೇಳನದಲ್ಲಿ ಪತ್ರಕರ್ತರಿಗಾಗಿ ಮುಖ್ಯಮಂತ್ರಿಗಳ ಆರೋಗ್ಯ ಸಂಜೀವಿನಿ ಯೋಜನೆಯನ್ನು ಘೋಷಿಸಿ ಜಾರಿಗೆ ನೀಡಿದ್ದೀರಿ ಎನ್ನುವುದನ್ನು ಅವರಿಗೆ ನೆನಪಿಸಿದಾಗ, ನನ್ನ ಜವಾಬ್ದಾರಿ ಇದ್ದುದರಿಂದ ಮಾಡಿದ್ದೇನೆ. ನಿಮಗೆಲ್ಲ ಒಳ್ಳೆಯದಾಗಲಿ ಎಂದು ಸಿದ್ದರಾಮಯ್ಯ ಹೇಳಿದರು.

ಗ್ರಾಮೀಣ ಪತ್ರಕರ್ತರ ಉಚಿತ ಬಸ್‌ಪಾಸ್ ಯೋಜನೆ ಜಾರಿಗೆ ಅಡ್ಡಿಯಾಗಿದ್ದ ಕಠಿಣ ಷರತ್ತುಗಳನ್ನು ತೆಗೆದು, ನಿಯಮಾವಳಿ ಸರಳೀಕರಣ ಮಾಡಬೇಕು ಎಂದು ಬೀದರನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಒತ್ತಾಯಕ್ಕೆ ಸ್ಪಂಧಿಸಿದ್ದ ತಾವು, ಅದೇ ವೇದಿಕೆಯಲ್ಲಿ ಕಠಿಣ ಷರತ್ತುಗಳನ್ನು ಕೈಬಿಡುವುದಾಗಿ ಭರವಸೆ ನೀಡಿದ್ದೀರಿ. ಹಾಗೆಯೇ ನಿಮ್ಮ ಅಧಿಕಾರವಧಿ ಕೊನೆಯಲ್ಲಿ ಆದೇಶ ಮಾಡಿದ್ದು, ಈಗ ನಿಯಮಾವಳಿ ಸರಳೀಕರಣವಾಗಿದೆ ಎಂದು ತಿಳಿಸಿ ಶಿವಾನಂದ ತಗಡೂರು ಧನ್ಯವಾದಗಳನ್ನು ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಹಾಜರಿದ್ದ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಎಚ್.ಎನ್.ನಾಗಮೋಹನದಾಸ್ ಅವರು, ಲೇಬರ್ ಯೂನಿಯನ್ ಆಗಿರುವ ಕೆಯುಡಬ್ಲ್ಯೂ?ಜೆ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದು ಸಿದ್ದರಾಮಯ್ಯ ಅವರಿಗೂ ತಿಳಿಸಿ ಪ್ರಶಂಸೆ ವ್ಯಕ್ತಪಡಿಸಿದರು.

### ಕುಟ್ಟಾದ ಹೋಂಸ್ಟೇನಲ್ಲಿ ಅಮೆರಿಕದ ಪ್ರವಾಸಿ ಮಹಿಳೆ ಮೇಲೆ ಅತ್ಯಾಚಾರ ಪ್ರಕರಣ

# ತನಿಖಾ ದಾಖಲೆ ಸಲ್ಲಿಸುವಂತೆ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ




**ಬೆಂಗಳೂರು, ಜೂ.9:** ಕೊಡಗಿನ ಹೋಂಸ್ಟೇನಲ್ಲಿ ಅಮೆರಿಕಾದ ಪ್ರವಾಸಿ ಮಹಿಳೆಯ ಮೇಲೆ ಕಳೆದ ಏಪ್ರಿಲ್‌ನಲ್ಲಿ ನಡೆದಿದೆ ಎನ್ನಲಾದ ನಡೆದಿದೆ ಎನ್ನಲಾದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖಾ ದಾಖಲೆ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

ಕುಟ್ಟಾದ ತನ್ನ ಹೋಮ್‌ಸ್ಟೇನಲ್ಲಿ ನಡೆದಿದ್ದ ಅತ್ಯಾಚಾರ ಪ್ರಕರಣವನ್ನು ತಡೆಹಿಡಿದ ಆರೋಪದ ಮೇಲೆ ಕುಟ್ಟಾ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ರದ್ದತಿ ಕೋರಿ ಪಾಲೇಕಂಡ ಪೊನ್ನಪ್ಪ ಅಲಿಯಾಸ್ ವಿಶಾಲ್ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ನಡೆಸಿತು.

ನೇರವಾಗಿ ತಡೆ ನೀಡುವ ಪ್ರಕರಣ ಇದಲ್ಲ. ತನಿಖಾ ದಾಖಲೆಗಳನ್ನು ನೋಡಬೇಕಿದೆ. ಬೇರೆ ದೇಶದ ಪ್ರಜೆಯ ಮೇಲೆ ನಮ್ಮ ದೇಶದಲ್ಲಿ ಅತ್ಯಾಚಾರ ನಡೆಯುವುದು ಗಂಭೀರ ಅಪರಾಧ ಎಂದು ನ್ಯಾಯಾಲಯ ಹೇಳಿತು. ಅಲ್ಲದೇ, ತನಿಖಾ ದಾಖಲೆಗಳನ್ನು ಸಲ್ಲಿಸುವಂತೆ ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕರಿಗೆ ನಿರ್ದೇಶಿಸಿದ ನ್ಯಾಯಾಲಯವು ವಿಚಾರಣೆಯನ್ನು ಜೂನ್ 10ಕ್ಕೆ ಮುಂದೂಡಿತು.

ಹೋಮ್‌ಸ್ಟೇನಲ್ಲಿ ಕೆಲಸ ಮಾಡುತ್ತಿದ್ದ 25 ವರ್ಷದ ಯುವಕ ಅಮೆರಿಕಾದ ಪ್ರವಾಸಿ ಮಹಿಳೆಗೆ ಮತ್ತು ಬರುವ ಪದಾರ್ಥ ಹಾಕಿ ಪೇಯ ನೀಡಿದ್ದು, ಅದನ್ನು ಸೇವಿಸಿದ ಆಕೆ ಪ್ರಜ್ಞೆ ತಪ್ಪಿದ್ದರು. ಈ ಸಂದರ್ಭದಲ್ಲಿ ಆತ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದನು. ಆತ ಸದ್ಯ ಜೈಲಿನಲ್ಲಿದ್ದು, ವಿಚಾರಣಾಧೀನ ನ್ಯಾಯಾಲಯವು ಆತನಿಗೆ ಜಾಮೀನು ನಿರಾಕರಿಸಿದೆ.

ಪ್ರಕರಣ ಮಾಹಿತಿ ಮುಚ್ಚಿಟ್ಟ ಆರೋಪದ ಮೇಲೆ ಪೊನ್ನಪ್ಪನನ್ನು ಏಪ್ರಿಲ್ 19ರಂದು ಪೊಲೀಸರು ಬಂಧಿಸಿದ್ದು, ಮೇ 2ರಂದು ಜಾಮೀನು ಮಂಜೂರಾಗಿತ್ತು. ಸದ್ಯ ಹಾಲಿ ಅರ್ಜಿಯ ಮೂಲಕ ಪ್ರಕರಣವನ್ನು ಪ್ರಶ್ನಿಸುವುದಲ್ಲದೇ ಅಕ್ರಮವಾಗಿ ಬಂಧಿಸಿದ್ದಕ್ಕಾಗಿ 15 ಲಕ್ಷ ರೂ. ಪರಿಹಾರ ಕೋರಿದ್ದಾರೆ. ಪೊನ್ನಪ್ಪನನ್ನು ಪ್ರತಿನಿಧಿಸಿರುವ ವಕೀಲ ಅಂಗದ್ ಕಾಮತ್ ಅವರು ಅರ್ಜಿದಾರರ ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದ್ದು, ಅತ್ಯಾಚಾರ ಕೃತ್ಯದ ಬಗ್ಗೆ ಪೊನ್ನಪ್ಪಗೆ ಮೊದಲೇ ಮಾಹಿತಿ ಇದ್ದು, ದೂರುದಾರೆಯನ್ನು ಅಲ್ಲೇ ಇಟ್ಟಿದ್ದರು ಎಂಬರ್ಥದ ವರದಿಗಳು ಮಾಧ್ಯಮಗಳಲ್ಲಿ ಪ್ರಕಟವಾಗಿದೆ. ಆದರೆ, ದೂರಿನಲ್ಲಿ ಆ ಅಂಶಗಳೇ ಇಲ್ಲ. ಈ ಪ್ರಕರಣದಿಂದ ಪೊನ್ನಪ್ಪ ಅವರ ಉದ್ಯಮಕ್ಕೆ ಹೊಡೆತ ಬಿದ್ದಿದೆ ಎಂದರು.

ಆಗ ಪೀಠವು ನೀವು ಹೋಮ್‌ಸ್ಟೇ ರಿಪೇರಿ ಮಾಡಬೇಕೆ ಎಂದು ಪ್ರಶ್ನಿಸಿತು. ಮುಂದುವರಿದು, ತನಿಖಾಧಿಕಾರಿಗಳಿಗೆ ಸಿಸಿಟಿವಿ ಮತ್ತು ವಿಡಿಯೊ ರೆಕಾರ್ಡಿಂಗ್ ಒದಗಿಸಲಾಗಿದೆ. ತನಿಖಾಧಿಕಾರಿಗಳು ಕೃತ್ಯದಲ್ಲಿ ಬೇರೆ ಯಾರಾದರೂ ಭಾಗಿಯಾಗಿರುವ ಕೃತ್ಯ ತನಿಖೆ ನಡೆಸುತ್ತಿದ್ದು, ಈಚೆಗೆ ಡ್ರೈವರ್‌ನನ್ನು ಬಂಧಿಸಲಾಗಿದೆ ಎಂದರು.

ಇದನ್ನು ಆಲಿಸಿದ ಪೀಠವು ಪ್ರಕರಣದಲ್ಲಿ ನಿಮ್ಮ ಪಾತ್ರದ ಬಗ್ಗೆ ತನಿಖಾ ದಾಖಲೆಗಳನ್ನು ನೋಡಿದ ಮೇಲೆ ತಿಳಿಯಲಿದೆ. ಇದರಲ್ಲಿ ನಿಮ್ಮ ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದೆಯೇ ಎಂಬುದು ತಿಳಿಯಲಿದೆ. ತನಿಖಾ ದಾಖಲೆಗಳು ಬರಲಿ ಎಂದಿತು.

### ವಿಸಿ ಮೂಲಕ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರ ಸಭೆಯಲ್ಲಿ ಭಾಗಿ

# ವಿಬಿಜಿ–ರಾಮ್‌ಜಿ ಕನಿಷ್ಠ ವೇತನ ಹೆಚ್ಚಳಕ್ಕೆ ಈಶ್ವರ ಖಂಡ್ರೆ ಆಗ್ರಹ



**ಬೆಂಗಳೂರು, ಜೂ.9:** ಪ್ರಸಕ್ತ ಬೆಲೆ ಏರಿಕೆ ಸರಿದೂಗಿಸಲು ಕಾರ್ಮಿಕರ ರಾಜ್ಯ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಿಸಲು ತೀರ್ಮಾನಿಸಿದ್ದು, ಈ ಹಿಂದಿನ ಮನರೇಗಾ ಹೊಸ ರೂಪವಾದ ವಿಕಸಿತ್ ಭಾರತ್–ಜಿ ರಾಮ್ ಜಿ (ವಿಬಿಜಿ–ರಾಮ್‌ಜಿ) ಯ ಕನಿಷ್ಠ ವೇತನವನ್ನು ಹೆಚ್ಚಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಈಶ್ವರ ಖಂಡ್ರೆ ಕೇಂದ್ರ ಸಚಿವರನ್ನು ಆಗ್ರಹಿಸಿದ್ದಾರೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅಧ್ಯಕ್ಷತೆಯಲ್ಲಿ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರೊಂದಿಗೆ ಮಂಗಳವಾರ ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗಿಯಾಗಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಈಗಾಗಲೇ ಕಾರ್ಮಿಕರ ಕನಿಷ್ಠ ವೇತನ ಹೆಚ್ಚಳಕ್ಕೆ ಅನುಮೋದನೆ ನೀಡಿದ್ದು, ಇದೇ ಪ್ರಕಾರವಾಗಿ ಕೇಂದ್ರ ಸರ್ಕಾರವೂ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹಣ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಈ ವರ್ಷ ಜುಲೈ 1ರಿಂದ ಜಾರಿಯಾಗಬೇಕಿರುವ ಯೋಜನೆ ಅಡಿಯಲ್ಲಿ ಕರ್ನಾಟಕಕ್ಕೆ ಕೇಂದ್ರ ಸರ್ಕಾರ 60:40ರ ಅನುಪಾತದಲ್ಲಿ 5709.90 ಕೋಟಿ ರೂ. ಮಧ್ಯಂತರ ಹಂಚಿಕೆ ಮಾಡಿದ್ದು, ಇದಕ್ಕೆ ರಾಜ್ಯ ಸರ್ಕಾರ 40ರ ಅನುಪಾತದಲ್ಲಿ 3806.60 ಕೋಟಿ ನೀಡಬೇಕಾಗಿದೆ, ಈ ಯೋಜನೆ ಅನುಷ್ಠಾನಕ್ಕಾಗಿ ಹಣಕಾಸು ಸಚಿವರೂ ಆದ ಮಾನ್ಯ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಈ ಹಿಂದೆ ಯುಪಿಎ ಅಧಿಕಾರಾವಧಿಯಲ್ಲಿ ಅನುಷ್ಠಾನಕ್ಕೆ ತಂದ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮನ್ರೇಗಾವನ್ನು ರಾಜ್ಯ ಸರ್ಕಾರ ಅತ್ಯಂತ ಯಶಸ್ವಿಯಾಗಿ ಜಾರಿ ಮಾಡಿದ್ದು, ಗ್ರಾಮೀಣ ಭೂರಹಿತ ಕೂಲಿ ಕಾರ್ಮಿಕರು, ರೈತರು, ಮಹಿಳೆಯರು, ಪರಿಶಿಷ್ಟ ಜಾತಿ, ಪಂಗಡದವರು, ಹಿಂದುಳಿದವರಿಗೆ ಒಳಿತಾಗುವ ರೀತಿಯಲ್ಲಿ ಹಾಗೂ ಗ್ರಾಮೀಣ ಜನರ ಬದುಕು ಹಸನಾಗಿಸಲು ಶ್ರಮಿಸಲಾಗುವುದು ಎಂದು ತಿಳಿಸಿದರು.

ಬರುವ 28 ಹಾಗೂ 29ರಂದು ನವದೆಹಲಿಯಲ್ಲಿ ವಿಕ್ಷಿತ್ ಭಾರತ್ ಜೀ ರಾಮ್ ಜೀ ಯೋಜನೆ ಅನುಷ್ಠಾನದ ಬಗ್ಗೆ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರ ಸಭೆ ಕರೆಯಲಾಗಿದ್ದು ತಾವು ಈ ಸಭೆಯಲ್ಲಿ ಭಾಗಿಯಾಗಿ, ರಾಜ್ಯದ ಬೇಡಿಕೆಗಳನ್ನು ಮಂಡಿಸುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

ಸಭೆಯಲ್ಲಿ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲ ಮತ್ತಿತರರು ಭಾಗಿಯಾಗಿದ್ದರು.

# ವಸತಿ ಸಂಕೀರ್ಣಗಳಿಗೆ ಸಂಬಂಧಿಸಿದ ಕಾನೂನು ಸುಧಾರಣೆಗೆ ಕ್ರಮ: ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರಿಸ್



**ಬೆಂಗಳೂರು, ಜೂ.9::** ವಸತಿ ಸಂಕಿರಣಗಳಿಗೆ ಸಂಬಂಧಿಸಿದ ಕಾನೂನು ಸುಧಾರಣೆಗಳಿಗೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ಬಿಡಿಎ ಅಧ್ಯಕ್ಷ ಎನ್.ಎ. ಹ್ಯಾರೀಸ್ ಹೇಳಿದ್ದಾರೆ.

ವಕೀಲರಾದ ಬೀನಾ ಪಿಳ್ಳೈ ನೇತೃತ್ವದ ನೆಕ್ಸ್ಟ್ ಲೀಗಲ್ ಸರ್ವೀಸಸ್ ಹಾಗೂ ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಷನ್ ಸಹಯೋಗದಲ್ಲಿ ಸೇಂಟ್ ಜೋಸೆಫ್ ಕಾನೂನು ಕಾಲೇಜಿನಲ್ಲಿ ವಸತಿ ಸಂಕೀರ್ಣಗಳಿಗೆ ಸಂಬಂಧಿಸಿದ ಕಾನೂನು ಜಾಗೃತಿ ಮತ್ತು ಪಾಲುದಾರರ ಸಂವಾದ ಪ್ರೊಪ್ರೈಟಾಸ್ 2.0ನಲ್ಲಿ ಮಾತನಾಡಿದ ಅವರು, ಅಪಾರ್ಟ್‌ಮೆಂಟ್ ಮಾಲೀಕರು, ಬಿಲ್ಡರ್‌ಗಳು ಮತ್ತು ವಿವಿಧ ಸರ್ಕಾರಿ ಇಲಾಖೆಗಳ ನಡುವೆ ಸಮನ್ವಯತೆ ತರುವ ಉದ್ದೇಶದಿಂದ ಸರ್ಕಾರ ಹಲವು ಕಾನೂನು ಸುಧಾರಣೆಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಬೆಂಗಳೂರು ವಿವಿಧ ಹಿನ್ನೆಲೆಯ ಜನ ವಾಸಿಸುವ ಚೈತನ್ಯಮಯ ಮಹಾನಗರವಾಗಿದೆ. ಜೀವನಶೈಲಿ ಹಾಗೂ ನಗರ ಜೀವನದ ಮಾದರಿಗಳು ಬದಲಾಗಿರುವ ಹಿನ್ನೆಲೆಯಲ್ಲಿ ಹಳೆಯ ಕಾನೂನುಗಳು ಮತ್ತು ಪದ್ಧತಿಗಳು ಹಲವು ಬಾರಿ ಅಡಚಣೆಯಾಗುತ್ತಿವೆ. ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಹೊಸ ಕಾನೂನು ಚೌಕಟ್ಟುಗಳು, ತಂತ್ರಜ್ಞಾನ ಆಧಾರಿತ ಆಡಳಿತ ವ್ಯವಸ್ಥೆ ಹಾಗೂ ಸಾರ್ವಜನಿಕ ಜಾಗೃತಿಯ ಮೂಲಕ ವ್ಯವಸ್ಥೆಯನ್ನು ಆಧುನೀಕರಿಸಲು ಕ್ರಮ ಕೈಗೊಳ್ಳುತ್ತಿದೆ ಎಂದು ಹೇಳಿದರು.

ಬಿಡಿಎ ಆಡಳಿತದಲ್ಲಿ ಪಾರದರ್ಶಕತೆ, ತಂತ್ರಜ್ಞಾನ ಆಧಾರಿತ ಕಾರ್ಯವಿಧಾನಗಳನ್ನು ಅಳವಡಿಸಲಾಗಿದೆ. ವಿಶೇಷ ದೂರು ಪರಿಹಾರ ವ್ಯವಸ್ಥೆ ಹಾಗೂ ಕಾನೂನು ವಿವಾದಗಳನ್ನು ಶೀಘ್ರ ಬಗೆಹರಿಸಲು ಅಧಿಕೃತ ಮಧ್ಯಸ್ಥಿಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಲು ಮತ್ತು ಅವುಗಳನ್ನು ಶೀಘ್ರವಾಗಿ ಪರಿಹರಿಸಲು ನಿಯಮಿತ ಆನ್ಲೈನ್ ನೇರ ಸಂವಾದ ಕಾರ್ಯಕ್ರಮಗಳನ್ನು ಆರಂಭಿಸಿದ್ದೇವೆ,? ಎಂದು ಅವರು ಹೇಳಿದರು.

ಬೆಂಗಳೂರು ಅಪಾರ್ಟ್‌ಮೆಂಟ್ ಫೆಡರೇಷನ್ ಅಧ್ಯಕ್ಷ ಸತೀಶ್ ಬಿ. ಮಲ್ಯ ಮಾತನಾಡಿ, ಕಟ್ಟಡ ನಿರ್ಮಾಣ ಪ್ರಕ್ರಿಯೆ ಮತ್ತು ಅಪಾರ್ಟ್‌ಮೆಂಟ್ ಆಡಳಿತಕ್ಕೆ ಸಂಬಂಧಿಸಿದ ಹೊಸ ಕಾನೂನುಗಳನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಚಿಂತನೆ ನಡೆಸುತ್ತಿರುವುದು ಉತ್ತಮ ಬೆಳವಣಿಗೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಈಗಾಗಲೇ ನಮ್ಮೊಂದಿಗೆ ಸುಧಾರಣೆಗಳ ಕುರಿತು ಸಮಾಲೋಚನೆ ನಡೆಸಿದ್ದಾರೆ. ನಮ್ಮ ಶಿಫಾರಸುಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದೇವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಐಎಎಸ್ ಅಧಿಕಾರಿ ರಾಕೇಶ್ ಸಿಂಗ್, ರೇರಾ ಅಧಿಕಾರಿಗಳು, ಕಾನೂನು ತಜ್ಞರು, ಅಪಾಟ್‌ಮೆಂಟ್ ಸಂಘಗಳ ಪ್ರತಿನಿಧಿಗಳು, ವಕೀಲರು, ಬಿಲ್ಡರ್ಗಳು ಹಾಗೂ ಇತರೆ ಕೈಗಾರಿಕಾ ವಲಯದ ಪ್ರಮುಖರು ಭಾಗವಹಿಸಿದ್ದರು.

# ಟ್ರಾಯ್ ಅಧಿಕಾರಿ ಹೆಸರಲ್ಲಿ ಕರೆಮಾಡಿ ವಂಚನೆ: ಸಿಇಎನ್ ಠಾಣೆಯಲ್ಲಿ ದೂರು ದಾಖಲು

**ಬೆಂಗಳೂರು, ಜೂ.9:** ಟ್ರಾಯ್ ಅಧಿಕಾರಿ ಸೋಗಿನಲ್ಲಿ ಕರೆ ಮಾಡಿ ನಿಮ್ಮ ಮೊಬೈಲ್ ನಂಬರ್‌ಗೆ ಕಾನೂನುಬಾಹಿರ ಕರೆಗಳು ಬರುತ್ತಿವೆ ಎಂದು ವಿಚಾರಣೆ ಮಾಡುವ ನೆಪದಲ್ಲಿ ಮಹಿಳೆಗೆ ಬರೋಬ್ಬರಿ ಆರು ತಿಂಗಳ ಕಾಲ ಡಿಜಿಟಲ್ ಅರೆಸ್ಟ್ ಮಾಡಿದ ಸೈಬರ್ ವಂಚಕರು, ಬರೋಬ್ಬರಿ 1.63 ಕೋಟಿ ರೂ.ಸುಲಿಗೆ ಮಾಡಿರುವ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಶ್ರೀನಿವಾಸ ನಗರ ನಿವಾಸಿ ರಜಿನಿ ಎಂಬುವರು ದಕ್ಷಿಣ ವಿಭಾಗದ ಸಿಇಎನ್ ಠಾಣೆಗೆ ದೂರು ನೀಡಿದ್ದು, ಆರೋಪಿಗಳ ಪತ್ತೆ ಕಾರ್ಯ ನಡೆಯುತ್ತಿದೆ. 2025ರ ಡಿ.6ರಂದು ಕರೆ ಮಾಡಿ ಸೈಬರ್ ವಂಚಕರು, 2026ರ ಮೇ 5ರ ವರೆಗೆ ರಜಿನಿ ಅವರನ್ನು ಡಿಜಿಟಲ್ ಅರೆಸ್ಟ್ ಮಾಡಿ 1.63 ಕೋಟಿ ರೂ. ಸುಲಿಗೆ ಮಾಡಿದ್ದಾರೆ ಎಂದು ಸೆನ್ ಠಾಣೆ ಪೊಲೀಸರು ಮಾಹಿತಿ ನೀಡಿದರು.

ಡಿ.6ರಂದು ಅಪರಿಚಿತ ವ್ಯಕ್ತಿ ಕರೆ ಮಾಡಿ ನಾವು ಭಾರತದ ಟೆಲಿಕಾಂ ನಿಯಂತ್ರಣ ಸಂಸ್ಥೆ (ಟ್ರಾಯ್)ಯ ಅಧಿಕಾರಿ ಕರೆ ಮಾಡುತ್ತಿರುವುದಾಗಿ ಪರಿಚಯಿಸಿಕೊಂಡಿದ್ದಾನೆ. ನಿಮ್ಮ ಮೊಬೈಲ್‌ಗೆ ಕಾನೂನುಬಾಹಿರ ಮೊಬೈಲ್‌ಗಳಿಂದ ಸುಮಾರು 70 ರಿಂದ 80 ಕರೆಗಳು ಬಂದಿವೆ. ಹೀಗಾಗಿ ನಿಮ್ಮನ್ನು ವಿಚಾರಣೆ ಮಾಡಬೇಕು ಎಂದಿದ್ದಾನೆ.

ಮರು ದಿನ ಮತ್ತೆ ವಾಟ್ಸ್‌ಆ್ಯಪ್ ಕರೆಮಾಡಿ, ಅವರ ಪತಿಯ ವಿವರಗಳನ್ನು ಪಡೆದು ಸೆಕ್ಯೂರಿಟಿ ಡೆಪಾಸಿಟ್ ಸೇರಿ ಇತರ ಕಾರಣಗಳನ್ನು ನೀಡಿ ಹಣ ವರ್ಗಾವಣೆ ಮಾಡುವಂತೆ ಹೇಳಿದ್ದಾನೆ. ಹೀಗೆ 2025ರ ಡಿಸೆಂಬರ್‌ನಿಂದ 2026ರ ಮೇವರೆಗೆ ಡಿಜಿಟಲ್ ಅರೆಸ್ಟ್ ಮಾಡಿ ವಿವಿಧ ಹಂತದಲ್ಲಿ 1.63 ಕೋಟಿ ರೂ. ವರ್ಗಾವಣೆ ಮಾಡಿಕೊಂಡು ವಂಚಿಸಿದ್ದಾರೆ ಎಂದು ರಜಿನಿ ದೂರಿನಲ್ಲಿ ಆರೋಪಿಸಿದ್ದಾರೆ. ತನಿಖೆ ನಡೆಯುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದರು.

# ನಾಲ್ವರ ಬಂಧನ, 14.94 ಲಕ್ಷ ರೂ. ಮೌಲ್ಯದ ಮಾದಕವಸ್ತು ವಶ

**ಬೆಂಗಳೂರು, ಜೂ.9:** ನಗರ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿ ಹೊರರಾಜ್ಯದ ಮೂವರು ಡ್ರಗ್ಸ್ ಪೆಡ್ಲರ್‌ಗಳು ಸೇರಿದಂತೆ ನಾಲ್ವರನ್ನು ಬಂಧಿಸಿ 14.94 ಲಕ್ಷ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿ ಕೊಂಡಿದ್ದಾರೆ.

ಪುಲಕೇಶಿನಗರದ ಅರ್ಜುನ್ (21), ಮಾರತ್ತಹಳ್ಳಿಯ ಫಿರೋಜ್ ಅನ್ಸಾರಿ '(38), ಬೊಮನಹಳ್ಳಿಯ ತ್ರಿಭುವನ್‌ಕುಮಾರ್ (22) ಮತ್ತು ಭಾರತಿನಗರ ನಿವಾಸಿ ಮುಜಾಮಿಲ್ ಅಹಮದ್ (36) ಬಂಧಿತ ಡ್ರಗ್ ಪೆಡ್ಲರ್‌ಗಳು.ಮಾರತ್ತಹಳ್ಳಿ, ಬೊಮನಹಳ್ಳಿ, ಪುಲಕೇಶಿನಗರ, ಭಾರತಿನಗರ ಪೊಲೀಸ್ ಠಾಣಾ ವ್ಯಾಪ್ತಿಗಳಲ್ಲಿ ನಿಷೇಧಿತ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾರೆಂಬ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿ ಹೊರರಾಜ್ಯದ ಮೂವರು ಹಾಗೂ ಸ್ಥಳೀಯ ಒಬ್ಬನನ್ನು ಬಂಧಿಸಲಾಗಿದೆ.

ಪೆಡ್ಲರ್‌ಗಳಿಂದ 10 ಕೆ.ಜಿ 200 ಗಾಂಜಾ, 20 ಗ್ರಾಂ ಎಂಡಿಎಂಎ, 10.03 ಗ್ರಾಂ ಮೆಥಪೆಂಟಮೈನ್, 2.5 ಕೆ.ಜಿ ಕೊಡೈನ್ ಕಾ ಸಿರಪ್ ಹಾಗೂ ಕೃತ್ಯಕ್ಕೆ ಬಳಸಿದ್ದ ಕಾರು ವಶಪಡಿಸಿಕೊಳ್ಳಲಾಗಿದ್ದು, ಇವುಗಳ ಒಟ್ಟು ಮೌಲ್ಯ 7.47 ಲಕ್ಷ (ಮಾರುಕಟ್ಟೆ ಮೌಲ್ಯ 14.94 ಲಕ್ಷ) ರೂ.ಗಳೆಂದು ಅಂದಾಜಿಸಲಾಗಿದೆ.

ಆರೋಪಿಗಳನ್ನು ವಿಚಾರಣೆಗೊಳಪಡಿಸಿದಾಗ, ಹೆಚ್ಚಿನ ಹಣಗಳಿಸುವ ಉದ್ದೇಶದಿಂದ, ಹೊರ ರಾಜ್ಯದ ಮತ್ತು ಸ್ಥಳೀಯ ಅಪರಿಚಿತ ವ್ಯಕ್ತಿಗಳಿಂದ ನಿಷೇಧಿತ ಮಾದಕ ವಸ್ತುಗಳಾದ ಗಾಂಜಾ, ಎಂಡಿಎಂಎ, ಮೆಥಪೆಂಟಮೈನ್, ಕೊಡೈನ್ ಕಾ ಸಿರಪ್ ಅನ್ನು ಕಡಿಮೆ ಬೆಲೆಗೆ ಖರೀದಿಸಿಕೊಂಡು ಬಂದು ಸಾರ್ವಜನಿಕರಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದುದಾಗಿ ಹೇಳಿದ್ದಾರೆ. ಈ ಪ್ರಕರಣಗಳಲ್ಲಿ ಆರೋಪಿಗಳಿಗೆ ನಿಷೇಧಿತ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ಹೊರ ರಾಜ್ಯದ ಮತ್ತು ಸ್ಥಳೀಯ ಅಪರಿಚಿತ ವ್ಯಕ್ತಿಗಳ ಪತ್ತೆ ಕಾರ್ಯ ಮುಂದುವರೆದಿದ್ದು, ಪ್ರಕರಣಗಳ ತನಿಖೆಯು ಪ್ರಗತಿಯಲ್ಲಿದೆ.

# ಆಸ್ತಿ ತೆರಿಗೆ ಸಂಗ್ರಹದಲ್ಲಿ ಗಮನಾರ್ಹ ಸಾಧನೆ: ಆರ್ಥಿಕ ವರ್ಷದ 3 ತಿಂಗಳಲ್ಲಿ 2,933 ಕೋಟಿ ರೂ. ಸಂಗ್ರಹ




**ಬೆಂಗಳೂರು, ಜೂ.9:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರಪಾಲಿಕೆಗಳು 2026–27ನೇ ಆರ್ಥಿಕ ವರ್ಷದ ಆರಂಭಿಕ ಹಂತದಲ್ಲೇ ಆಸ್ತಿ ತೆರಿಗೆ ಸಂಗ್ರಹದಲ್ಲಿ ಗಮನಾರ್ಹ ಸಾಧನೆ ಮಾಡಿವೆ. ಆರ್ಥಿಕ ವರ್ಷ ಆರಂಭವಾಗಿ ಮೂರು ತಿಂಗಳು ಪೂರ್ಣಗೊಳ್ಳುವ ಮುನ್ನವೇ 2,933 ಕೋಟಿ ಆಸ್ತಿ ತೆರಿಗೆ ಸಂಗ್ರಹವಾಗಿದ್ದು, ವಾರ್ಷಿಕ ಗುರಿಯ ಶೇ.47ರಷ್ಟು ಸಾಧನೆಯಾಗಿದೆ.

ಜಿಬಿಎ ಈ ಸಾಲಿನಲ್ಲಿ ಒಟ್ಟು 6,000 ಕೋಟಿ ಆಸ್ತಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಿದೆ. ಇನ್ನೂ ಸುಮಾರು ಒಂಬತ್ತೂವರೆ ತಿಂಗಳು ಬಾಕಿ ಇರುವಾಗಲೇ ಗುರಿಯ ಅರ್ಧದಷ್ಟು ಮೊತ್ತವನ್ನು ಸಂಗ್ರಹಿಸಿರುವುದು ಕಂದಾಯ ವಿಭಾಗದ ಅಧಿಕಾರಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿದೆ.

ತೆರಿಗೆ ಪಾವತಿಯನ್ನು ಉತ್ತೇಜಿಸಲು ಜೂನ್ 30ರವರೆಗೆ ಶೇ.5ರಷ್ಟು ರಿಯಾಯಿತಿ ಘೋಷಿಸಿರುವ ಜಿಬಿಎ ಕ್ರಮವೂ ಉತ್ತಮ ಸ್ಪಂದನೆ ಪಡೆದಿದೆ. ಇದರ ಪರಿಣಾಮವಾಗಿ ಆರಂಭಿಕ ತಿಂಗಳಲ್ಲೇ ತೆರಿಗೆ ಸಂಗ್ರಹ ವೇಗ ಪಡೆದುಕೊಂಡಿದೆ. ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತರಲು ಜಾರಿಗೊಳಿಸಲಾದ ಬಿ–ಟು–ಎ ಖಾತಾ ಯೋಜನೆ ಕೂಡ ತೆರಿಗೆ ಸಂಗ್ರಹಕ್ಕೆ ನೆರವಾಗಿದೆ. ಪ್ರಸ್ತುತ ವಾರಕ್ಕೆ 10 ಕೋಟಿಯಿಂದ 13 ಕೋಟಿ ವರೆಗೆ ಆಸ್ತಿ ತೆರಿಗೆ ಸಂಗ್ರಹವಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತೆರಿಗೆ ಬಾಕಿದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದ್ದು, ಹೆಚ್ಚಿನ ಮೊತ್ತದ ಬಾಕಿ ಉಳಿಸಿಕೊಂಡಿರುವ ಆಸ್ತಿ ಮಾಲೀಕರಿಗೆ ನೋಟಿಸ್ ನೀಡಲಾಗುತ್ತಿದೆ. ಕೆಲವು ವಾಣಿಜ್ಯ ಕಟ್ಟಡಗಳನ್ನು ಸೀಜ್ ಮಾಡುವ ಕ್ರಮಕ್ಕೂ ನಗರಪಾಲಿಕೆಗಳು ಮುಂದಾಗಿವೆ. ಕಂದಾಯ ವಿಭಾಗದ ಅಧಿಕಾರಿಗಳಿಗೆ ವಾರವಾರದ ತೆರಿಗೆ ಸಂಗ್ರಹ ಗುರಿ ನಿಗದಿಪಡಿಸಿರುವುದರಿಂದ ವಸೂಲಾತಿ ಮತ್ತಷ್ಟು ಚುರುಕುಗೊಂಡಿದೆ.

ಅಧಿಕಾರಿಗಳ ಪ್ರಕಾರ, ಕಳೆದ ಸಾಲಿನ ಇದೇ ಅವಧಿಗೆ ಹೋಲಿಸಿದರೆ ಈ ಬಾರಿ ಸುಮಾರು 300 ಕೋಟಿ ಹೆಚ್ಚು ಆಸ್ತಿ ತೆರಿಗೆ ಸಂಗ್ರಹವಾಗಿದೆ. ಉಳಿದ ಒಂಬತ್ತೂವರೆ ತಿಂಗಳಲ್ಲಿ ಕನಿಷ್ಠ ಇನ್ನೂ 3,000 ಕೋಟಿ ಸಂಗ್ರಹಿಸಿ ವಾರ್ಷಿಕ ಗುರಿಯನ್ನು ಮೀರಿಸುವ ವಿಶ್ವಾಸವನ್ನು ಜಿಬಿಎ ಹೊಂದಿದೆ.

**ಪಾಲಿಕೆವಾರು ಆಸ್ತಿ ತೆರಿಗೆ ಸಂಗ್ರಹ**

| ನಗರಪಾಲಿಕೆ | ಸಂಗ್ರಹ (ಕೋಟಿ) |
|---|---|
| ಪೂರ್ವ ನಗರಪಾಲಿಕೆ | 788 |
| ಪಶ್ಚಿಮ ನಗರಪಾಲಿಕೆ | 576 |
| ಕೇಂದ್ರ ನಗರಪಾಲಿಕೆ | 574 |
| ದಕ್ಷಿಣ ನಗರಪಾಲಿಕೆ | 539 |
| ಉತ್ತರ ನಗರಪಾಲಿಕೆ | 456 |
| ಒಟ್ಟು | 2,933 |

**ಆಸ್ತಿ ತೆರಿಗೆ ಸಂಗ್ರಹದಲ್ಲಿ ಪೂರ್ವ ನಗರಪಾಲಿಕೆ 788 ಕೋಟಿಯೊಂದಿಗೆ ಮೊದಲ ಸ್ಥಾನದಲ್ಲಿದ್ದು, ಪಶ್ಚಿಮ, ಕೇಂದ್ರ ಹಾಗೂ ದಕ್ಷಿಣ ನಗರಪಾಲಿಕೆಗಳು ಕೂಡ ಉತ್ತಮ ಸಾಧನೆ ದಾಖಲಿಸಿವೆ. ಒಟ್ಟಾರೆ, ಜಿಬಿಎ ವ್ಯಾಪ್ತಿಯ ನಗರಪಾಲಿಕೆಗಳ ತೆರಿಗೆ ಸಂಗ್ರಹದ ವೇಗ ಈ ಬಾರಿ ದಾಖಲೆ ನಿರ್ಮಿಸುವ ಸೂಚನೆ ನೀಡಿದೆ.**

### ವಿಶಾಖಪಟ್ಟಣ ಉಕ್ಕು ಕಾರ್ಖಾನೆ ಅವಘಡ, ಕಾರ್ಮಿಕರು ಮೃತಪಟ್ಟ ಪ್ರಕರಣ

# ಸ್ವತಂತ್ರ ತನಿಖೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆದೇಶ

**ವಿಶಾಖಪಟ್ಟಣ, ಜೂ.9:** ಇಲ್ಲಿನ ಉಕ್ಕು ಕಾರ್ಖಾನೆಯಲ್ಲಿ ಸಂಭವಿಸಿದ ಅವಘಡದಲ್ಲಿ ಹಲವು ಕಾರ್ಮಿಕರು ಮೃತಪಟ್ಟ ಸುದ್ದಿ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ವಿಸ್ತೃತವಾಗಿ ಪರಿಶೀಲನೆ ನಡೆಸಿ, ಇಡೀ ಘಟನೆಯ ಕುರಿತು ಸ್ವತಂತ್ರ ತನಿಖೆಗೆ ಆದೇಶಿಸಿದರು.

ಸೋಮವಾರ ಸಂಜೆ ಘಟನೆಯ ಮಾಹಿತಿ ಸಿಗುತ್ತಿದ್ದಂತೆಯೇ ಬೆಂಗಳೂರಿನಿಂದ ವಿಶಾಖಪಟ್ಟಣಕ್ಕೆ ಧಾವಿಸಿದ ಸಚಿವರು, ವಿಮಾನ ನಿಲ್ದಾಣದಿಂದ ನೇರವಾಗಿ ದುರ್ಘಟನೆ ಸಂಭವಿಸಿದ ಸ್ಥಳಕ್ಕೆ ತೆರಳಿದರು.

ಉಕ್ಕು ಕರಗಿಸುವ ಘಟಕದಲ್ಲಿನ ಉಷ್ಣ ನಿರೋಧಕ ದ್ರವರೂಪದ ಕೊಳಗದಿಂದ ದ್ರವರೂಪದ ಲೋಹ ಸೋರಿಕೆಯಾದ ಹಿನ್ನೆಲೆಯಲ್ಲಿ ಸ್ಫೋಟ ಸಂಭವಿಸಿ ದುರಂತ ಘಟಿಸಿರಬಹುದು ಎಂದು ಅಧಿಕಾರಿಗಳು ಅಂದಾಜಿಸಿದ್ದು, ಈ ಬಗ್ಗೆ ಸಚಿವ ಕುಮಾರಸ್ವಾಮಿ ಅವರಿಗೆ ವಿವರಣೆ ನೀಡಿದರು. ದುರಂತ ನಡೆದ ಸ್ಥಳವನ್ನು ಪರಿಶೀಲನೆ ನಡೆಸಿದ ಎಚ್‌ಡಿಕೆ ಘಟನೆಯ ಬಗ್ಗೆ ಆಘಾತ ವ್ಯಕ್ತಪಡಿಸಿದರು. ಅಲ್ಲದೆ, ದುರಂತದಲ್ಲಿ ಸಾವನ್ನಪ್ಪಿದ ಕಾರ್ಮಿಕರ ಬಗ್ಗೆ ಹಾಗೂ ದುರಂತಕ್ಕೆ ಕಾರಣವಾದ ಅಂಶಗಳ ಬಗ್ಗೆ ತಕ್ಷಣವೇ ವರದಿ ನೀಡುವಂತೆ ಕಾರ್ಖಾನೆಯ ಆಡಳಿತ ಮಂಡಳಿಗೆ ಸಚಿವ ಕುಮಾರಸ್ವಾಮಿ ಅವರು ಸೂಚನೆ ನೀಡಿದರು.

**ರಾತ್ರಿ ಒಂದುವರೆವರೆಗೂ ಆಸ್ಪತ್ರೆಯಲ್ಲೇ ಇದ್ದ ಸಚಿವರು:** ದುರ್ಘಟನೆಯ ವಿಷಯ ತಿಳಿಯುತ್ತಿದ್ದಂತೆಯೇ ಬೆಂಗಳೂರಿನಿಂದ ವಿಶಾಖ ಕಾರ್ಖಾನೆಗೆ ಧಾವಿಸಿಬಂದ ಸಚಿವರು, ದುರ್ಘಟನಾ ಸ್ಥಳ ಪರಿಶೀಲಿಸಿದ ನಂತರ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದ ಆಸ್ಪತ್ರೆಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಿದರು. ನಂತರ ಮೃತ ಕಾರ್ಮಿಕರ ಕುಟುಂಬಗಳ ಸದಸ್ಯರನ್ನು ಭೇಟಿಯಾಗಿ ಸಾಂತ್ವನ ಹೇಳಿದರು.



## ಮೃತರ ಕುಟುಂಬಕ್ಕೆ ತಲಾ 25 ಲಕ್ಷ ರೂ. ಪರಿಹಾರ

**ದುರಂತದಲ್ಲಿ ಮೃತಪಟ್ಟ ಕುಟುಂಬ ಸದಸ್ಯರಲ್ಲಿ ಒಬ್ಬರಿಗೆ ಉದ್ಯೋಗ ಮತ್ತು ಅವರಿಗೆ ದೊರೆಯುವ ಪ್ರಯೋಜನಗಳ ಜತೆಗೆ 25 ಲಕ್ಷ ರೂ. ಪರಿಹಾರವನ್ನು ನೀಡಲಾಗುವುದು. ತೀವ್ರವಾಗಿ ಗಾಯಗೊಂಡ ಕಾರ್ಮಿಕರಿಗೆ 10 ಲಕ್ಷ ರೂ. ಪರಿಹಾರ ನೀಡಲಾಗುವುದು. ಅಲ್ಲದೆ ಗಾಯಾಳುಗಳ ವೈದ್ಯಕೀಯ ವೆಚ್ಚವನ್ನು ಸಂಪೂರ್ಣವಾಗಿ ಕಾರ್ಖಾನೆ ಆಡಳಿತವೇ ಭರಿಸಲಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಘೋಷಿಸಿದರು. ಜೊತೆಗೆ, ಮೃತರ ಕುಟುಂಬ ಸದಸ್ಯರು ಮೃತರ ನಿವೃತ್ತಿಯ ದಿನಾಂಕದವರೆಗೆ ಸ್ಟೀಲ್ ಪ್ಲಾಂಟ್ ಟೌನ್‌ಶಿಪ್‌ನಲ್ಲಿ ವಸತಿ ಗೃಹಗಳಲ್ಲಿ ವಾಸಿಸಲು ಅನುಮತಿಸಲಾಗಿದೆ. ಇದನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಲಾಗಿದೆ. ಹಾಗೆಯೇ, ಮೃತ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸದ ವೆಚ್ಚವನ್ನು ಕಾರ್ಖಾನೆ ಭರಿಸಲಿದೆ ಎಂದು ಹೇಳಿದರು. ಮೃತ ಕಾಯಂ ಕಾರ್ಮಿಕರಿಗೆ ಯಾವ ರೀತಿಯ ಪರಿಹಾರ ದೊರೆಯುತ್ತದೆಯೋ ಗುತ್ತಿಗೆ ಕಾರ್ಮಿಕರಿಗೂ ಅಷ್ಟೇ ಪ್ರಮಾಣದ ಪರಿಹಾರ ಮೊತ್ತ ನೀಡಲಾಗುವುದು ಎಂದು ಸಚಿವರು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು.**

> **ಮೃತಪಟ್ಟ ಕಾರ್ಮಿಕರ ಕುಟುಂಬಗಳಿಗೆ 25 ಲಕ್ಷ ಹಾಗೂ ಗಾಯಾಳುಗಳಿಗೆ 10 ಲಕ್ಷ ರೂ. ಪರಿಹಾರ ಘೋಷಿಸಲಾಗಿದೆ. ಅಲ್ಲದೆ, ಮೃತ ಕಾರ್ಮಿಕರ ಪ್ರತಿ ಕುಟುಂಬ ಅರ್ಹ ಸದಸ್ಯರಿಗೆ ಕಾರ್ಖಾನೆಯಲ್ಲಿ ಉದ್ಯೋಗವನ್ನೂ ನೀಡಲಾಗುವುದು. ಗಾಯಗೊಂಡವರ ಚಿಕಿತ್ಸೆಯ ಸಂಪೂರ್ಣ ವೆಚ್ಚವನ್ನು ಕಾರ್ಖಾನೆ ಭರಿಸುತ್ತದೆ. ಮೃತ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಸರ್ವ ನೆರವನ್ನು ನೀಡಲಾಗುವುದು. ಈ ದುರ್ಘಟನೆ ಬಗ್ಗೆ ನನಗೆ ತೀವ್ರ ಆಘಾತ ಉಂಟಾಗಿದೆ. ದುರಂತದ ಕಾರಣವನ್ನು ಪತ್ತೆ ಹಚ್ಚಲು ಸ್ವತಂತ್ರ ತನಿಖೆಗೆ ಆದೇಶಿಸಲಾಗಿದೆ.**
> **–ಎಚ್.ಡಿ. ಕುಮಾರಸ್ವಾಮಿ, ಕೇಂದ್ರ ಸಚಿವ**

ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಸಚಿವರು; ಸುರಕ್ಷಣೆ ಬಗ್ಗೆ ಸಂಸ್ಥೆಯು ಕಠಿಣ ವ್ಯವಸ್ಥೆಯನ್ನು ಹೊಂದಿದೆ. ಆದರೂ ಆದರೂ ಈ ದುರ್ಘಟನೆ ಸಂಭವಿಸಿದೆ. ಭವಿಷ್ಯದಲ್ಲಿ ಇಂತಹ ದುರಂತಗಳು ಮರುಕಳಿಸದಂತೆ ಕಠಿಣ ಕ್ರಮ ವಹಿಸಲಾಗುವುದು. ಎಲ್ಲಾ ರೀತಿಯಲ್ಲೂ ಆ ಅಮೂಲಾಗ್ರವಾಗಿ ದುರಂತದ ಬಗ್ಗೆ ತನಿಖೆ ನಡೆಸಿನ ಕ್ರಮ ವಹಿಸಲಾಗುವುದು. ದುರಂತದ ಸ್ವತಂತ್ರ ತನಿಖೆಗೆ ಆದೇಶ ನೀಡಲಾಗಿದೆ ಎಂದು ಸಚಿವ ಕುಮಾರಸ್ವಾಮಿ ಅವರು ಮಾಹಿತಿ ನೀಡಿದರು. ಆಂಧ್ರ ಪ್ರದೇಶದ ಗೃಹ ಸಚಿವೆ ವಂಗಲಪುಡಿ ಅನಿತಾ, ಕೇಂದ್ರ ಸಚಿವ ರಾಮಮೋಹನ್ ನಾಯ್ಡು, ವಿಶಾಖಪಟ್ಟಣದ ಸಂಸದ ಶ್ರೀಭರತ್, ಸ್ಥಳೀಯ ಜನಪ್ರತಿನಿಧಿಗಳು, ಕಂಪನಿಯ ಉನ್ನತ ಅಧಿಕಾರಿಗಳು ನನ್ನ ಜೊತೆಯಲ್ಲಿ ಇದ್ದರು.

# ಜಿ.ಎಸ್. ಪಾಟೀಲ್‌ಗೆ ಸಚಿವ ಸ್ಥಾನಕ್ಕೆ ಆಗ್ರಹಿಸಿ ಉರುಳುಸೇವೆ




**ಗದಗ್, ಜೂ.9:** ರೋಣ ಶಾಸಕ ಜಿಎಸ್ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದುಆಗ್ರಹಿಸಿ ಗದಗ್ ನಗರದ ಭೂಮರೆಡ್ಡಿ ವೃತ್ತದಿಂದ ಪುಟ್ಟರಾಜ ಗವಾಯಿ ವೃತ್ತದವರೆಗೆ ಸಹಸ್ರಾರು ಮಂದಿ ಬೃಹತ್ ಜಾಥಾ ನಡೆಸಿದ್ದಲ್ಲದೇ, ಉರುಳುಸೇವೆ ನಡೆಸಿದರು. ಜಿಎಸ್ ಪಾಟೀಲ್ ಅವರನ್ನು ಮಂತ್ರಿಮಂಡಲಕ್ಕೆ ಸೇರ್ಪಡೆ ಮಾಡುವಂತೆ ಒತ್ತಾಯಿಸಿ ರೋಣದಿಂದ ಸಾವಿರಾರು ಜಿಎಸ್ ಪಾಟೀಲರ ಅಭಿಮಾನಿಗಳು ಗದಗ್ ನಗರಕ್ಕೆ ಆಗಮಿಸಿ, ಮಂತ್ರಿಸ್ಥಾನ ನೀಡುವಂತೆ ಪ್ರತಿಭಟನೆ ನಡೆಸಿದರು. ಭೂಮರೆಡ್ಡಿ ವೃತ್ತದಿಂದ ಉರುಳು ಸೇವೆ ಸೇರಿದಂತೆ ಅನೇಕ ಪ್ರತಿಭಟನೆಗಳನ್ನು ವ್ಯಕ್ತಪಡಿಸಿದ್ದಾರೆ. ರೋಣದ ಜನತೆ ಮೆರವಣಿಗೆಯ ಮುಖಾಂತರ ತಮ್ಮ ಶಾಸಕರಿಗೆ ಮಂತ್ರಿ ಸ್ಥಾನ ನೀಡುವಂತೆ ಆಗ್ರಹಿಸಿದ್ದಾರೆ.

# ಹೈಕಮಾಂಡ್ ಭೇಟಿಗೆ ದೆಹಲಿಗೆ ಸಿಎಂ

**ಬೆಂಗಳೂರು, ಜೂ.9:** ಖಾತೆ ಕುರಿತಂತೆ ಕೆಲವು ಸಚಿವರ ಅಸಮಾಧಾನದ ನಡುವೆಯೂ ಸಂಪುಟ ವಿಸ್ತರಣೆ ಮತ್ತು ಖಾತೆ ಹಂಚಿಕೆ ಕುರಿತು ಹೈಕಮಾಂಡ್ ಜೊತೆ ಚರ್ಚಿಸುವ ಸಲುವಾಗಿ ಸಿಎಂ ಡಿ.ಕೆ. ಶಿವಕುಮಾರ್ ದೆಹಲಿಗೆ ತೆರಳಲಿದ್ದಾರೆ. ಎರಡು ದಿನಗಳ ಕಾಲ ನವದೆಹಲಿಯಲ್ಲೇ ವಾಸ್ತವ್ಯ ಹೂಡಲಿದ್ದಾರೆ.

ಮುಖ್ಯಮಂತ್ರಿಯಾದ ಬಳಿಕ ಇದೇ ಮೊದಲ ಬಾರಿಗೆ ದೆಹಲಿಗೆ ಡಿಕೆ ಶಿವಕುಮಾರ್ ಭೇಟಿ ನೀಡುತ್ತಿದ್ದಾರೆ. ಬುಧವಾರ ಮಧ್ಯಾಹ್ನದ ವೇಳೆಗೆ ನವದೆಹಲಿಗೆ ತೆರಳಲಿರುವ ಸಿಎಂ ಮೊದಲಿಗೆ ಎಐಸಿಸಿ ನಾಯಕರನ್ನು ಭೇಟಿ ಮಾಡಲಿದ್ದಾರೆ. ನಂತರ ನೀತಿ ಆಯೋಗದ ಆಡಳಿತ ಮಂಡಳಿ ಸಭೆಯಲ್ಲಿ ಭಾಗವಹಿಸಲಿದ್ದು ಕೆಲವು ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ ಎಂದು ತಿಳಿದುಬಂದಿದೆ.ಸಾಧ್ಯತೆ ಇದೆ ಎನ್ನಲಾಗಿದೆ.



ಎಂಎಲ್‌ಸಿ ಡಾ. ಆರತಿಕೃಷ್ಣ ಹಾಗೂ ಉದ್ಯಮಿ ಡಾ.ರೋನಾಲ್ಡ್ ಕೊಲಾಸೋ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ವಿಧಾನಸೌಧದ ಕಚೇರಿಯಲ್ಲಿ ಮಂಗಳವಾರ ಭೇಟಿಮಾಡಿ ಸಮಾಲೋಚನೆ ನಡೆಸಿದರು.

### ಶಿವಂ ಅಸೋಸಿಯೇಟ್ಸ್ ಬಹುಕೋಟಿ ವಂಚನೆ ಹಗರಣ

## ನಟಿ ಸನ್ನಿ ಲಿಯೋನ್‌ಗೆ ಸಿಐಡಿ ನೋಟಿಸ್

**ಬೆಳಗಾವಿ, ಜೂ.9:** ಶಿವಾನಂದ ನೀಲಣ್ಣನವರ್ ಮಾಲೀಕತ್ವದ ಶಿವಂ ಅಸೋಸಿಯೇಟ್ಸ್ ಬಹುಕೋಟಿ ವಂಚನೆ ಹಗರಣಕ್ಕೆ ಸಂಬಂಧಿಸಿದಂತೆ ಬಾಲಿವುಡ್ ನಟಿ ಸನ್ನಿ ಲಿಯೋನ್‌ಗೆ ಸಿಐಡಿ ನೋಟಿಸ್ ಜಾರಿ ಮಾಡಿದೆ. ಸಾರ್ವಜನಿಕರಿಂದ ಕಾನೂನುಬಾಹಿರವಾಗಿ ಸಂಗ್ರಹಿಸಿದ ಹಣದ ಒಂದು ಭಾಗವನ್ನು ಶಿವಾನಂದ ನೀಲಣ್ಣನವರ್ ಸನ್ನಿ ಲಿಯೋನ್ ಸೇರಿ ಹಲವು ನಟ–ನಟಿಯರಿಗೆ ವರ್ಗಾವಣೆ ಮಾಡಿರುವುದು ತನಿಖೆಯಿಂದ ಬಹಿರಂಗವಾಗಿದ್ದು ಈ ಹಿನ್ನೆಲೆಯಲ್ಲಿ ನೋಟಿಸ್ ಜಾರಿ ಮಾಡಲಾಗಿದೆ. ಶಿವಾನಂದ ನೀಲಣ್ಣವರ ಸಾರ್ವಜನಿಕರ ಹಣವನ್ನು ಚಿತ್ರ ನಟಿಯರಿಗೆ ನೀಡಿರುವ ಬಗ್ಗೆ ನಮಗೆ ಸ್ಪಷ್ಟ ಮಾಹಿತಿ ಲಭ್ಯವಾಗಿದೆ. ಈ ಹಿನ್ನೆಲೆಯಲ್ಲಿ ಸನ್ನಿ ಲಿಯೋನ್ ಸೇರಿದಂತೆ ಹಣ ಪಡೆದ ಇತರೆ ನಟ–ನಟಿಯರಿಗೂ ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದೇವೆ ಎಂದರು. ಆರೋಪಿ ಶಿವಾನಂದ ನೀಲಣ್ಣವರ ಒಟ್ಟು 40,700 ಹೂಡಿಕೆದಾರರಿಂದ ಬರೋಬ್ಬರಿ 2,400 ಕೋಟಿ ರೂ.ಗಳನ್ನು ಸಂಗ್ರಹಿಸಿದ್ದು, ಸಂಗ್ರಹಿಸಿದ ಭಾರಿ ಮೊತ್ತದಲ್ಲಿ 540 ಕೋಟಿ ರೂ.ಗಳನ್ನು ಆತ ಷೇರು ಪೇಟೆಯಲ್ಲಿ ಹೂಡಿಕೆ ಮಾಡಿ, ಅದರಲ್ಲಿ 170 ಕೋಟಿ ರೂ. ನಷ್ಟ ಅನುಭವಿಸಿದ್ದಾನೆ ಸಿಐಡಿ ಡಿಐಜಿ ಭೀಮಾಶಂಕರ ಗುಳೇದ ತಿಳಿಸಿದ್ದಾರೆ.

# ರೈಲುಮಾರ್ಗದ ವಿದ್ಯುತ್ ವ್ಯವಸ್ಥೆ ಉನ್ನತೀಕರಣಕ್ಕೆ ಅನುಮೋದನೆ



**ನವದೆಹಲಿ, ಜೂ.9:** ರೈಲು ಮಾರ್ಗದ ವಿದ್ಯುತ್ ಎಳೆತ (ಟ್ರಾಕ್ಷನ್) ವ್ಯವಸ್ಥೆಯ ಉನ್ನತೀಕರಣಕ್ಕೆ ಭಾರತೀಯ ರೇಲ್ವೆಯಿಂದ ಅನುಮೋದನೆ ನೀಡಲಾಗಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ಹಾಗೂ ತುಮಕೂರು ಲೋಕಸಭಾ ಸದಸ್ಯ ವಿ. ಸೋಮಣ್ಣ ತಿಳಿಸಿದ್ದಾರೆ.

ರಾಜ್ಯದ ಅತ್ಯಂತ ಜನನಿಬಿಡ ರೇಲ್ವೆ ಕಾರಿಡಾರಗಳಲ್ಲಿ ಒಂದಾದ ಬೆಂಗಳೂರು – ತುಮಕೂರು ಮಾರ್ಗದಲ್ಲಿ ರೈಲು ಸಾಮರ್ಥ್ಯ ಮತ್ತು ಕಾರ್ಯಾಚರಣೆಯ ದಕ್ಷತೆ ಹೆಚ್ಚಿಸುವ ನಿಟ್ಟಿನಲ್ಲಿ 162.57 ಕೋಟಿ ರೂ. ವೆಚ್ಚದಲ್ಲಿ ಟ್ರಾಕ್ಷನ್ ವ್ಯವಸ್ಥೆಯನ್ನು ಉನ್ನತೀಕರಣಗೊಳಿಸಲಾಗುತ್ತಿದೆ. ಇದರಿಂದ ಬೆಂಗಳೂರು – ತುಮಕೂರು ಮಾರ್ಗದಲ್ಲಿ 120 ಟ್ರಾಕ್ ಕಿ.ಮೀ. ವ್ಯಾಪ್ತಿಯಲ್ಲಿ ಪ್ರಸ್ತುತ 1ಥ25 ಕೆವಿ ವಿದ್ಯುತ್ ಟ್ರಾಕ್ಷನ್ ವ್ಯಾಪ್ತಿಯಲ್ಲಿ 2ಥ25 ಕೆವಿ ವಿದ್ಯುತ್ ಟ್ರಾಕ್ಷನ್ ವ್ಯವಸ್ಥೆಯಾಗಿ ಪರಿವರ್ತಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ

ಬೆಂಗಳೂರು– ತುಮಕೂರು ಭಾಗವು ಹೆಚ್ಚಿನ ಬಳಕೆಯಲ್ಲಿರುವ ಮಾರ್ಗವಾಗಿದ್ದು ಪುಣೆ – ಹುಬ್ಬಳ್ಳಿ – ಚಿಕ್ಕಜಾಜೂರು – ಬೀರೂರು– ತುಮಕೂರು–ಬೆಂಗಳೂರು– ಸೇಲಂ– ಕನ್ಯಾಕುಮಾರಿ ಕಾರಿಡಾರ್ ಉದ್ದಕ್ಕೂ ಇರುವ ಪ್ರಮುಖ ಆರ್ಥಿಕ ಮತ್ತು ಕೈಗಾರಿಕೆ ಕೇಂದ್ರಗಳನ್ನು ಸಂಪರ್ಕಿಸುತ್ತದೆ. ಉನ್ನತೀಕರಿಸಿದ ಟ್ರಾಕ್ಷನ್ ವ್ಯವಸ್ಥೆಯನ್ನು ಅಳವಡಿಸುವುದರಿಂದ ರೈಲು ಕಾರ್ಯಾಚರಣೆಗಾಗಿ ವಿದ್ಯುತ್ ಪೂರೈಕೆಯಲ್ಲಿ ಬಲವರ್ಧನೆ ದೊರೆಯಲಿದ್ದು, ಸಂಚಾರ ದಟ್ಟಣೆಯನ್ನು ದಕ್ಷತೆಯಿಂದ ನಿಭಾಯಿಸಲು ಅನುಕೂಲವಾಗಲಿದೆ ಎಂದು ಸೋಮಣ್ಣ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಯೋಜನೆಯನ್ನು ತುಮಕೂರಿನ ಅಭಿವೃದ್ಧಿಗಾಗಿ ನೀಡಿದ ಪ್ರಧಾನಿ ನರೇಂದ್ರ ಮೋದಿಯವರನ್ನು ಮತ್ತು ಕೇಂದ್ರದ ರೇಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ತುಮಕೂರಿನ ಜನತೆಯ ಪರವಾಗಿ ವಿ. ಸೋಮಣ್ಣ ಅಭಿನಂದಿಸಿದ್ದಾರೆ.

# ನೆಹರು, ಇಂದಿರಾ ಅವರಿಂದಲೇ ಆಗಲಿಲ್ಲ, ನಿಮ್ಮಿಂದ ಆಗುತ್ತಾ?



**■ ಆರ್‌ಎಸ್‌ಎಸ್ ನೋಂದಣಿಗೆ ಸಿದ್ಧವಾಗಿ ಎಂಬ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ಸಿ.ಟಿ. ರವಿ ವಾಗ್ದಾಳಿ**


**ಬೆಂಗಳೂರು, ಜೂ.9:** ಆರ್‌ಎಸ್‌ಎಸ್‌ನವರು ಸಂಘವನ್ನು ನೋಂದಣಿ ಮಾಡಿಸಲು ರೆಡಿಯಾಗಿ ಎಂಬ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿರುವ ಬಿಜೆಪಿ ಪರಿಷತ್ ಸದಸ್ಯ ಸಿ.ಟಿ.ರವಿ, ನಿಮ್ಮ ತಂದೆಯಿಂದಲೇ ಆರ್‌ಎಸ್‌ಎಸ್‌ಗೆ ಏನು ಮಾಡಲು ಆಗಿಲ್ಲ, ನಿಮ್ಮಿಂದ ಆಗುತ್ತಾ ಎಂದು ವಾಗ್ದಾಳಿ ನಡೆಸಿದ್ದಾರೆ.

ವಿಧಾನಸೌಧ'ದಲ್ಲಿ ಮಾತನಾಡಿದ ಅವರು, ನೆಹರು ಪ್ರಧಾನಿ ಆಗಿದ್ದಾಗ ಆರ್‌ಎಸ್‌ಎಸ್ ವಿರೋಧ ಮಾಡಿದರು. ಆದರೆ, ಇಂದು ನೆಹರು ಅವರಿಲ್ಲ, ಆದರೆ, ಆರ್‌ಎಸ್‌ಎಸ್ ಇನ್ನೂ ಇದೆ. ನಂತರ ಇಂದಿರಾಗಾಂಧಿ ತುರ್ತುಸ್ಥಿತಿ ಹೇರಿದರು, ಆರ್‌ಎಸ್‌ಎಸ್ ಬ್ಯಾನ್ ಮಾಡಿದರು. ಆದರೆ, ಇಂದು ಇಂದಿರಾಗಾಂಧಿ ಇಲ್ಲ. ಆರ್‌ಎಸ್‌ಎಸ್ ಇನ್ನೂ ಇದೆ. ಪ್ರಿಯಾಂಕ್ ಅವರೇ ನೀವು ನಿನ್ನೆ ಮೊನ್ನೆ ಗೃಹ ಸಚಿವರು ಆಗಿರೋದು. ನಿಮ್ಮ ಅಪ್ಪ ನಿಮಗಿಂತ ಮುಂಚೆಯೇ ಗೃಹ ಸಚಿವರು ಆಗಿದ್ದರು. ಅವರಿಂದಲೇ ಏನೂ ಮಾಡಲಾಗಲಿಲ್ಲ, ಇನ್ನು ನಿಮ್ಮಿಂದ ಸಾಧ್ಯವೇ ಎಂದು ಕಿಡಿಕಾರಿದರು.

ನೀವು ಸರ್ವಾಧಿಕಾರಿ ಅಲ್ಲ. ನಿಮ್ಮ ಪಕ್ಷದ ಕೊನೆ ದಿನಗಳು ಸಮೀಪಿಸುತ್ತಿದೆ. ಕಾಂಗ್ರೆಸ್ ಮುಂದೆ ಅಧಿಕಾರಕ್ಕೆ ಬರಲ್ಲ.

**ಗೃಹ ಸಚಿವರಾಗಿ ನಿಮಗೆ ಬೇರೆ ಕೆಲಸ ಇದೆ, ಗಮನಹರಿಸಿ:** ಆರ್‌ಎಸ್‌ಎಸ್ ರಾಷ್ಟ್ರದ ಕೆಲಸ, ವ್ಯಕ್ತಿಗೆ ಸಂಸ್ಕಾರ ಕೊಡುವ ಕೆಲಸ ಮಾಡುತ್ತಿದೆ. ನೋಂದಣಿ ಮಾಡೋಕೆ ಅದು ಸಂಘ ಅಲ್ಲ. ಸಮಾಜವನ್ನು ಸಂಘಟಿಸುವ ಸಂಘಟನೆ ಅದು. ನಿಮಗೆ ಗೃಹ ಸಚಿವರಾಗಿ ಬೇರೆ ಕೆಲಸ ಇದೆ. ಅದನ್ನ ನೋಡಿ ಎಂದು ತಿರುಗೇಟು ನೀಡಿದ್ದಾರೆ. ಅಕ್ರಮ ಬಾಂಗ್ಲಾ ವಲಸಿಗರು ಇದ್ದಾರೆ. ದರೋಡೆ, ಡ್ರಗ್ಸ್, ಹೆಣ್ಣು ಮಕ್ಕಳು ನಾಪತ್ತೆ ಈ ಬಗ್ಗೆ ಗಮನಹರಿಸಿ. ಆರ್‌ಎಸ್‌ಎಸ್‌ನಿಂದ ಅಪಾಯ ಇಲ್ಲ. ಇಲ್ಲೇ ಇದ್ದು ಬಾಂಬ್ ತಯಾರು ಮಾಡೋರ ಕಡೆ ಗಮನ ಕೊಡಿ ಎಂದು ಗುಡುಗಿದರು. ನೀವು ಹೋಂ ಮಿನಿಸ್ಟರ್, ಹೋಂ ಮಿನಿಸ್ಟರ್ ರೀತಿ ವರ್ತನೆ ಮಾಡಿ, ಗೂಂಡಾ ರೀತಿ ವರ್ತನೆ ಮಾಡಬೇಡಿ. ಅಧಿಕಾರ ಶಾಶ್ವತ ಅಲ್ಲ. ಅಧಿಕಾರದಲ್ಲಿ ಮೆರೆದವರಿಗೆ ಇಂದು ಪಶ್ಚಿಮ ಬಂಗಾಳದಲ್ಲಿ ಅಟ್ಟಾಡಿಸಿ ಹೊಡೆಯುತ್ತಿದ್ದಾರೆ. ಆ ಭಯದಿಂದ ಎಚ್ಚರಿಕೆ ವಹಿಸಿ. ನೀವು ಮಾಡಬೇಕಾದ ಕೆಲಸ ಬೇರೆ ಇದೆ ಅದನ್ನ ಮಾಡಿ. ಬೆಂಕಿ ಹಚ್ಚೋ ಕೆಲಸ ಮಾಡಬೇಡಿ. ಬೆಂಕಿ ಆರಿಸೋ ಕೆಲಸ ಮಾಡಿ. ಬೆಂಕಿ ಹಚ್ಚೋಕೆ ಹೋದ್ರೆ ಆ ಬೆಂಕಿ ನಿಮ್ಮನ್ನು ಸುಡುತ್ತದೆ ಎಂದು ಸಿ.ಟಿ. ರವಿ ಕಿಡಿಕಾರಿದ್ದಾರೆ.

## ಸಚಿವ ಪ್ರಿಯಾಂಕ್ ಖರ್ಗೆ ಇತಿಮಿತಿಯಲ್ಲಿ ಕೆಲಸ ಮಾಡಲಿ



**ನವದೆಹಲಿ, ಜೂ.9:** ಆರ್‌ಎಸ್‌ಎಸ್ ಕೇವಲ ಕರ್ನಾಟಕಕ್ಕೆ ಮಾತ್ರ ಸೀಮಿತವಲ್ಲ, ಜಗತ್ತಿನ 50 ದೇಶಗಳಲ್ಲಿ ಶಾಖೆಗಳನ್ನು ಹೊಂದಿದೆ. ಸಂಘದ ಹಿರಿಯರು ನೊಂದಣಿ ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಮಾತನಾಡಿದ್ದಾರೆ. ಅದಕ್ಕೆ ನಾವು ಉತ್ತರ ಕೊಡುವ ಅಗತ್ಯವಿಲ್ಲ ಎಂದು ಸಂಸದ ಕೋಟ ಶ್ರೀನಿವಾಸ್ ಪೂಜಾರಿ ಹೇಳಿದ್ದಾರೆ.

ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಜವಾಹರಲಾಲ್ ನೆಹರು ಅವರು ಸಂಘವನ್ನು ಬ್ಯಾನ್ ಮಾಡಿದ್ದರು. ಆದರೆ ನಂತರ ಗಣರಾಜ್ಯೋತ್ಸವ ಪರೇಡ್ನಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು. ಇಂದಿರಾ ಗಾಂಧಿ ಅವರು ಬ್ಯಾನ್ ಮಾಡಲು ಪ್ರಯತ್ನಿಸಿದರೂ ಸಾಧ್ಯವಾಗಲಿಲ್ಲ ಎಂದು ತಿಳಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಎಲ್ಲರನ್ನೂ ಒಟ್ಟಿಗೆ ಕರೆದೊಯ್ಯುತ್ತೇವೆ ಎನ್ನುತ್ತಾರೆ. ಆದರೆ ಅಪಪ್ರಚಾರ ಮಾಡುವ ವ್ಯಕ್ತಿಯನ್ನು ಗೃಹ ಮಂತ್ರಿಯನ್ನಾಗಿ ಮಾಡಿದ್ದಾರೆ. ಆರ್‌ಎಸ್‌ಎಸ್‌ಗೆ ಕಿರುಕುಳ ನೀಡುವ ವಿಷಯದ ಬಗ್ಗೆ ಮುಖ್ಯಮಂತ್ರಿಗಳು ಗಮನ ಹರಿಸಬೇಕು. ಬದಲಿಗೆ ಡ್ರಗ್ಸ್, ಭಯೋತ್ಪಾದನೆ ಮತ್ತು ಕಾನೂನು ವ್ಯವಸ್ಥೆಯತ್ತ ಗಮನ ಹರಿಸಲಿ ಎಂದು ಆಗ್ರಹಿಸಿದರು.

ಪ್ರಿಯಾಂಕ್ ಖರ್ಗೆ ಅವರು ತಮ್ಮ ಇತಿಮಿತಿಯಲ್ಲಿ ಕೆಲಸ ಮಾಡಬೇಕು. ಆರ್‌ಎಸ್‌ಎಸ್ ಪಾಕಿಸ್ತಾನಕ್ಕೆ ಜೈ ಎನ್ನುವ ಸಂಸ್ಥೆಯಲ್ಲ. ಅವರು ಅರ್ಥ ಮಾಡಿಕೊಳ್ಳುತ್ತಾರೆ ಎಂಬುದು ನನ್ನ ಭಾವನೆ ಎಂದು ಹೇಳಿದರು.

# ಪ್ರತಿಭಾವಂತ ವಿದ್ಯಾರ್ಥಿಗೆ 1 ಲಕ್ಷ ಬಹುಮಾನ: ಈರಣ್ಣ ಬೆಂಗಾಲಿ

**ರಾಯಚೂರು, ಜೂ. 9:** ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಲಕ್ಷಾಂತರ ರೂಪಾಯಿ ನಗದು ಕೊಡುವ ಯೋಜನೆ ಎಲ್ಲೂ ಕಂಡಿಲ್ಲ. ಈ ಹಣವು ವಿದ್ಯಾರ್ಥಿಗಳ ಮುಂದಿನ ಹಂತದ ಶಿಕ್ಷಣಕ್ಕೆ ಅನುಕೂಲ ಆಗುವುದು ಎಂದು ಲೇಖಕ ಈರಣ್ಣ ಬೆಂಗಾಲಿ ಹೇಳಿದರು.

2025–26ನೇ ಸಾಲಿನಲ್ಲಿ ಅತಿಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ನೀಡುವ ನಗದು ಹಣ ಪ್ರದಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಭಿಜ್ಞಾನ ಶಾಲೆಯು ತಮ್ಮ ಶಾಲೆಯಲ್ಲಿ ಓದಿ ಹೆಚ್ಚು ಅಂಕ ಗಳಿಸಿದ ಎಲ್‌ಕೆಜಿ ಇಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಲಕ್ಷಾಂತರ ರೂಪಾಯಿ ಬಹುಮಾನ ನೀಡುತ್ತಿರುವುದು ಶಿಕ್ಷಣಕ್ಕೆ ನೀಡುತ್ತಿರುವ ಪ್ರೋತ್ಸಾಹವಾಗಿದೆ. ಇಲ್ಲಿನ ವಿದ್ಯಾರ್ಥಿಗಳು ಅದರ ಸದುಪಯೋಗಪಡೆದುಕೊಳ್ಳಬೇಕ ು ಎಂದರು.

ಓದಿನ ಜೊತೆಗೆ ಮಾನವೀಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಉತ್ತಮ ಅಂಕಗಳೊಂದಿಗೆ ಉತ್ತಮ ವ್ಯಕ್ತಿತ್ವ ಇಂದಿನ ಅಗತ್ಯವಾಗಿದೆ. ಸನ್ನಡತೆ ಹೊಂದಬೇಕು. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಚೆನ್ನಾಗಿ ಓದಬೇಕು ಎಂದು ಸಲಹೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಈರಣ್ಣ ಕೋಸಗಿ ಮಾತನಾಡಿ, ಅತಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ನಗದು ರೂಪದ ಹಣವನ್ನು ಪ್ರದಾನ ಮಾಡುತ್ತಿರುವುದು ಶ್ಲಾಘನೀಯ ಎಂದು ಬಣ್ಣಿಸಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಶಾಲೆಗೆ ಮೊದಲ ಸ್ಥಾನಪಡೆದ ವಿದ್ಯಾರ್ಥಿನಿಗೆ ಐಶ್ವರ್ಯ ಅವರಿಗೆ 1 ಲಕ್ಷ ಮೊತ್ತದ ಚೆಕ್ ವಿತರಿಸಲಾಯಿತು.


# ಪರಿಷತ್ ಚುನಾವಣೆಗೆ ಅಡ್ಡಮತದಾನದ ಭೀತಿ: ಏಳನೇ ಸ್ಥಾನಕ್ಕಾಗಿ ತೀವ್ರ ಪೈಪೋಟಿ

## ಅಭ್ಯರ್ಥಿಗಳ ಗೆಲುವಿಗಾಗಿ ಕಾಂಗ್ರೆಸ್‌ನಿಂದ ಶಾಸಕರನ್ನು ಒಗ್ಗೂಡಿಸುವ ತಂತ್ರ

**ಬೆಂಗಳೂರು, ಜೂ.9:** ಕರ್ನಾಟಕ ವಿಧಾನ ಪರಿಷತ್ತಿನ 7 ಸ್ಥಾನಗಳಿಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆ ರಾಜ್ಯ ರಾಜಕೀಯದಲ್ಲಿ ಭಾರೀ ಕುತೂಹಲ ಮೂಡಿಸಿದೆ.

ಬಿಜೆಪಿ–ಜೆಡಿಎಸ್ ಮೈತ್ರಿ ಒಕ್ಕೂಟ ಕೂಡ ಅಭ್ಯರ್ಥಿಗಳನ್ನು ಕಣಕ್ಕಿಳಿಸಿರುವುದರಿಂದ 7ನೇ ಸ್ಥಾನಕ್ಕಾಗಿ ತೀವ್ರ ಪೈಪೋಟಿ ಉಂಟಾಗಿದೆ. ಎಲ್ಲ ಪಕ್ಷಗಳಲ್ಲೂ ಅಡ್ಡ ಮತದಾನದ ಭೀತಿ ಎದುರಾಗಿದೆ. ಅಗತ್ಯವಿರುವ ಬಲದ ಕೊರತೆ ಇರುವ ಕಡೆಗಳಲ್ಲಿ ಪಕ್ಷಗಳು ಇತರ ಪಕ್ಷದ ಶಾಸಕರ ಬೆಂಬಲ ಪಡೆಯಲು ಪ್ರಯತ್ನಿಸುತ್ತಿವೆ. ಶಾಸಕರಿಂದ ವಿಧಾನ ಪರಿಷತ್ ಸದಸ್ಯರ ಆಯ್ಕೆ ನಡೆಯುವುದರಿಂದ, ಪ್ರತಿ ಮತವೂ ನಿರ್ಣಾಯಕವಾಗಿರುತ್ತದೆ. ಹೀಗಾಗಿ ಶಾಸಕರನ್ನು ಪಕ್ಷದ ಹೈಕಮಾಂಡ್ ಒಂದೆಡೆ ಸೇರಿಸಿ, ಮತದಾನದ ವಿಧಾನದ ಬಗ್ಗೆ ಜಾಗೃತಿ ವಹಿಸುವ ಸಾಧ್ಯತೆಯೂ ಇದೆ.

ಕಾಂಗ್ರೆಸ್ ಮತ್ತು ಜೆಡಿಎಸ್ ಎರಡೂ ಪಕ್ಷಗಳಿಗೆ ಈ ಸ್ಥಾನ ಪ್ರತಿಷ್ಠೆಯ ವಿಷಯವಾಗಿದೆ. ಜೆಡಿಎಸ್‌ನಿಂದ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವುದರಿಂದ ಚುನಾವಣೆ ಅನಿವಾರ್ಯವಾಗಿದೆ. ಕಾಂಗ್ರೆಸ್ ತನ್ನ ಅಭ್ಯರ್ಥಿಗಳ ಗೆಲುವಿಗಾಗಿ ರೆಸಾರ್ಟ್ ರಾಜಕೀಯ ಅಥವಾ ಶಾಸಕರನ್ನು ಒಗ್ಗೂಡಿಸುವ ತಂತ್ರಗಳನ್ನು ಬಳಸುತ್ತಿದ್ದರೆ, ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಅಭ್ಯರ್ಥಿಯನ್ನು ಗೆಲ್ಲಿಸಲು ತಂತ್ರಗಳನ್ನು ಹೆಣೆಯುತ್ತಿವೆ. ಈ ಚುನಾವಣೆಯು ರಾಜ್ಯದಲ್ಲಿನ ಆಡಳಿತಾರೂಢ ಕಾಂಗ್ರೆಸ್‌ನ ಶಕ್ತಿ ಪ್ರದರ್ಶನ ಮತ್ತು ವಿರೋಧ ಪಕ್ಷಗಳ ಒಗ್ಗಟ್ಟಿನ ಪರೀಕ್ಷೆಯಾಗಿ ಪರಿಣಮಿಸಿದೆ. ಇದು ಕೇವಲ ಸಂಖ್ಯೆಗಳ ಆಟವಾಗಿ ಉಳಿಯದೆ, ಆಯಾ ಪಕ್ಷಗಳ ಆಂತರಿಕ ಒಗ್ಗಟ್ಟು ಮತ್ತು ರಾಜಕೀಯ ಚಾಣಾಕ್ಷತೆಯ ಪರೀಕ್ಷೆಯಾಗಿ ಪರಿಣಮಿಸಿದೆ. ಯಾವುದೇ ಒಂದು ಪಕ್ಷಕ್ಕೆ ಸ್ಪಷ್ಟ ಬಹುಮತವಿಲ್ಲದ ಅಥವಾ ಹೆಚ್ಚುವರಿ ಅಭ್ಯರ್ಥಿಯನ್ನು ಕಣಕ್ಕಿಳಿಸಿದಾಗ, ಗೆಲ್ಲಲು ಅಗತ್ಯವಿರುವ ಮತಗಳನ್ನು ಪಡೆಯಲು ಇತರ ಪಕ್ಷಗಳ ಶಾಸಕರ ಬೆಂಬಲ ಅನಿವಾರ್ಯವಾಗುತ್ತದೆ. ಇದುವೇ ಅಡ್ಡ ಮತದಾನದ ಚರ್ಚೆಗೆ ದಾರಿ ಮಾಡಿಕೊಡುತ್ತದೆ.







ಕಾಂಗ್ರೆಸ್ ಈಗಾಗಲೇ 4 ಸ್ಥಾನಗಳನ್ನು ಗೆಲ್ಲುವ ವಿಶ್ವಾಸದಲ್ಲಿದೆ. 5ನೇ ಸ್ಥಾನವನ್ನು ಗೆಲ್ಲಲು ಮೈತ್ರಿಕೂಟ ಮತ್ತು ಕಾಂಗ್ರೆಸ್ ಪಕ್ಷಗಳು ಇತರ ಪಕ್ಷಗಳ ಅಸಮಾಧಾನಿತ ಶಾಸಕರ ಮತಗಳನ್ನು ಸೆಳೆಯುವ ಪ್ರಯತ್ನ ಮಾಡಬಹುದು. ವಿಧಾನಪರಿಶ್‌ನ ಸಭಾಪತಿ, ಉಪಸಭಾಪತಿ ಹುದ್ದೆಗಳ ಮೇಲೆ ಕಾಂಗ್ರೆಸ್ ಕಣ್ಣಿಟ್ಟಿರುವ ಕಾರಣ ಈ ಚುನಾವಣೆಯಲ್ಲಿ ಹೆಚ್ಚು ಸ್ಥಾನಗಳನ್ನು ಗೆಲ್ಲುವುದು ಪ್ರತಿಷ್ಠೆಯ ವಿಷಯವಾಗಿದೆ.

**ಕಾಂಗ್ರೆಸ್:** ಕಾಂಗ್ರೆಸ್ ಪಕ್ಷ ತನ್ನ ಬಲವನ್ನು ಬಳಸಿಕೊಂಡು 5 ಸ್ಥಾನ ಗೆಲ್ಲುವ ಗುರಿ ಹೊಂದಿದೆ. ಈಗಾಗಲೇ ನಾಲ್ಕು ಅಭ್ಯರ್ಥಿಗಳ ಜತೆಗೆ 5ನೇ ಅಭ್ಯರ್ಥಿಯಾಗಿ ವಿನಯ್ ಕಾರ್ತಿಕ್ ಅವರನ್ನು ಕಣಕ್ಕಿಳಿಸಿದೆ. ಜೆಡಿಎಸ್, ಬಿಜೆಪಿ ಬೆಂಬಲದೊಂದಿಗೆ 7ನೇ ಸ್ಥಾನವನ್ನು ಗೆಲ್ಲುವ ಪ್ರಯತ್ನದಲ್ಲಿದೆ. ಮತ್ತೊಂದೆಡೆ ಜೆಡಿಎಸ್ ಗೋವಿಂದರಾಜು ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಿದೆ. ಬಿಜೆಪಿ ತನ್ನ ಬಲಕ್ಕೆ ಅನುಗುಣವಾಗಿ 2 ಸ್ಥಾನಗಳಲ್ಲಿ ಗೆಲ್ಲುವ ವಿಶ್ವಾಸದಲ್ಲಿದೆ. ಶಾಸಕರ ಅನರ್ಹತೆ ಮತ್ತು ಅಕಾಲಿಕ ನಿಧನದ ಕಾರಣ, ಪ್ರಸ್ತುತ 222 ಶಾಸಕರು ಮತ ಚಲಾಯಿಸಲಿದ್ದಾರೆ. ಒಬ್ಬ ಅಭ್ಯರ್ಥಿ ಗೆಲ್ಲಲು 28 ಪ್ರಥಮ ಪ್ರಾಶಸ್ತ್ಯ ಮತಗಳ ಅಗತ್ಯವಿದೆ. ಕಾಂಗ್ರೆಸ್ 135 ಶಾಸಕರನ್ನು ಹೊಂದಿದ್ದು, ಸ್ವತಂತ್ರರು ಮತ್ತು ಇತರರ ಬೆಂಬಲದೊಂದಿಗೆ 140 ಮತಗಳನ್ನು ತಲುಪುವ ಸಾಧ್ಯತೆ ಇದೆ. ಇದು 5 ಸ್ಥಾನಗಳನ್ನು ಗೆಲ್ಲಲು ಸಾಕಾಗಬಹುದು ಎಂಬುದು ಲೆಕ್ಕಾಚಾರ.

ಜೆಡಿಎಸ್ ತನ್ನ 18 ಮತಗಳೊಂದಿಗೆ ಬಿಜೆಪಿಯ ಹೆಚ್ಚುವರಿ 6 ಮತಗಳನ್ನು ಪಡೆದರೆ ಒಟ್ಟು 24 ಮತಗಳು ಲಭ್ಯವಾಗುತ್ತವೆ. ಇದರೊಂದಿಗೆ ಅತೃಪ್ತ ಅಥವಾ ಬಂಡಾಯ ಶಾಸಕರ ಬೆಂಬಲ ಪಡೆಯಲು ಪ್ರಯತ್ನಿಸುತ್ತಿದೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟವು ತಮ್ಮ ಬಲವನ್ನು ಕ್ರೋಢೀಕರಿಸಲು ಪ್ರಯತ್ನಿಸುತ್ತಿದ್ದರೆ, ಕಾಂಗ್ರೆಸ್ ತನ್ನ ಬಹುಮತವನ್ನು ಉಳಿಸಿಕೊಂಡು ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ತಂತ್ರಗಾರಿಕೆಯಲ್ಲಿ ತೊಡಗಿದೆ.

ಜೂನ್ 18ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ, ಮತ ಎಣಿಕೆ ಸಂಜೆ 5 ಗಂಟೆಗೆ ಪ್ರಾರಂಭವಾಗಿ ಅಂದೇ ಫಲಿತಾಂಶ ಪ್ರಕಟವಾಗಲಿದೆ.

# ಅಧಿಕಾರ ಹಸ್ತಾಂತರ ಸುಗಮ ಎನಿಸಿದರೂ ಒಳಬೇಗುದಿ ಕೆಂಡದಂತಿದೆ: ಕಾಂಗ್ರೆಸ್ ಪಕ್ಷದ ಸಂಘರ್ಷಾತ್ಮಕ ರಾಜಕಾರಣದಿಂದ ಸಾಮಾನ್ಯ ಜನರ ಬದುಕು ದುಸ್ತರ: ಸಂಸದ ಬೊಮ್ಮಾಯಿ

**ಗದಗ, ಜೂ.9:** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಸ್ತಾಂತರ ಮೇಲ್ನೋಟಕ್ಕೆ ಸುಗಮವಾಗಿ ಆಯಿತು ಎನ್ನುವಂತೆ ಕಾಣಿಸುತ್ತಿದೆ. ಆದರೆ, ಒಳಬೇಗುದಿ ಇನ್ನೂ ಕೆಂಡದಂತೆ ಜೀವಂತವಾಗಿದೆ. ಮುಂದಿನ ಎರಡು ವರ್ಷದಲ್ಲಿ ರಾಜಕೀಯ ಅಸ್ಥಿರತೆ, ಅಸಮಾಧಾನ, ಆಡಳಿತ ಕುಸಿದು ಹೋಗುತ್ತದೆ. ಕಾಂಗ್ರೆಸ್ ಪಕ್ಷದ ಸಂಘರ್ಷಾತ್ಮಕ ರಾಜಕಾರಣದಲ್ಲಿ ಸಾಮಾನ್ಯ ಜನರ ಬದುಕು ದುಸ್ತರವಾಗುವುದು ಸ್ಪಷ್ಟವಾಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ, ಅಧಿಕಾರ ಹಸ್ತಾಂತರದ ನಂತರ ರಾಜ್ಯ ಕಾಂಗ್ರೆಸ್‌ನಲ್ಲಿ ಒಳಬೇಗುದಿ ಕುದಿಯುತ್ತಿದೆ. ಅದರಿಂದಾಗಿಯೇ ಖಾತೆ ಗೊಂದಲ ನಡೆಯುತ್ತಿದೆ. ಎರಡನೇಯದಾಗಿ ಸಿದ್ದರಾಮಯ್ಯ ಅವರ ನಾಯಕತ್ವ ಒಪ್ಪಿಕೊಂಡಂತೆ ಕಾಂಗ್ರೆಸ್‌ನ ಶಾಸಕರು, ಮಂತ್ರಿಗಳು ಡಿ.ಕೆ. ಶಿವಕುಮಾರ್ ಅವರನ್ನು ಒಪ್ಪಿಕೊಂಡಿಲ್ಲ. ಮೂರನೇಯದ್ದು ಸಚಿವರಾಗಲು ಯಾಕೆ ಇಷ್ಟೊಂದು ಒತ್ತಡ ಇದೆ. ಯಾಕೆಂದರೆ 2028ಕ್ಕೆ ಕಾಂಗ್ರೆಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಶಾಸಕರಿಗೆ ಗೊತ್ತಾಗಿದೆ. ಹೀಗಾಗಿ ಈಗಲೇ ಮಂತ್ರಿ ಆಗಬೇಕೆಂದು ಒತ್ತಡ ಹೇರುತ್ತಿದ್ದಾರೆ. ಹೀಗಾಗಿ ಬಹಳ ಸವಾಲುಗಳಿವೆ. ರಾಜಕೀಯವಾಗಿ ಸ್ಥಿರವಾಗಿದ್ದರೆ ಮಾತ್ರ ಒಳ್ಳೆಯ ಆಡಳಿತ ಕೊಡಲು ಸಾಧ್ಯ. ಡಿ.ಕೆ. ಶಿವಕುಮಾರ್ ಅವರನ್ನು ಟ್ರಬಲ್ ಶೂಟರ್ ಎಂದು ಕರೆಯುತ್ತಾರೆ. ಈಗ




ಆಗಿರುವ ಟ್ರಬಲ್‌ಗೆ ಬೇರೆ ಯಾರೂ ಶೂಟರ್ ಇಲ್ಲ. ಈ ಸವಾಲುಗಳನ್ನು ಶಿವಕುಮಾರ್ ಹೇಗೆ ನಿಭಾಯಿಸುತ್ತಾರೆ ಎನ್ನುವುದನ್ನು ಕಾದು ನೋಡಬೇಕು ಎಂದಿದ್ದಾರೆ.

**ಸಿದ್ದರಾಮಯ್ಯ ಸುಮ್ಮನೆ ಕುಳಿತಿಲ್ಲ**

ಕಾಂಗ್ರೆಸ್‌ನಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಸುಮ್ಮನಿರುತ್ತಾರಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ, ಇನ್ನೂ ಸುಮ್ಮನೆ ಕುಳಿತಿಲ್ಲ. ಮೊದಲ ಹಂತದ ಸಚಿವ ಸಂಪುಟದಲ್ಲಿ ಯಾರ ಪ್ರಭಾವ ಕಾಣುತ್ತಿದೆ, ಮಲ್ಲಿಕಾರ್ಜುನ ಖರ್ಗೆ, ಮಾಜಿ ಸಿಎಂ ಸಿದ್ದರಾಮಯ್ಯ, ಹೈಕಮಾಂಡ್ ಪ್ರಭಾವ ಮಾತ್ರ ಕಾಣಿಸುತ್ತಿದೆ. ಮುಂದಿನ ಕಂತಿನಲ್ಲಿ ಡಿ.ಕೆ. ಶಿವಕುಮಾರ್ ನಂಬಿದವರನ್ನು ಮಂತ್ರಿ ಮಾಡಿದರೆ ಅವರ ಛಾಪು ಇದೆ ಎನ್ನಬಹುದು. ಇಲ್ಲವಾದರೆ ಡಿಕೆಶಿ ಛಾಪು ಇಲ್ಲ ಎಂದೇ ಅರ್ಥ ಎಂದಿದ್ದಾರೆ.

ಮಾಜಿ ಪ್ರಧಾನಿ ದೇವೇಗೌಡರಿಗೆ ರಾಜ್ಯಸಭಾ ಸ್ಥಾನ ನೀಡದೇ ಬಿಜೆಪಿ ಅಪಮಾನ ಮಾಡಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಆರೋಪಕ್ಕೆ ಪ್ರತಿಕ್ರಿಯಿಸಿದ ಬೊಮ್ಮಾಯಿ, ಸುರ್ಜೆವಾಲಾಗೆ ಕರ್ನಾಟಕದ ರಾಜಕೀಯ ಗೊತ್ತಿಲ್ಲ. ಮತ್ತು ಜಾಣ ಮರೆವು ಇದೆ. ದೇವೇಗೌಡರನ್ನು ಪ್ರಧಾನ ಮಂತ್ರಿ ಸ್ಥಾನದಿಂದ ಇಳಿಸಿದ್ದು ಕಾಂಗ್ರೆಸ್. ಅದಕ್ಕಿಂತ ದೊಡ್ಡ ಅವಮಾನ ಇನ್ನೊಂದಿಲ್ಲ. ಎರಡು ಬಾರಿ ಕುಮಾರಸ್ವಾಮಿ ಜೊತೆ ಸರ್ಕಾರ ಮಾಡಿ ಅವರಿಗೆ ಕೈಕೊಟ್ಟಿರುವುದು ಎಲ್ಲರಿಗೂ ಗೊತ್ತಿದೆ. ಅದಕ್ಕೆ ಕುಮಾರಸ್ವಾಮಿಯವರೂ ಉತ್ತರ ಕೊಟ್ಟಿದ್ದಾರೆ. ದೇವೇಗೌಡರ ಬಗ್ಗೆ ಬಿಜೆಪಿ ಹೈಕಮಾಂಡ್ ಚಿಂತನೆ ಮಾಡುತ್ತಿದೆ. ಖಂಡಿತವಾಗಿಯೂ ಅವರಿಗೆ ಯಾವ ಸಂದರ್ಭದಲ್ಲಿ ಗೌರವ ಸ್ಥಾನ ಕೊಡಬೇಕೊ ಅದನ್ನು ಮಾಡಲಾಗುವುದು ಎಂದಿದ್ದಾರೆ.

## ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಕಡಿತ ಮಾಡಬೇಕು

ಕೇಂದ್ರ ಸರ್ಕಾರ ಪೆಟ್ರೋಲ್, ಡಿಸೇಲ್ ದರ ಹೆಚ್ಚಳ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ, ಇನ್ನೂ ಎರಡು ವಾರದಲ್ಲಿ ಮಧ್ಯಪ್ರಾಚ್ಯ ಯುದ್ಧ ಮುಗಿಯಲಿದೆ ನಂತರ ಎಲ್ಲವೂ ಸರಿಯಾಗಲಿದೆ. ಅಂತರಾಷ್ಟ್ರೀಯ ಮಟ್ಟದಲ್ಲಿ ತೈಲ ಬಿಕ್ಕಟ್ಟು ಉಂಟಾಗಿರುವುದರಿಂದ ಈ ಪರಿಸ್ಥಿತಿ ನಿರ್ಮಾಣವಾಗಿದೆ. ರಾಜ್ಯ ಸರ್ಕಾರ ಪೆಟ್ರೋಲ್, ಡಿಸೇಲ್ ಮೇಲಿನ ತೆರಿಗೆ ಕಡಿತ ಮಾಡಿ ದರ ಇಳಿಸಬೇಕು. ನಾನು ಸಿಎಂ ಆಗಿದ್ದಾಗ 7 ರೂಪಾಯಿ ಕಡಿತ ಮಾಡಿದ್ದೇ. ಅದೇ ರೀತಿ ರಾಜ್ಯ ಸರ್ಕಾರ ಕಡಿಮೆ ಮಾಡಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಸರ್ಕಾರ ನೈಯಾಪೈಸೆ ಕಡಿಮೆ ಮಾಡಿಲ್ಲ. ಅದರ ಬದಲು ತೆರಿಗೆ ಹೆಚ್ಚಳ ಮಾಡಿ ಬೇರೆಯವರ ಮೇಲೆ ಬೊಟ್ಟು ಮಾಡುತ್ತಾರೆ. ದೇಶದಲ್ಲೇ ಪೆಟ್ರೋಲ್, ಡಿಸೇಲ್ ಮೇಲೆ ಅತೀ ಹೆಚ್ಚು ತೆರಿಗೆ ಕರ್ನಾಟಕ ಸರ್ಕಾರ ಹೇರುತ್ತಿದೆ. ಅದನ್ನು ಕಡಿಮೆ ಮಾಡಿದರೆ ಜನರಿಗೆ ಅನಕೂಲ ಆಗುತ್ತದೆ. ರಾಜ್ಯ ಸರ್ಕಾರಕ್ಕೆ ಆರ್ಥಿಕ ಸಂಕಷ್ಟ ಇದೆ ಅದನ್ನು ಒಪ್ಪಿಕೊಳ್ಳುವುದಿಲ್ಲ. ಜನರ ಬಗ್ಗೆ ಕಳಕಳಿ ಇದ್ದರೆ ರಾಜ್ಯದ ಪಾಲಿನ ತೆರಿಗೆ ಕಡಿಮೆ ಮಾಡುತ್ತಾರೆ ಎಂದು ಹೇಳಿದರು.

# ಪರಿಹಾರ ನೀಡದ ಕೆಕೆಆರ್‌ಟಿಸಿ: ಬಸ್ ಜಪ್ತಿ




**ಬೀದರ್, ಜೂ.9:** ನ್ಯಾಯಾಲಯದ ಆದೇಶ ಪಾಲಿಸಲು ಹಿಂದೇಟು ಹಾಕಿದ್ದರಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ (ಕೆಕೆಆರ್‌ಟಿಸಿ) ಬೀದರ್ ವಿಭಾಗಕ್ಕೆ ಸೇರಿದ ಬಸ್ ಅನ್ನು ಜಪ್ತಿ ಮಾಡಲಾಗಿದೆ. ಬೀದರ್ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಆದೇಶದ ಮೇರೆಗೆ ಬಸ್ ಜಪ್ತಿ ಮಾಡಿ ನ್ಯಾಯಾಲಯದ ಆವರಣದಲ್ಲಿ ತಂದು ನಿಲ್ಲಿಸಲಾಗಿದೆ.

ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಅಂಬೆಸಾಂಗವಿ ಕ್ರಾಸ್ ಬಳಿ ಕಳೆದ 2021ರ ಆಗಸ್ಟ್ 15ರಂದು ನಡೆದ ರಸ್ತೆ ಅಪಘಾತದಲ್ಲಿ ರೇಖಾ ಸುನೀಲ್ (35) ಎಂಬುವರು ಮೃತಪಟ್ಟಿದ್ದರು. ಕೆಕೆಆರ್‌ಟಿಸಿ ಪರಿಹಾರ ನೀಡುವಂತೆ ಅವರ ಕುಟುಂಬದ ಸದಸ್ಯರು ನ್ಯಾಯಾಲಯದ ಮೊರೆ ಹೋಗಿದ್ದರು.

ನ್ಯಾಯಾಲಯವು 22.50 ಲಕ್ಷ ಪರಿಹಾರ ನೀಡಬೇಕೆಂದು 2025ರ ಅಕ್ಟೋಬರ್‌ನಲ್ಲಿ ಆದೇಶ ನೀಡಿತ್ತು. ಆದರೆ, ಕೆಕೆಆರ್‌ಟಿಸಿ ಬೀದರ್ ವಿಭಾಗದ ಅಧಿಕಾರಿಗಳು ಪರಿಹಾರ ನೀಡಿರಲಿಲ್ಲ. ಇದರಿಂದ ರೇಖಾ ಕುಟುಂಬದವರು ಪುನಃ ನ್ಯಾಯಾಲಯಕ್ಕೆ ಮೊರೆಹೋಗಿದ್ದರು. ಪರಿಹಾರ ನೀಡದೆ ನ್ಯಾಯಾಲಯದ ಆದೇಶ ಪಾಲಿಸದ ಕಾರಣ ಬಸ್ ಜಪ್ತಿಗೆ ನ್ಯಾಯಾಲಯ ಆದೇಶಿಸಿತ್ತು. ಅದರಂತೆ ಇದೀಗ ಬಸ್ ಜಪ್ತಿ ಮಾಡಿ ನ್ಯಾಯಾಲಯದ ಆವರಣದಲ್ಲಿ ತಂದು ನಿಲ್ಲಿಸಲಾಗಿದೆ.

# ವಿಪತ್ತು ನಿರ್ವಹಣೆ: ಮಡಿಕೇರಿಗೆ ಆಗಮಿಸಿದ ಎನ್‌ಡಿಆರ್‌ಎಫ್ ತಂಡ



ಮಡಿಕೇರಿ, ಜೂ.9: ನಗರದ ಜಿಲ್ಲಾ ಸಹಕಾರ ತರಬೇತಿ ಸಂಸ್ಥೆಯ ವಸತಿ ನಿಲಯದಲ್ಲಿ ವ್ಯಾಸ್ತವ್ಯ ಹೂಡಿರುವ ರಾಷ್ಟ್ರೀಯ ವಿಪತ್ತು ನಿರ್ವಹಣಾ ತಂಡದ (ಎನ್‌ಡಿಆರ್‌ಎಫ್) ಅಧಿಕಾರಿಗಳನ್ನು ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಮಂಗಳವಾರ ಭೇಟಿ ಮಾಡಿ ಮಾಹಿತಿ ಪಡೆದರು.

ಜಿಲ್ಲೆಯ ಸೂಕ್ಷ್ಮ ಹಾಗೂ ಪ್ರವಾಹ ಪೀಡಿತ ಪ್ರದೇಶಗಳನ್ನು ವೀಕ್ಷಿಸಿ, ತುರ್ತು ಸಂದರ್ಭದಲ್ಲಿ ಜನ-ಜಾನುವಾರು ರಕ್ಷಣೆ ಮಾಡುವಲ್ಲಿ ಎನ್‌ಡಿಆರ್‌ಎಫ್ ತಂಡ ಕರ್ತವ್ಯ ನಿರ್ವಹಿಸಲಿದೆ. ಬೆಂಗಳೂರಿನ ರೀಜನಲ್ ರೆಸ್ಪಾನ್ಸ್ ಸೆಂಟರ್ (ಆರ್‌ಆರ್‌ಸಿ) 10ನೇ ಬೆಟಾಲಿಯನ್‌ನ ಇನ್ಸ್‌ಪೆಕ್ಟರ್ ರಾಮ್‌ಭಟ್ ನೇತೃತ್ವದಲ್ಲಿ ಎನ್ಡಿಆರ್‌ಎಫ್ ತಂಡ ಆಗಮಿಸಿದ್ದು, ಬೋಟ್‌ಗಳು, ಮರ ಕತ್ತರಿಸುವ ಯಂತ್ರ, ರ್‍ಯಾಫ್ಟ್, ಹಗ್ಗ, ಟೆಂಟ್, ಜೀವರಕ್ಷಕ ಜಾಕೆಟ್, ಸರ್ಚ್ ಲೈಟ್, ಆಕ್ಸಿಜನ್ ಜನರೇಟರ್, ಜೀವರಕ್ಷಕ ಔಷಧಗಳ ಸಿಗ್ನಲ್ ಯೂನಿಟ್‌ಗಳು ಹೀಗೆ ಪರಿಕರಗಳನ್ನು ತಂಡ ಒಳಗೊಂಡಿದೆ.

ಈಗಾಗಲೇ ಜಿಲ್ಲೆಯಲ್ಲಿ ಮುಂಗಾರು ಆರಂಭವಾಗಿದ್ದು, ಸಾಧಾರಣ ಮಳೆಯಾಗುತ್ತಿದೆ. ಈ ಹಿನ್ನೆಲೆ ಮುಂದಿನ ದಿನಗಳಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇದ್ದು, ಪ್ರತೀ ವರ್ಷದಂತೆ ಈ ವರ್ಷವೂ ಎನ್‌ಡಿಆರ್‌ಎಫ್ ತಂಡ ಕೊಡಗು ಜಿಲ್ಲೆಗೆ ಆಗಮಿಸಿದ್ದು, ಸೂಕ್ಷ್ಮ ಹಾಗೂ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ, ಮಾಹಿತಿ ಪಡೆಯಲಿದೆ. ಈ ಬಾರಿ ಶ್ವಾನ ದಳವೂ ಆಗಮಿಸಿದ್ದು, ಹೆಚ್ಚಿನ ಮಳೆಯಿಂದ ಯಾವುದಾದರೂ ಅವಘಡಗಳು ಸಂಭವಿಸಿದಲ್ಲಿ ಪತ್ತೆ ಹಚ್ಚಲು ಶ್ವಾನ ಸಹಾಯಕವಾಗಲಿದೆ.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಗೊಳಿಸಿ: ಅಧಿಕಾರಿಗಳಿಗೆ ವಿಜಯಪುರ ಡಿಸಿ ಸೂಚನೆ

**ವಿಜಯಪುರ,ಜೂ.9:** ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಕಾರ್ಯವನ್ನು ಯಶಸ್ವಿಗೊಳಿಸಲು ಮತ್ತು ಆರೋಗ್ಯಯುತ ಮತದಾರರ ಪಟ್ಟಿಯನ್ನು ಅಂತಿಮಗೊಳಿಸುವಲ್ಲಿ ನಿಯಮಾನುಸಾರ ಅವಶ್ಯಕ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಕಾರ್ಯ ಜೂ.20 ರಿಂದ ಪ್ರಾರಂಭವಾಗಲಿದ್ದು, ಅಷ್ಟರೊಳಗಾಗಿ, ಜಿಲ್ಲೆಯ ಎಲ್ಲ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನೀಡುವುದು ಅತಿ ಅವಶ್ಯಕವಾಗಿದ್ದು, ಇದರ ಪೂರ್ವಭಾವಿಯಾಗಿ ತಾಲೂಕಾವಾರು ತರಬೇತುದಾರರಿಗೆ ತರಬೇತಿಯನ್ನು ಏರ್ಪಡಿಸಲಾಗಿದೆ ಎಂದ ಅವರು, ಇಲ್ಲಿ ಪೂರ್ಣ ಪ್ರಮಾಣದ ತರಬೇತಿ ಪಡೆದುಕೊಂಡು ಪರಿಣಾಮಕಾರಿಯಾಗಿ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿಯನ್ನು ನೀಡಬೇಕು ಎಂದರು.

2002ರ ಮತದಾರರ ಪಟ್ಟಿಯನ್ನು 2025ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಕಾರ್ಯ ಕೈಗೊಳ್ಳುವ ಕುರಿತು ಈಗಾಗಲೇ ಹಲವಾರು ಬಾರಿ ವಿಡಿಯೋ ಸಂವಾದಗಳ ಮೂಲಕ ಮತ್ತು ಸಭೆಗಳನ್ನು ಜರುಗಿಸುವುದರ ಮೂಲಕ ಮತ್ತು ಪತ್ರಗಳ ಮೂಲಕ ನಿಮಗೆ ಸೂಚಿಸಲಾಗಿದ್ದು, ಮ್ಯಾಪಿಂಗ್ ಕಾರ್ಯವು ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಅತೀ ಮಹತ್ವಾದ್ದಾಗಿದ್ದು, ಈ ನಿಟ್ಟಿಯಲ್ಲಿ ಎಲ್ಲ ಮತಗಟ್ಟೆಗಳಲ್ಲಿ ಶೇ.90 ಕ್ಕಿಂತ ಹೆಚ್ಚಿನ ಪ್ರಗತಿ ಸಾಧಿಸಬೇಕು ಎಂದರು.


ಜಿಲ್ಲೆಯ ಎಲ್ಲ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನೀಡಲು, ಬಿಎಲ್‌ಒ ಫೆಸಿಲೇಶನ್ ಕೇಂದ್ರ ಮತ್ತು ಮತದಾರರ ಫೆಸಿಲಿಟೇಶನ್ ಕೇಂದ್ರಗಳನ್ನು ಸ್ಥಾಪಿಸಲು, ರಾಜಕೀಯ ಪಕ್ಷಗಳ ಸಭೆ ಕರೆದು ಅವರಿಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ತಿಳುವಳಿಕೆ ನೀಡಬೇಕು ಎಂದರು, ಮತಗಟ್ಟೆ ಅಧಿಕಾರಿಗಳಿಗೆ ನೀಡಿದ ಗಣತಿ ಫಾರ್ಮ್‌ಗಳನ್ನು ಪೂರ್ಣ ಪ್ರಮಾಣದಲ್ಲಿ ಹಿಂದಿರಿಗಿಸಿದ ಬಗ್ಗೆ ಪರಿಶೀಲಿಸಲು ಮತ್ತು ಹಿಂದಿರುಗದ ಗಣತಿ ಫಾರ್ಮಗಳ ಕುರಿತು ವಿಚಾರಣೆಯನ್ನು ಕೈಗೊಳ್ಳಲು ಮತ್ತು ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡುವ ಪೂರ್ವದಲ್ಲಿ ಅವಶ್ಯಕ ಎಲ್ಲ ಮುನ್ನೆಚ್ಚರಿಕೆಗಳನ್ನು



ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಜಿಲ್ಲೆಯ ಎಲ್ಲ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು ಮತ್ತು ಮತಕ್ಷೇತ್ರದ ತರಬೇತುದಾರರಿಗೆ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜ್ ಉಪನ್ಯಾಸಕರಾದ ಮಹಾವೀರ ರಜಪೂತ ಹಾಗೂ ಆರ್.ಸಿ. ಹಿರೇಮಠ ಅವರು ತರಬೇತಿ ನೀಡಿದರು.

ತರಬೇತಿಯಲ್ಲಿ ಅಪರ ಜಿಲ್ಲಾಧಿಕಾರಿ ಔದ್ರಾಮ, ಮತದಾರರ ನೋಂದಣಾಧಿಕಾರಿಗಳಾದ ಮ ರಾಜಶೇಖರ ಡಂಬಳ, ವಿನಯ ಪಾಟೀಲ, ಗುರುನಾಥ ದಡ್ಡೆ, ಚಿದಾನಂದ ಗುರುಸ್ವಾಮಿ ಸೇರಿದಂತೆ ವಿಜಯಪುರ ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಜಿಲ್ಲೆಯ ಎಲ್ಲ ತಹಶೀಲದಾರರು ಮತ್ತು ಮತಕ್ಷೇತ್ರದ ತರಬೇತುದಾರರು ಹಾಜರಿದ್ದರು.

# ಸಿಎಂ ನೇತೃತ್ವದಲ್ಲಿ ಕಾಮಗಾರಿಗಳ ಉದ್ಘಾಟನೆ: ಶಾಸಕ ನಾರಾ ಭರತ್‌ರೆಡ್ಡಿ



**ಬಳ್ಳಾರಿ, ಜೂ.09:** ಬಳ್ಳಾರಿ ನಗರದಲ್ಲಿ ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳನ್ನು ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ಶೀಘ್ರ ಉದ್ಘಾಟಿಸಲಾಗುವುದು ಎಂದು ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಮಂಗಳವಾರ ಬಳ್ಳಾರಿಯ 14ನೇ ವಾರ್ಡಿನಲ್ಲಿ ಸಲಾಂ ಬಳ್ಳಾರಿ ಹಾಗೂ ಕಿಚನ್ ಕಿಟ್ ವಿತರಣೆಗೆ ಚಾಲನೆ ನೀಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಗಡಿಗಿ ಚನ್ನಪ್ಪ ವೃತ್ತ, ಮಹರ್ಷಿ ವಾಲ್ಮೀಕಿಯವರ ಪುತ್ಥಳಿ ಸೇರಿದಂತೆ ಈವರೆಗೆ ಪೂರ್ಣಗೊಂಡಿರುವ ರಸ್ತೆ ಮತ್ತಿತರ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಲಾಗುವುದು ಎಂದರು.

ಅಲ್ಲದೇ ಶಾಶ್ವತ ಕುಡಿಯುವ ನೀರಿನ ಯೋಜನೆಯ 270 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾಥಮಿಕ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಹೇಳಿದ ಅವರು, ಪ್ರತಿ ವಾರ್ಡಿಗೆ ತಲಾ 2.50 ಕೋಟಿ ರೂ.ಗಳ ಅನುದಾನ ಮಂಜೂರಾಗಿದ್ದು, ಬಳ್ಳಾರಿಯ ಒಳ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು.

ಅಂಡರ್‌ಪಾಸ್ ನಿರ್ಮಾಣ ಆಗಿ ಒಂದು ವರ್ಷದಲ್ಲಿ ಬಹಳ ಸಲ ಮಳೆ ಆಗಿದೆ, ಆಗ ಅಂಡರ್‌ಪಾಸಿನಲ್ಲಿ ನೀರು ನಿಂತಿರಲಿಲ್ಲ, ಅದನ್ನು ಯಾರೂ ಹೇಳಲಿಲ್ಲ, ಆದರೆ ಮೊನ್ನೆ ಬಂದ ಮಳೆ ಭೀಕರವಾಗಿತ್ತು, ಆದಾಗ್ಯೂ ನೀರು ನಿಲ್ಲಬಾರದು; ನಿಂತವು, ಅದನ್ನೇ ವಿರೋಧ ಪಕ್ಷದವರು ದೊಡ್ಡದು ಮಾಡಿದ್ದಾರೆ ಎಂದರು.

ಮಳೆಯಿಂದ ಈ ಬಾರಿ ಭಾರಿ ಪ್ರಮಾಣದ ಹಾನಿಯಾಗಿದೆ, ಪಾಲಿಕೆಯ ಅಧಿಕಾರಿಗಳು, ಜೆಸ್ಕಾಂನ ಅಧಿಕಾರಿ ಹಾಗೂ ಸಿಬ್ಬಂದಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ ಎಂದು ಹೇಳಿದ ಶಾಸಕ ನಾರಾ ಭರತ್ ರೆಡ್ಡಿ, ವಿದ್ಯುತ್ ಸಂಪರ್ಕದ ಮಾರ್ಗಗಳು, ಕಂಬಗಳು ಹಳತಾಗಿವೆ, ಶೀಘ್ರ ಬದಲಿಸಲಾಗುವುದು ಎಂದರು.

# ಭಕ್ತರಿಗೆ ಉತ್ತಮ ಗುಣಮಟ್ಟದ ಅನ್ನ ಪ್ರಸಾದವನ್ನು ಒದಗಿಸುವ ಗುರಿ: ಟಿಟಿಡಿ

**ರೈಸ್ ಮಿಲ್ಲರ್ಸ್ ಸಭೆಯಲ್ಲಿ ಟಿಟಿಡಿ ಹೆಚ್ಚುವರಿ ಇಒ**

**ಅನ್ನ ಪ್ರಸಾದದ ಗುಣಮಟ್ಟವನ್ನು ಶ್ಲಾಘಿಸಿದ ಭಕ್ತರು**

**ತಿರುಮಲ ಜೂ 09.** ಕಲಿಯುಗದ ಜೀವಂತ ದೇವರು ಎಂದು ಹೆಸರುವಾಸಿಯಾದ ಶ್ರೀ ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆಯಲು ತಿರುಮಲಕ್ಕೆ ಭೇಟಿ ನೀಡುವ ಭಕ್ತರಿಗೆ ಉತ್ತಮ ಗುಣಮಟ್ಟದ ಅನ್ನ ಪ್ರಸಾದವನ್ನು ಒದಗಿಸುವುದು ಟಿಟಿಡಿಯ ಮುಖ್ಯ ಗುರಿಯಾಗಿದೆ ಎಂದು ಟಿಟಿಡಿ ಹೆಚ್ಚುವರಿ ಇಒ ಶ್ರೀ ಸಿ.ಎಚ್. ??ವೆಂಕಯ್ಯ ಚೌಧರಿ ಹೇಳಿದರು. ಮಂಗಳವಾರ ಬೆಳಿಗ್ಗೆ ತಿರುಮಲದ ಶ್ರೀ ಪದ್ಮಾವತಿ ಅತಿಥಿ ಗೃಹದ ಸುಧರ್ಮ ಸಮ್ಮೇಳನ ಸಭಾಂಗಣದಲ್ಲಿ ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಅಕ್ಕಿ ಮತ್ತು ಬೇಳೆ ಗಿರಣಿದಾರರೊಂದಿಗೆ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಕ್ತರ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ಗುಣಮಟ್ಟದ ಕಚ್ಚಾ ವಸ್ತುಗಳ ಪೂರೈಕೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು ಎಂದು ಸ್ಪಷ್ಟಪಡಿಸಿದರು. ಮಾತೃಶ್ರೀ ತರಿಗೊಂಡ ವೆಂಗಮಾಂಬ ಅನ್ನಪ್ರಸಾದ ಕೇಂದ್ರದಲ್ಲಿ ಇತ್ತೀಚೆಗೆ ಭಕ್ತರಲ್ಲಿ ನಡೆಸಿದ ಸಮೀಕ್ಷೆಯಲ್ಲಿ, ಶೇ. 98 ಕ್ಕೂ ಹೆಚ್ಚು ಭಕ್ತರು ನೀಡಲಾಗುತ್ತಿರುವ



ಅನ್ನಪ್ರಸಾದದ ರುಚಿ ಮತ್ತು ಗುಣಮಟ್ಟವು ಹಿಂದಿನದಕ್ಕೆ ಹೋಲಿಸಿದರೆ ಗಮನಾರ್ಹವಾಗಿ ಸುಧಾರಿಸಿದೆ ಎಂದು ಹೇಳಿದ್ದಾರೆ ಎಂದು ಹೆಚ್ಚುವರಿ ಇಒ ಹೇಳಿದರು.

ಅಲ್ಲದೆ, ಸೋಮವಾರ ರಾತ್ರಿ, ಅಕ್ಕಿ ಗಿರಣಿದಾರರು ಸ್ವತಃ ಅನ್ನಪ್ರಸಾದ ಕೇಂದ್ರದಲ್ಲಿ ಭಕ್ತರೊಂದಿಗೆ ಮಾತನಾಡಿ ಅವರ ಅಭಿಪ್ರಾಯಗಳನ್ನು ಪಡೆದರು, ಮತ್ತು ಹೆಚ್ಚಿನ ಶೇಕಡಾವಾರು ಭಕ್ತರು ಅನ್ನಪ್ರಸಾದದ ಗುಣಮಟ್ಟ ಮತ್ತು ರುಚಿಯ ಬಗ್ಗೆ ಸಂಪೂರ್ಣ ತೃಪ್ತಿ ವ್ಯಕ್ತಪಡಿಸಿದ್ದಾರೆ ಎಂದು ತಿಳಿದುಬಂದಿದೆ.

ಸಮೀಕ್ಷೆಯಲ್ಲಿ, ಕೆಲವು ಭಕ್ತರು ಅನ್ನಪ್ರಸಾದದ ಜೊತೆಗೆ ಬೇಳೆಯನ್ನು ಸಹ ನೀಡಿದರೆ ಉತ್ತಮ ಎಂದು ಸೂಚಿಸಿದ್ದಾರೆ ಎಂದು ಅವರು ಹೇಳಿದರು. ಈ ಸಲಹೆಯನ್ನು ಸಕಾರಾತ್ಮಕವಾಗಿ ಪರಿಗಣಿಸಿ, ಸಾಧ್ಯತೆಗಳನ್ನು ಪರಿಶೀಲಿಸಿ, ಅದಕ್ಕೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಹೆಚ್ಚುವರಿ ಇಒ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಟಿಟಿಡಿ ಹೊಸದಾಗಿ ಪರಿಚಯಿಸಿರುವ ಎಂಪನೆಲ್ ವ್ಯವಸ್ಥೆಯ ಮೂಲಕ ಕಚ್ಚಾ ವಸ್ತುಗಳನ್ನು ಖರೀದಿಸುವ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಗುಣಮಟ್ಟದ ಮಾನದಂಡಗಳನ್ನು ಮತ್ತಷ್ಟು ಹೆಚ್ಚಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು. ಈ ವ್ಯವಸ್ಥೆಯ ಮೂಲಕ ಭಕ್ತರಿಗೆ ನೀಡಲಾಗುವ ಅನ್ನಪ್ರಸಾದದ ಗುಣಮಟ್ಟವನ್ನು ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ಗುರಿಯನ್ನು ಅವರು ಹೊಂದಿದ್ದಾರೆ ಎಂದು ಅವರು ಹೇಳಿದರು.

ದಾಲ್ ಅಸೋಸಿಯೇಷನ್ ??ಮೂಲಕ ಟಿಟಿಡಿಗೆ ಅಗತ್ಯವಿರುವ ವಿವಿಧ ರೀತಿಯ ಬೇಳೆಕಾಳುಗಳನ್ನು ಪೂರೈಸುವ ವಿಷಯವನ್ನೂ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ಈ ಸಂದರ್ಭದಲ್ಲಿ, ಟಿಟಿಡಿ ನಿಯಮಗಳು ಮತ್ತು ನಿಯಮಗಳಿಗೆ ಅನುಸಾರವಾಗಿ ಭಕ್ತರಿಗೆ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಒದಗಿಸಲು ಕಾರ್ಯವಿಧಾನಗಳನ್ನು ರೂಪಿಸಲಾಗುತ್ತಿದೆ ಎಂದು ಹೆಚ್ಚುವರಿ ಇಒ ಹೇಳಿದರು.

## ಮತದಾರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ

**ವಿಜಯಪುರ ಜೂ.9** ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಕುರಿತ ಸಾರ್ವಜನಿಕರ ಅನುಕೂಲಕ್ಕಾಗಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮತದಾರರ ಸಹಾಯವಾಣಿ ಸಂಖ್ಯೆ-1950 ಪ್ರಾರಂಭಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

# ಮಳೆಗೆ ಹಾನಿಯಾದ ಪ್ರದೇಶಗಳಿಗೆ ಭೇಟಿ ನೀಡಿ ಸಮಸ್ಯೆಗಳನ್ನು ಸರಿಪಡಿಸಿದ ರಾಜೇಶ್ವರಿ

**ಬಳ್ಳಾರಿ, ಜೂ.09.** ಬಳ್ಳಾರಿ ನಗರದ ವಾರ್ಡ್ ನಂಬರ್ 34ರ ತಿಲಕ ನಗರ, ಸಾಯಿಬಾಬಾ ಗುಡಿ ಹತ್ತಿರ ಮತ್ತು ಒಡ್ಡೆ ನಾಗಪ್ಪ ಲೇಔಟ್ ಸುತ್ತ ಮುತ್ತ ಏರಿಯಾದಲ್ಲಿ ಮಳೆಯಿಂದ ಆದ ಸಮಸ್ಯೆಗಳ ಬಗ್ಗೆ ಮಾಜಿ ಮಹಾಪೌರರು ಹಾಗೂ ಹಾಲಿ ಸದಸ್ಯೆ ರಾಜೇಶ್ವರಿ ಕೆಲವೊಂದು ಸಮಸ್ಯೆಗಳನ್ನು ಸ್ಥಳದಲ್ಲಿ ಸರಿಪಡಿಸಿ ಉಳಿದ ಪ್ರದೇಶಗಳಲ್ಲಿ ಪಾಲಿಕೆ ಸಿಬ್ಬಂದಿ ಗಳಿಗೆ ಸರಿಪಡಿಸಿಸಲು ತಿಳಿಸಿದರು.



# ಶಿಕ್ಷಕರ ಸಬಲೀಕರಣಕ್ಕಾಗಿ ಬಳ್ಳಾರಿಯಲ್ಲಿ ಶಿಕ್ಷಕರ ಅಭಿವೃದ್ಧಿ ಕಾರ್ಯಕ್ರಮ: ಸಂಪನ್ಮೂಲ ವ್ಯಕ್ತಿಗಳಿಂದ ಮಾರ್ಗದರ್ಶನ

**ಬಳ್ಳಾರಿ, ಜೂ. 09–** ವೀರಶೈವ ವಿದ್ಯಾವರ್ಧಕ ಸಂಘ, ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಎಂಜಿನಿಯರಿಂಗ್ ಕಾಲೇಜು, ಬಳ್ಳಾರಿ 'ಎಂಜಿನಿಯರಿಂಗ್ ಕಾಲೇಜು ಶೈಕ್ಷಣಿಕ ಮತ್ತು ಆಡಳಿತಾತ್ಮಕ ಲೆಕ್ಕಪರಿಶೋಧನೆ (AAA) –ಶಿಕ್ಷಕರನ್ನು ಸಬಲೀಕರಣಗೊಳಿಸುವುದು, ಶಿಕ್ಷಣವನ್ನು ಪರಿವರ್ತಿಸುವುದು' ಶಿಕ್ಷಕರ ಅಭಿವೃದ್ಧಿ ಕಾರ್ಯಕ್ರಮ (ಎಫ್‌ಡಿಪಿ), ಈ ಕಾರ್ಯಕ್ರಮದಲ್ಲಿ, ಆಹ್ವಾನಿತ ಭಾಷಣದ ಸಂಪನ್ಮೂಲ ವ್ಯಕ್ತಿ ಡಾ. ತಿಪ್ಪೇರುದ್ರಪ್ಪ ಜೆ ಪ್ರೊಫೆಸರ್, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿಎಸ್‌ಕೆ, ಬಳ್ಳಾರಿ, ಬಳ್ಳಾರಿಯ ವೀ.ವಿ. ಸಂಘದ ಕಾರ್ಯದರ್ಶಿ ಡಾ. ಅರವಿಂದ್ ಪಟೇಲ್, ಆಡಳಿತ ಮಂಡಳಿ ಸದಸ್ಯರು ಆರ್.ವೈ.ಎಂ.ಇ.ಸಿ – ಪ್ರಭುಸ್ವಾಮಿ ಎಸ್.ಎಂ, ಬಾಡದ ಪ್ರಕಾಶ್, ಪ್ರಾಂಶುಪಾಲರು ಡಾ. ಎಚ್. ಮಹಾಬಲೇಶ್ವರ, ಡೀನ್ ಅಕಾಡೆಮಿಕ್ ಡಾ.ಟಿ.ಹನುಮಂತ ರೆಡ್ಡಿ, ಎಂಜಿನಿಯರಿಂಗ್ ವಿಭಾಗೀಯ ಮುಖ್ಯಸ್ಥರು, ಆರ್.ವೈ.ಎಂ.ಇ.ಸಿ, ಬಳ್ಳಾರಿಯ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು, ಇವರ ಉಪಸ್ಥಿತಿಯಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ ಡಾ. ತಿಪ್ಪೇರುದ್ರಪ್ಪ ಜೆ , ಪ್ರೊಫೆಸರ್, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿಎಸ್‌ಕೆ ಬಳ್ಳಾರಿ, 'ಅಕಾಡೆಮಿಕ್ ಅಂಡ್ ಅಡ್ಮಿನಿಸ್ಟ್ರೇಟಿವ್ ಆಡಿಟ್ (AAA) ಶೈಕ್ಷಣಿಕ ಮತ್ತು ಆಡಳಿತಾತ್ಮಕ ಲೆಕ್ಕಪರಿಶೋಧನೆ' ಎಂದರೆ ಕೇವಲ ತಪ್ಪುಗಳನ್ನು ಹುಡುಕುವ ಪ್ರಕ್ರಿಯೆಯಲ್ಲ; ಇದು ಸಂಸ್ಥೆಯ ಸಮಗ್ರ ಆರೋಗ್ಯವನ್ನು ಮೌಲ್ಯಮಾಪನ ಮಾಡುವ ಒಂದು ವ್ಯವಸ್ಥಿತ ಪರಿಶೀಲನೆಯಾಗಿದೆ. ಇದು ಸಂಸ್ಥೆಗೆ ತನ್ನ ನೈಜ ಸ್ಥಿತಿಗತಿಗಳನ್ನು ಅರಿಯಲು ನೆರವಾಗುವ ಕನ್ನಡಿಯಾಗಿದ್ದು, ಸುಧಾರಣೆಯ ದಿಕ್ಕನ್ನು ತೋರಿಸುವ ದಿಕ್ಸೂಚಿಯಾಗಿದೆ. ಜೊತೆಗೆ, ಪ್ರಸ್ತುತ ಕಾರ್ಯನಿರ್ವಹಣೆ ಮತ್ತು ಭವಿಷ್ಯದ ಶ್ರೇಷ್ಠತೆಯ ನಡುವಿನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಶೈಕ್ಷಣಿಕ ಗುಣಮಟ್ಟದ ಭರವಸೆ (ಕ್ವಾಲಿಟಿ ಅಶ್ಯೂರೆನ್ಸ್) ಇಂದು ಅತ್ಯಂತ ಮಹತ್ವದ್ದಾಗಿದೆ. ಇದಕ್ಕೆ ಪ್ರಮುಖ ಕಾರಣಗಳೆಂದರೆ ಜಾಗತಿಕ ಸ್ಪರ್ಧೆ, ವಿದ್ಯಾರ್ಥಿಗಳ ಉದ್ಯೋಗಸಾಧ್ಯತೆ ಹೆಚ್ಚಿಸುವ ಅಗತ್ಯ, ಮಾನ್ಯತಾ ಸಂಸ್ಥೆಗಳ ಅವಶ್ಯಕತೆಗಳನ್ನು ಪೂರೈಸುವುದು ಹಾಗೂ ವಿವಿಧ ಪಾಲುದಾರರ ತೃಪ್ತಿಯನ್ನು ಖಚಿತಪಡಿಸಿಕೊಳ್ಳುವುದು, ಶೈಕ್ಷಣಿಕ ಲೆಕ್ಕಪರಿಶೋಧನೆ–ಇದು ತಾಂತ್ರಿಕ ಶಿಕ್ಷಣದ ಗುಣಮಟ್ಟ, ಬೋಧನೆ–ಕಲಿಕಾ ಪ್ರಕ್ರಿಯೆಗಳು ಮತ್ತು ಶೈಕ್ಷಣಿಕ ಪರಿಸರ ವ್ಯವಸ್ಥೆಯನ್ನು ಮೌಲ್ಯಮಾಪನ ಮಾಡುತ್ತದೆ. ಪಠ್ಯಕ್ರಮ ವಿನ್ಯಾಸ, ಬೋಧನಾ ಗುಣಮಟ್ಟ, ವಿದ್ಯಾರ್ಥಿಗಳ ಕಾರ್ಯಕ್ಷಮತೆ, ಸಂಶೋಧನೆ ಮತ್ತು ನಾವೀನ್ಯತೆ, ಮೌಲ್ಯಮಾಪನಗಳು ,ಆಡಳಿತಾತ್ಮಕ ಲೆಕ್ಕಪರಿಶೋಧನೆ – ಇದು ಸಂಸ್ಥೆಯ ಶೈಕ್ಷಣಿಕೇತರ ಮತ್ತು ಪೋಷಕ ಇಲಾಖೆಗಳ ದಕ್ಷತೆ, ಕಾರ್ಯಕ್ಷಮತೆ ಮತ್ತು ಆಡಳಿತವನ್ನು ಪರಿಶೀಲಿಸುತ್ತದೆ. –ಸಂಪನ್ಮೂಲ ನಿರ್ವಹಣೆ, ಮೂಲ ಸೌಕರ್ಯ ಮತ್ತು ಸೌಲಭ್ಯಗಳು, ಮಾನವ ಸಂಪನ್ಮೂಲ ಮತ್ತು ಸಿಬ್ಬಂದಿ, ಆಡಳಿತ ಮತ್ತು ನೀತಿಗಳು' ಅವರು ವಿವರಿಸಿದರು.




ವಿ.ವಿ. ಸಂಘದ ಕಾರ್ಯದರ್ಶಿ ಡಾ. ಅರವಿಂದ್ ಪಟೇಲ್ ಅವರು ಅಧ್ಯಾಪಕರನ್ನು ಉದ್ದೇಶಿಸಿ ಮಾತನಾಡುತ್ತಾ, "ನಿಮ್ಮಲ್ಲಿ ಹೆಚ್ಚಿನವರಿಗೆ ಆಡಿಟಿಂಗ್ (ಲೆಕ್ಕ ಪರಿಶೋಧನೆ) ಪ್ರಕ್ರಿಯೆಗಳು ಹೇಗೆ ನಡೆಯುತ್ತವೆ ಎಂಬುದು ಈಗಾಗಲೇ ತಿಳಿದಿದೆ.

ಆದರೆ ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಅದರ ಅನುಷ್ಠಾನಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತಿಲ್ಲ. ಇದು ಅತ್ಯಂತ ಪ್ರಮುಖವಾದ ವಿಷಯವಾಗಿದ್ದು, ಬೋಧನೆ–ಕಲಿಕೆಯ ಪ್ರಕ್ರಿಯೆಯ ಗುಣಮಟ್ಟವನ್ನು ಹೆಚ್ಚಿಸುವುದರ ಜೊತೆಗೆ ವಿದ್ಯಾರ್ಥಿಗಳನ್ನು ಉತ್ತಮ ಎಂಜಿನಿಯರಿಂಗ್ ಪದವೀಧರರನ್ನಾಗಿ ರೂಪಿಸುತ್ತದೆ. ಇದರ ಪರಿಣಾಮವಾಗಿ ಸಮಾಜದ ಅಭಿವೃದ್ಧಿಗೂ ಕೊಡುಗೆ ನೀಡುತ್ತದೆ. ಸ್ವಯಂ ಮೌಲ್ಯಮಾಪನ ಹಾಗೂ ಸ್ವಯಂ ಲೆಕ್ಕಪರಿಶೋಧನೆ ಪ್ರತಿಯೊಬ್ಬ ವ್ಯಕ್ತಿಗೆ, ಪ್ರತಿಯೊಂದು ವಿಭಾಗಕ್ಕೆ, ಸಂಸ್ಥೆಗೆ ಹಾಗೂ ಆಡಳಿತ ವ್ಯವಸ್ಥೆಗೂ ಅಗತ್ಯವಾಗಿದೆ. ಆದ್ದರಿಂದ ಈ ತರಬೇತಿ ಕಾರ್ಯಕ್ರಮಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಇವು ಕೇವಲ ಮಾನ್ಯತೆ (Accreditation) ಪಡೆಯುವ ಉದ್ದೇಶಕ್ಕಷ್ಟೇ ಸೀಮಿತವಾಗಿರಬಾರದು. ಬದಲಾಗಿ, ಅವುಗಳನ್ನು ನಿರಂತರವಾಗಿ ಅನುಷ್ಠಾನಗೊಳಿಸಬೇಕು. ಹೀಗೆ ಮಾಡುವುದರಿಂದ ನಾವು ಯಾವ ಕ್ಷೇತ್ರದಲ್ಲಿ ಕೊರತೆ ಹೊಂದಿದ್ದೇವೆ ಎಂಬುದನ್ನು ಗುರುತಿಸಿ, ಅದನ್ನು ಸರಿಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬಹುದು" ಎಂದು ಹೇಳಿದರು.

# ಕಲ್ಪವೃಕ್ಷ ವಾಹನದಲ್ಲಿ ಕಾಳಿಯಮರ್ದನನಾಗಿ ದಿವ್ಯ ದರ್ಶನ ಭಕ್ತರನ್ನು ಮೋಡಿಮಾಡಿದ ವೇಣುಗೋಪಾಲಸ್ವಾಮಿ


**ತಿರುಪತಿ, ಜೂ 09.** ಶ್ರೀ ರುಕ್ಮಿಣಿ–ಸತ್ಯಭಾಮ ಸಮೇತ ಕರ್ವೇತಿನಗರಂ ಶ್ರೀ ವೇಣುಗೋಪಾಲ ಸ್ವಾಮಿಯ ವಾರ್ಷಿಕ ಬ್ರಹ್ಮೋತ್ಸವಗಳು ಭಕ್ತಿ ವೈಭವದಿಂದ ಮುಂದುವರಿಯುತ್ತವೆ. ಉತ್ಸವದ ನಾಲ್ಕನೇ ದಿನವಾದ ಮಂಗಳವಾರ ಬೆಳಿಗ್ಗೆ, ಸ್ವಾಮಿಯು ಕಾಳಿಯಮರ್ದನದಿಂದ ಅಲಂಕರಿಸಲ್ಪಟ್ಟ ಕಲ್ಪವೃಕ್ಷ ವಾಹನದಲ್ಲಿ ಆಗಮಿಸಿ ಭಕ್ತರಿಗೆ ದಿವ್ಯ ಮಂಗಳ ದರ್ಶನ ನೀಡಿದರು.

ಸ್ವಾಮಿಯ ವಾಹನ ಸೇವೆಯು ಗ್ರಾಮದ ಬೀದಿಗಳಲ್ಲಿ ಬಹಳ ವೈಭವದಿಂದ ನಡೆಯಿತು. ವಾಹನಕ್ಕೂ ಮುನ್ನ, ಭಕ್ತರ ಗುಂಪುಗಳು ಮರದ ಭಜನೆ ಮತ್ತು ಕೋಲಾಟಗಳನ್ನು ಪ್ರದರ್ಶಿಸಿ, ಗೋವಿಂದ ನಾಮ ಜಪದೊಂದಿಗೆ ಆಧ್ಯಾತ್ಮಿಕ ವಾತಾವರಣವನ್ನು ಸೃಷ್ಟಿಸಿದವು.



ಶುಭ ವಾದ್ಯಗಳ ಘೋಷಗಳ ನಡುವೆ ಭಗವಂತನ ಮೆರವಣಿಗೆಯು ಮೋಡಿಮಾಡುವ ರೀತಿಯಲ್ಲಿ ಸಾಗಿತು, ಮತ್ತು ಭಕ್ತರು ಪ್ರತಿ ಹೆಜ್ಜೆಯಲ್ಲೂ ಕರ್ಪೂರ ಅರ್ಪಿಸುವ ಮೂಲಕ ಭಕ್ತಿಯಿಂದ ಸೇವೆಯಲ್ಲಿ ಭಾಗವಹಿಸಿದರು.

ಪುರಾಣಗಳಲ್ಲಿ, ಕಲ್ಪವೃಕ್ಷವನ್ನು ಎಲ್ಲಾ ಅಪೇಕ್ಷಿತ ವರಗಳನ್ನು ನೀಡುವ ದೈವಿಕ ವೃಕ್ಷವೆಂದು ವಿವರಿಸಲಾಗಿದೆ. ಅಂತಹ ಕಲ್ಪವೃಕ್ಷ ವಾಹನದ ಮೇಲೆ ಕಲಿಯಮರ್ದನ ರೂಪದಲ್ಲಿ ಕಾಣಿಸಿಕೊಂಡ ಶ್ರೀ ವೇಣುಗೋಪಾಲ ಸ್ವಾಮಿ ಭಕ್ತರ ಆಸೆಗಳನ್ನು ಪೂರೈಸಿ ಅವರಿಗೆ ಎಲ್ಲಾ ಐಶ್ವರ್ಯ ಮತ್ತು ಸಂಪತ್ತನ್ನು ನೀಡಿ ಆಶೀರ್ವದಿಸಿದ್ದರಿಂದ ಭಕ್ತರು ಸಂತೋಷಪಟ್ಟರು.


ನಾಡ ಸೇನಾನಿಗೆ
60
ವರ್ಷ
ನಾಡಸೇನಾನಿ, ಕನ್ನಡದ ಕಟ್ಟಾಳು, ಕರವೇ ರಾಜ್ಯಾಧ್ಯಕ್ಷರಾದ
ಶ್ರೀ ಟಿ.ಎ. ನಾರಾಯಣಗೌಡರಿಗೆ
60ನೇ ವರ್ಷದ
ಜನುಮದಿನದ
ಶುಭಾಶಯಗಳು
10 ಜೂನ್
ಶುಭಾಶಯಗಳೊಂದಿಗೆ
ಗ್ಲೋಬಲ್
GLOBAL
EVENTS COMPANY
ಕನ್ನಡವೇ ಸತ್ಯ ರಂಗಣ್ಣ
ಅಭಿಲಾಷ್ ರಂಗನಾಥ್